ಸಂಪುಟ: 11 ಸಂಚಿಕೆ: 158 ಪುಟ: 4+2 ಬೆಲೆ : 3.00 ಭಾನುವಾರ ಜುಲೈ 26, 2026 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್ ಶರೀಫನವರ್

# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ... VIJAYA SAKSHI KANNADA DAILY ಕನ್ನಡ ದಿನಪತ್ರಿಕೆ




Volume : 11 Issue : 158 Pages : 4+2 Rate : 3.00 Sunday July 26, 2026 Gadag RNINo: KARKAN/2015/63412 E-mail: vijayasakshidaily@gmail.com Post Regn.No: GDG/72/2020-22

## ಗದಗ ಪೊಲೀಸರ ಬಲೆಗೆ ಬಿದ್ದ ಅಂತರರಾಜ್ಯ ಕಳ್ಳರ ಗ್ಯಾಂಗ್ | ಲಕ್ಷಾಂತರ ಮೌಲ್ಯದ ಚಿನ್ನ, ಬೆಳ್ಳಿ ವಶ

# ಮುಖಕ್ಕೆ ಮಾಸ್ಕ್... ಕೈಗೆ ಗ್ಲೌಸ್... ಕೊನೆಗೆ ಜೈಲು!

**ವಿಜಯಸಾಕ್ಷಿ ಸುದ್ದಿ, ಗದಗ**

ಮುಖಕ್ಕೆ ಮಾಸ್ಕ್, ಕೈಗೆ ಗ್ಲೌಸ್ ಧರಿಸಿ ಯಾವುದೇ ಸುಳಿವು ಬಿಡದೆ ಲಾಕ್ ಆಗಿದ್ದ ಮನೆಗಳನ್ನು ಟಾರ್ಗೆಟ್ ಮಾಡಿ ಲಕ್ಷಾಂತರ ರೂಪಾಯಿ ಮೌಲ್ಯದ ಚಿನ್ನಾಭರಣ, ಬೆಳ್ಳಿ ಸಾಮಾನು ಹಾಗೂ ನಗದು ದೋಚುತ್ತಿದ್ದ ಅಂತರರಾಜ್ಯ ಖತರ್ನಾಕ್ ಮಾಸ್ಕ್ ಗ್ಯಾಂಗ್ ಅನ್ನು ಗದಗ ನಗರ ಪೊಲೀಸರು ಸಿನಿಮೀಯ ರೀತಿಯ ಕಾರ್ಯಾಚರಣೆಯಲ್ಲಿ ಬಂಧಿಸಿ, ₹42.73 ಲಕ್ಷ ಮೌಲ್ಯದ ಕಳುವಾದ ಆಸ್ತಿಯನ್ನು ವಶಪಡಿಸಿಕೊಂಡಿದ್ದಾರೆ.

ಗದಗ ನಗರದ ಉದಯನಗರದಲ್ಲಿ ನಡೆದಿದ್ದ ಸುಮಾರು ₹44 ಲಕ್ಷ ಮೌಲ್ಯದ ಮನೆಗಳ್ಳತನ ಪ್ರಕರಣವನ್ನು ಭೇದಿಸಿರುವ ಕುರಿತು ಜಿಲ್ಲಾ ಪೊಲೀಸ್ ಅಧೀಕ್ಷಕ ರೋಹನ್ ಜಗದೀಶ್ ಶನಿವಾರ ಪತ್ರಿಕಾಗೋಷ್ಠಿಯಲ್ಲಿ ಮಾಹಿತಿ ನೀಡಿದರು.

ಮೇ 6ರಿಂದ 8ರ ನಡುವಿನ ಅವಧಿಯಲ್ಲಿ ನಗರದ ಉದಯನಗರ 1ನೇ ಕ್ರಾಸ್, ಕ್ಲರ್ಕ್ಸ್ ಇನ್ ಹಿಂಭಾಗದಲ್ಲಿರುವ ಮಂಜುನಾಥ ತಂದೆ ಷಣ್ಮುಖಸಾ ಬಸವಾ ಅವರ ಮನೆಯನ್ನು ಗುರಿಯಾಗಿಸಿಕೊಂಡಿದ್ದ ಕಳ್ಳರು, ಬೀಗ ಮುರಿದು ಮನೆಯೊಳಗೆ ನುಗ್ಗಿ 342 ಗ್ರಾಂ ಚಿನ್ನಾಭರಣ (₹34.20 ಲಕ್ಷ), 1,970 ಗ್ರಾಂ ಬೆಳ್ಳಿ ಸಾಮಾನು (₹2.20 ಲಕ್ಷ) ಹಾಗೂ ₹8.50 ಲಕ್ಷ ನಗದು ದೋಚಿ ಪರಾರಿಯಾಗಿದ್ದರು. ಒಟ್ಟಾರೆ ಸುಮಾರು ₹44.90 ಲಕ್ಷ ಮೌಲ್ಯದ ಕಳ್ಳತನ ನಡೆದಿತ್ತು.

ಈ ಗ್ಯಾಂಗ್ ಕಾರ್ಯಾಚರಣೆಯ ಶೈಲಿಯೇ ವಿಭಿನ್ನವಾಗಿತ್ತು. ಹಗಲು ವೇಳೆಯಲ್ಲಿ ಬೀಗ ಹಾಕಿದ ಮನೆಗಳನ್ನು ಗುರುತಿಸಿ, ರಾತ್ರಿ ವೇಳೆ ಮುಖಕ್ಕೆ ಮಾಸ್ಕ್ ಹಾಗೂ ಕೈಗೆ ಗ್ಲೌಸ್ ಧರಿಸಿ ಕಳ್ಳತನ ನಡೆಸುತ್ತಿದ್ದರು. ಯಾವುದೇ ಬೆರಳಚ್ಚು ಅಥವಾ ಸುಳಿವು ಸಿಗದಂತೆ ಎಚ್ಚರಿಕೆ ವಹಿಸುತ್ತಿದ್ದ ಕಾರಣ ಪ್ರಕರಣ ಭೇದಿಸುವುದು ಪೊಲೀಸರಿಗೆ ಸವಾಲಾಗಿತ್ತು.

ಆದರೆ, ಘಟನಾ ಸ್ಥಳದ ಸಮೀಪದ ಸಿಸಿ ಕ್ಯಾಮೆರಾದಲ್ಲಿ ಸೆರೆಯಾಗಿದ್ದ ಅನುಮಾನಾಸ್ಪದ ಕಾರಿನ ಚಲನವಲನ ತನಿಖೆಗೆ ಮಹತ್ವದ ಸುಳಿವಾಯಿತು. ಅದನ್ನೇ ಆಧಾರವಾಗಿಟ್ಟುಕೊಂಡು ಗದಗ ಪೊಲೀಸರು ವಿವಿಧ ಜಿಲ್ಲೆಗಳಲ್ಲಿ ತಾಂತ್ರಿಕ ಮಾಹಿತಿ ಕಲೆಹಾಕಿ ಕಾರ್ಯಾಚರಣೆ ನಡೆಸಿ, ಅಂತರರಾಜ್ಯ ಕಳ್ಳರ ಜಾಲವನ್ನು ಭೇದಿಸಿದರು.

ಬಂಧಿತ ಆರೋಪಿಗಳನ್ನು ಮಹಮ್ಮದರಫೀಕ್ (36, ಬಂಟ್ವಾಳ - ದಕ್ಷಿಣ ಕನ್ನಡ), ಇಮ್ರಾನ್ ತಿಗಡಿ (40, ಬೈಲಹೊಂಗಲ - ಬೆಳಗಾವಿ) ಹಾಗೂ ಮೌಲಾಲಿ ದರ್ಗಾ (34, ಹಾನಗಲ್ - ಹಾವೇರಿ) ಎಂದು ಗುರುತಿಸಲಾಗಿದೆ.

ವಿಚಾರಣೆ ವೇಳೆ ಆರೋಪಿಗಳು ಉದಯನಗರದ ಮನೆಯಲ್ಲೇ ಕಳ್ಳತನ ನಡೆಸಿರುವುದನ್ನು ಒಪ್ಪಿಕೊಂಡಿದ್ದಾರೆ ಎಂದು ಪೊಲೀಸರು ತಿಳಿಸಿದ್ದಾರೆ.

ಆರೋಪಿಗಳಿಂದ 330 ಗ್ರಾಂ ಚಿನ್ನಾಭರಣ (₹33.33 ಲಕ್ಷ), 750 ಗ್ರಾಂ ಬೆಳ್ಳಿ ಸಾಮಾನು (₹90 ಸಾವಿರ), ಕಳ್ಳತನಕ್ಕೆ ಬಳಸಿದ್ದ ಮಾರುತಿ ಸುಜುಕಿ ಎರ್ಟಿಗಾ ಕಾರು (₹8 ಲಕ್ಷ) ಹಾಗೂ ಕಳುವಿನ ಹಣದಿಂದ ಖರೀದಿಸಿದ್ದ ಮಾರುತಿ ಸುಜುಕಿ ಆಲ್ಟೋ ಎಲ್‌ಎಕ್ಸ್ಐ ಕಾರು (₹50 ಸಾವಿರ) ಸೇರಿದಂತೆ ಒಟ್ಟು ₹42.73 ಲಕ್ಷ ಮೌಲ್ಯದ ಆಸ್ತಿಯನ್ನು ಪೊಲೀಸರು ವಶಪಡಿಸಿಕೊಂಡಿದ್ದಾರೆ. ಬಂಧಿತ ಆರೋಪಿಗಳು ಗದಗ ಜಿಲ್ಲೆ ಮಾತ್ರವಲ್ಲದೆ ರಾಜ್ಯದ ವಿವಿಧ ಜಿಲ್ಲೆಗಳು ಹಾಗೂ ಕೇರಳ, ತಮಿಳುನಾಡಿನಲ್ಲಿಯೂ ಇದೇ ರೀತಿಯ ಕಳ್ಳತನ ಪ್ರಕರಣಗಳಲ್ಲಿ ಭಾಗಿಯಾಗಿರುವ ಮಾಹಿತಿ ತನಿಖೆ ವೇಳೆ ಬೆಳಕಿಗೆ ಬಂದಿದೆ ಎಂದು ಪೊಲೀಸರು ಮಾಹಿತಿ ನೀಡಿದ್ದಾರೆ.




**ಯಾವುದೇ ಸುಳಿವು ಸಿಗದಿದ್ದರೂ ಸಿಸಿ ಕ್ಯಾಮೆರಾದಲ್ಲಿ ಕಂಡುಬಂದ ಕಾರಿನ ಜಾಡು ಹಿಡಿದು ತನಿಖೆ ನಡೆಸಿದ ಪರಿಣಾಮ ಅಂತರರಾಜ್ಯ ಕಳ್ಳರ ಗ್ಯಾಂಗ್ ಬಂಧಿಸಲು ಸಾಧ್ಯವಾಯಿತು. ಆರೋಪಿಗಳ ವಿರುದ್ಧ ಕೋಕಾ ಕಾಯ್ದೆಯಡಿ ಕ್ರಮ ಕೈಗೊಳ್ಳಲಾಗಿದೆ.**

**- ರೋಹನ್ ಜಗದೀಶ್,** ಜಿಲ್ಲಾ ಪೊಲೀಸ್ ಅಧೀಕ್ಷಕರು, ಗದಗ

## ಮಹಾಲಕ್ಷ್ಮೀ ದೇವಸ್ಥಾನ ಕಳ್ಳತನದ ಆರೋಪಿಯೂ ಬಂಧನ

**ಇದೇ ಕಾರ್ಯಾಚರಣೆಯಲ್ಲಿ ಗದಗ ನಗರದ ಹಾತಲಗೇರಿ ನಾಕಾದ ಮಹಾಲಕ್ಷ್ಮೀ ದೇವಸ್ಥಾನ ಕಳ್ಳತನ ಪ್ರಕರಣವನ್ನೂ ಪೊಲೀಸರು ಭೇದಿಸಿದ್ದಾರೆ. ದೇವಿಗೆ ಹಾಕುವ ₹1.25 ಲಕ್ಷ ಮೌಲ್ಯದ ಚಿನ್ನದ ತಾಳಿ, ಬೆಳ್ಳಿಯ ಕಿರೀಟ ಹಾಗೂ ಇತರೆ ಬೆಳ್ಳಿ ವಸ್ತುಗಳನ್ನು ವಶಪಡಿಸಿಕೊಂಡಿದ್ದು, ಈ ಪ್ರಕರಣದಲ್ಲಿ ಮಂಡ್ಯ ಜಿಲ್ಲೆಯ ಪೃಥ್ವಿರಾಜ್ ಎಂಬ ಆರೋಪಿಯನ್ನು ಬಂಧಿಸಿ ನ್ಯಾಯಾಂಗ ಬಂಧನಕ್ಕೆ ಒಪ್ಪಿಸಲಾಗಿದೆ ಎಂದು ಎಸ್ಪಿ ಮಾಹಿತಿ ನೀಡಿದರು.**

## ತನಿಖಾ ತಂಡಕ್ಕೆ ಎಸ್‌ಪಿ ಅಭಿನಂದನೆ

ಪ್ರಕರಣವನ್ನು ಗಂಭೀರವಾಗಿ ಪರಿಗಣಿಸಿದ ಜಿಲ್ಲಾ ಪೊಲೀಸ್ ಅಧೀಕ್ಷಕ ರೋಹನ್ ಜಗದೀಶ್ ಹಾಗೂ ಡಿವೈಎಸ್‌ಪಿ ಮುರ್ತುಜಾ ಖಾದ್ರಿ ಅವರ ಮಾರ್ಗದರ್ಶನದಲ್ಲಿ ವಿಶೇಷ ತನಿಖಾ ತಂಡ ರಚಿಸಲಾಗಿತ್ತು. ನಗರ ಪೊಲೀಸ್ ಠಾಣೆ ಇನ್ಸ್‌ಪೆಕ್ಟರ್ ಸಂಗಮೇಶ ವಿ. ಶಿವಯೋಗಿ, ಬೆಟಗೇರಿ ವೃತ್ತದ ಇನ್ಸ್‌ಪೆಕ್ಟರ್ ಧೀರಜ್ ಶಿಂಧೆ, ಮಹಿಳಾ ಪೊಲೀಸ್ ಠಾಣೆಯ ಇನ್ಸ್‌ಪೆಕ್ಟರ್ ಎಲ್.ಕೆ. ಜೂಲಕಟ್ಟಿ, ಪಿಎಸ್‌ಐ ಬಿ.ಟಿ. ರಿತ್ತಿ, ಪಿಎಸ್‌ಐ ರೇಣುಕಾ ಮುಂಡೇವಾಡಗಿ, ಎಆರ್ ಎಸ್‌ಐ ಗುರು ಬೂದಿಹಾಳ, ಆನಂದ್ ಸಿಂಗ್ ದೊಡ್ಡಮನಿ, ವಿ.ಎಸ್. ಶೆಟ್ಟೆಣ್ಣವರ, ಎಸ್.ಎಸ್. ಮಾವಿನಕಾಯಿ, ಉಮೇಶ್ ಸುಣಗಾರ, ಶರಣಪ್ಪ ನಾಗೇಂದ್ರಗಡ, ಕುಮಾರ ತಿಗರಿ, ಕಲಂದರ್ ನದಾಫ್, ಲಕ್ಷ್ಮೇಶ್ವರ ಠಾಣೆಯ ಸಿಬ್ಬಂದಿ, ಸಂಜೀವ ಕೊರಡೂರು (ಟೆಕ್ನಿಕಲ್ ಸೆಲ್), ಅಣ್ಣಪ್ಪ ಕವಲೂರು, ಹನುಮಂತ ಯಾಡಿಯಾಪೂರ, ಪ್ರಕಾಶ ಉಮಚಗಿ, ವೀರಪ್ಪ ಗೌಡ ನಾಯ್ಕರ, ಗಣೇಶ್ ತಳವಾರ, ಕಾರ್ತಿಕ ಮಂಗಳಿ ಸೇರಿದಂತೆ ನಗರ ಠಾಣೆ, ತಾಂತ್ರಿಕ ವಿಭಾಗ, ಸಿಇಎನ್ ಠಾಣೆ ಹಾಗೂ ಇತರ ಸಿಬ್ಬಂದಿ ನಿರಂತರ ಕಾರ್ಯಾಚರಣೆ ನಡೆಸಿ ಆರೋಪಿಗಳನ್ನು ಬಂಧಿಸುವಲ್ಲಿ ಯಶಸ್ವಿಯಾದರು. ಅಲ್ಪಾವಧಿಯಲ್ಲೇ ಪ್ರಕರಣವನ್ನು ಭೇದಿಸಿದ ತನಿಖಾ ತಂಡದ ಅಧಿಕಾರಿಗಳು ಹಾಗೂ ಸಿಬ್ಬಂದಿಯನ್ನು ಎಸ್‌ಪಿ ರೋಹನ್ ಜಗದೀಶ್ ಅಭಿನಂದಿಸಿದರು.




ವಿಜಯ ಸಾಕ್ಷಿ ದಿನಪತ್ರಿಕೆ ಈಗ ಆನ್ ಲೈನ್ ನಲ್ಲಿಯೂ ಲಭ್ಯ. ನಿಮ್ಮ ನೆಚ್ಚಿನ ಪತ್ರಿಕೆಯನ್ನು ಓದಲು www.epaper.Vijayasakshi.com ಜಾಲತಾಣಕ್ಕೆ ಭೇಟಿ ನೀಡಿ. ಕ್ಷಣ ಕ್ಷಣದ ಸುದ್ದಿಗಳಿಗಾಗಿ www.Vijayasakshi.com ವೀಕ್ಷಿಸಿ.

## ಪತ್ರಿಕಾ ರಂಗಕ್ಕೆ ಸಮಾಜದ ಬೆಂಬಲ ಅಗತ್ಯ: ಶ್ರೀ ಚನ್ನವೀರ ಮಹಾಸ್ವಾಮೀಜಿ

## ಪತ್ರಿಕೆ ಓದುವ ಹವ್ಯಾಸ ಬೆಳೆಸಿ

**ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ**

ಜಗತ್ತಿನ ಆಗುಹೋಗುಗಳ ಮಾಹಿತಿ ನೀಡುವುದರ ಜೊತೆಗೆ ಸಮಾಜದ ಎಲ್ಲ ಕ್ಷೇತ್ರಗಳ ಪ್ರತಿಬಿಂಬವಾಗಿ ಕಾರ್ಯನಿರ್ವಹಿಸುವ ಪತ್ರಿಕಾ ರಂಗಕ್ಕೆ ಸಮಾಜ ಇನ್ನಷ್ಟು ಶಕ್ತಿ ತುಂಬಬೇಕು ಎಂದು ಹೂವಿನಶಿಗ್ಲಿಯ ಶ್ರೀ ಚನ್ನವೀರ ಮಹಾಸ್ವಾಮೀಜಿ ಹೇಳಿದರು. ಪಟ್ಟಣದ ಸರ್ಕಾರಿ ಪ್ರೌಢಶಾಲೆಯಲ್ಲಿ ತಾಲೂಕು ಪತ್ರಕರ್ತರ ಸಂಘ ಹಮ್ಮಿಕೊಂಡಿದ್ದ ಪತ್ರಿಕಾ ದಿನಾಚರಣೆ ಕಾರ್ಯಕ್ರಮದ ಸಾನ್ನಿಧ್ಯ ವಹಿಸಿ ಆಶೀರ್ವಚನ ನೀಡಿದ ಅವರು, ಸತ್ಯದ ಹುಡುಕಾಟವೇ ಪತ್ರಿಕೋದ್ಯಮದ ಧರ್ಮ. ನೊಂದ ಜನರ ಧ್ವನಿಯಾಗಿರುವ ಪತ್ರಿಕೆ ಗಳು ಪ್ರಜಾಪ್ರಭುತ್ವವನ್ನು ಬಲಪಡಿಸುವ ಮಹತ್ತರ ಜವಾಬ್ದಾರಿ ಯನ್ನು ನಿರ್ವಹಿಸುತ್ತಿವೆ ಎಂದರು. ವಿನಾಕಾರಣ ಅನೇಕ ವಿಷಯಗಳಿಗೆ ಹಣ ಖರ್ಚು ಮಾಡುವ ಜನರು ಜ್ಞಾನ ವೃದ್ಧಿಗೆ ದಿನಪತ್ರಿಕೆಗಳನ್ನು ಖರೀದಿಸಿ ಓದುವ ಅಭ್ಯಾಸ ಬೆಳೆಸಿಕೊಳ್ಳ ಬೇಕು. ಪತ್ರಿಕಾ ದಿನಾಚರಣೆ ಅಂಗವಾಗಿ ರುದ್ರಭೂಮಿಯನ್ನು ಸ್ವಚ್ಛಗೊಳಿಸಿರುವ ಪತ್ರಕರ್ತರ ಕಾರ್ಯ ಶ್ಲಾಘನೀಯ ಎಂದು ಹೇಳಿದರು. ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದ ಪಿಎಸ್‌ಐ ನಾಗರಾಜ ಗಡಾದ, ನ್ಯಾಯಾಂಗ, ಕಾರ್ಯಾಂಗ ಹಾಗೂ ಶಾಸಕಾಂಗಗಳು ತಮ್ಮ ಜವಾಬ್ದಾರಿಯಿಂದ ಹಿಂದೆ ಸರಿದಾಗ ಸಮಾಜವನ್ನು ಎಚ್ಚರಿಸುವ ಕೆಲಸವನ್ನು ಪತ್ರಿಕಾ ರಂಗ ಮಾಡುತ್ತದೆ. ವಿದ್ಯಾರ್ಥಿಗಳಲ್ಲಿ ದಿನಪತ್ರಿಕೆ ಓದುವ ಹವ್ಯಾಸ ಬೆಳೆಸುವುದು ಇಂದಿನ ಸ್ಪರ್ಧಾತ್ಮಕ ಯುಗದಲ್ಲಿ ಅತ್ಯಗತ್ಯ ಎಂದು ಹೇಳಿದರು. ಜಿಲ್ಲಾ ಪತ್ರಕರ್ತರ ಸಂಘದ ಪ್ರಧಾನ ಕಾರ್ಯದರ್ಶಿ ಶರಣು ದೊಡ್ಡೂರ ಹಾಗೂ ಜಿಲ್ಲಾ ಕಾರ್ಯ ಕಾರಿಣಿ ಸದಸ್ಯ ಆನಂದಯ್ಯ ವಿರಕ್ತಮಠ ಮಾತನಾಡಿ, ಪತ್ರಕರ್ತರು ಕೇವಲ ಸುದ್ದಿ ನೀಡುವವರಲ್ಲ, ಸಮಾಜದ ಬದಲಾವಣೆಯ ರೂವಾರಿಗಳಾಗಿದ್ದಾರೆ. ವಿದ್ಯಾರ್ಥಿಗಳು ಶಾಲಾ ಹಂತದಲ್ಲೇ ಪತ್ರಿಕೆ ಓದುವ ಅಭ್ಯಾಸ ಬೆಳೆಸಿಕೊಂಡರೆ ವಿವಿಧ ಕ್ಷೇತ್ರಗಳ ಸಮಗ್ರ ಜ್ಞಾನ ದೊರೆಯುತ್ತದೆ ಎಂದು ತಿಳಿಸಿದರು. ತಾಲೂಕು ಪತ್ರಕರ್ತರ ಸಂಘದ ಅಧ್ಯಕ್ಷ ಅಶೋಕ ಸೊರಟೂರ ಅಧ್ಯಕ್ಷತೆ ವಹಿಸಿದ್ದರು. ಗುರುರಾಜ ಪಾಟೀಲ ಕುಲಕರ್ಣಿ, ಮಲ್ಲು ಕಳಸಾಪುರ, ಸುರೇಶ ಕಡ್ಲಿಮಟ್ಟಿ, ಬಿ.ಸಿ. ಪಟ್ಟೇದ ಸೇರಿದಂತೆ ಹಲವು ಗಣ್ಯರು, ಪತ್ರಕರ್ತರು, ಶಿಕ್ಷಕರು ಹಾಗೂ ವಿದ್ಯಾರ್ಥಿಗಳು ಕಾರ್ಯಕ್ರಮದಲ್ಲಿ ಭಾಗವಹಿಸಿದ್ದರು.

**ಸತ್ಯದ ಹುಡುಕಾಟವೇ ಪತ್ರಿಕೋದ್ಯಮದ ಧರ್ಮ. ಸಮಾಜದ ಧ್ವನಿಯಾಗಿರುವ ಪತ್ರಿಕೆಗಳನ್ನು ಓದುವ ಸಂಸ್ಕೃತಿ ಇನ್ನಷ್ಟು ಬೆಳೆಯಬೇಕು.**

**- ಶ್ರೀ ಚನ್ನವೀರ ಮಹಾಸ್ವಾಮೀಜಿ,** ಹೂವಿನಶಿಗ್ಲಿ

### ತಿಂಗಳಿಗೆ ಕೇವಲ ₹6 ಸಾವಿರ ಕಂತಿನಲ್ಲಿ ನಿವೇಶನ | ಬಡಮಧ್ಯಮ ವರ್ಗದವರ ಮನೆ ಕನಸಿಗೆ ನೆರವು: ಶಾಸಕ ಮಹೇಶ ಟೆಂಗಿನಕಾಯಿ

## ಗಜೇಂದ್ರಗಡದಲ್ಲಿ ಕೊರವಿ ಡೆವಲಪರ್ಸ್ 25ನೇ ಲೇಔಟ್‌ಗೆ ಭೂಮಿಪೂಜೆ




**ವಿಜಯಸಾಕ್ಷಿ ಸುದ್ದಿ, ಗಜೇಂದ್ರಗಡ**

ಬಡವರು ಹಾಗೂ ಮಧ್ಯಮ ವರ್ಗದವರ ಪ್ರತಿಯೊಬ್ಬರಿಗೂ ಸ್ವಂತ ಮನೆಯ ಕನಸು ಇರುವುದು ಸಹಜ. ಇಂತಹ ಕನಸನ್ನು ನನಸು ಮಾಡುವ ನಿಟ್ಟಿನಲ್ಲಿ ಕೊರವಿ ಡೆವಲಪರ್ಸ್ ಕೈಗೊಂಡಿರುವ ಕಾರ್ಯ ನಿಜಕ್ಕೂ ಶ್ಲಾಘನೀಯ ಎಂದು ಹುಬ್ಬಳ್ಳಿ ಸೆಂಟ್ರಲ್ ಕ್ಷೇತ್ರದ ಶಾಸಕ ಮಹೇಶ ಟೆಂಗಿನಕಾಯಿ ಹೇಳಿದರು.

ಪಟ್ಟಣದಲ್ಲಿ ನಡೆದ ಕೊರವಿ ಡೆವಲಪರ್ಸ್‌ನ 25ನೇ ಲೇಔಟ್ ಭೂಮಿಪೂಜೆ ಕಾರ್ಯಕ್ರಮದಲ್ಲಿ ಮುಖ್ಯ ಅತಿಥಿಯಾಗಿ ಪಾಲ್ಗೊಂಡು ಮಾತನಾಡಿದ ಅವರು, ಟಿಸ್ವಂತಕ್ಕೆ ಸ್ವಲ್ಪ, ಸಮಾಜಕ್ಕೆ ಸರ್ವಸ್ವಟಿ ಎಂಬ ಧ್ಯೇಯದೊಂದಿಗೆ ಸಮಾಜಮುಖಿ ಕಾರ್ಯಗಳನ್ನು ಮಾಡುತ್ತಿರುವ ಕೊರವಿ ಸಂಸ್ಥೆಯು, ಟಿಡೆವಲಪರ್ ಎಂದರೆ ಕೊರವಿಟಿ ಎನ್ನುವ ವಿಶ್ವಾಸವನ್ನು ಸಮಾಜದಲ್ಲಿ ಗಳಿಸಿಕೊಂಡಿದೆ. ಉಚಿತ ಆರೋಗ್ಯ ಶಿಬಿರ ಸೇರಿದಂತೆ ಅನೇಕ ಜನಪರ ಕಾರ್ಯಕ್ರಮಗಳನ್ನು ಯಶಸ್ವಿಯಾಗಿ ನಡೆಸಿದೆ. ಗಜೇಂದ್ರಗಡದಲ್ಲಿಯೂ ಗುಣಮಟ್ಟದ ಕಾಮಗಾರಿಯೊಂದಿಗೆ ಅತ್ಯುತ್ತಮ ಲೇಔಟ್ ನಿರ್ಮಿಸಿ, ನಿಗದಿತ ಅವಧಿಯಲ್ಲಿ ರಸ್ತೆ, ನೀರು ಸೇರಿದಂತೆ ಎಲ್ಲ ಮೂಲಭೂತ ಸೌಕರ್ಯಗಳನ್ನು ಕಲ್ಪಿಸುವ ಮೂಲಕ ಮಾದರಿ ಲೇಔಟ್ ರೂಪಿಸಬೇಕು ಎಂದು ಆಶಿಸಿದರು.

ಕಾರ್ಯಕ್ರಮದ ದಿವ್ಯ ಸಾನ್ನಿಧ್ಯವನ್ನು ತೋಟದ ಸಿದ್ದರಾಮ ಮಹಾಸ್ವಾಮಿಗಳು, ವಿಜಯ ಮಹಾಂತ ಮಹಾಸ್ವಾಮಿಗಳು ಹಾಗೂ ರೋಣದ ಗುರುಪಾದ ಮಹಾಸ್ವಾಮಿಗಳು ವಹಿಸಿ ಆಶೀರ್ವಚನ ನೀಡಿದರು.

ಪ್ರಾಸ್ತಾವಿಕವಾಗಿ ಮಾತನಾಡಿದ ರಾಜಣ್ಣ ಕೊರವಿ, ಇಂದಿನ ಕಾರ್ಯಕ್ರಮಕ್ಕೆ ಆಗಮಿಸಿದ ಸಾರ್ವಜನಿಕರೇ ನಮಗೆ ಆನೆಬಲ ನೀಡಿದ್ದಾರೆ. ಗಜೇಂದ್ರಗಡದಲ್ಲಿ ಕೊರವಿ ಸಂಸ್ಥೆಯ 25ನೇ ಲೇಔಟ್ ಆರಂಭಿಸುತ್ತಿರುವುದು ಅತ್ಯಂತ ವಿಶೇಷವಾಗಿದೆ.

ಇಲ್ಲಿನ ಜನತೆ ನಮಗೆ ಉತ್ತಮ ಸಹಕಾರ ನೀಡಿದ್ದಾರೆ. ಪ್ರತಿಯೊಬ್ಬರೂ ಸ್ವಂತ ನಿವೇಶನ ಹೊಂದಬೇಕೆಂಬ ಕನಸನ್ನು ನನಸು ಮಾಡುವ ಉದ್ದೇಶದಿಂದಲೇ ಈ ಯೋಜನೆ ಆರಂಭಿಸಲಾಗಿದೆ. ಮಧ್ಯಮ ವರ್ಗದವರು ಹಾಗೂ ಶ್ರೀಮಂತರು ತಮ್ಮ ಬಜೆಟ್‌ಗೆ ಅನುಗುಣವಾಗಿ ಉತ್ತಮ ನಿವೇಶನ ಖರೀದಿಸಬಹುದಾಗಿದೆ.

ಗುಣಮಟ್ಟವೇ ಕೊರವಿ ಸಂಸ್ಥೆಯ ಗುರುತಾಗಿದ್ದು, ಸುಸಜ್ಜಿತ ರಸ್ತೆ, ಕುಡಿಯುವ ನೀರು ಸೇರಿದಂತೆ ಎಲ್ಲ ಮೂಲಭೂತ ಸೌಕರ್ಯಗಳನ್ನು ಕಲ್ಪಿಸಲಾಗುವುದು. ಈ ಯೋಜನೆಯು ಗಜೇಂದ್ರಗಡದ ಆರ್ಥಿಕ ಬೆಳವಣಿಗೆಗೂ ಉತ್ತೇಜನ ನೀಡಲಿದೆ ಎಂದು ಹೇಳಿದರು.

ವಿಧಾನ ಪರಿಷತ್ ಮಾಜಿ ಸದಸ್ಯ ಎಸ್.ವಿ. ಸಂಕನೂರ ಮಾತನಾಡಿ, ಕೊರವಿ ಸಂಸ್ಥೆಯು ಗಜೇಂದ್ರಗಡ ಮಾತ್ರವಲ್ಲದೆ ಉತ್ತರ ಕರ್ನಾಟಕದಾದ್ಯಂತ ಗುಣಮಟ್ಟದ ಪ್ಲಾಟ್ ಅಭಿವೃದ್ಧಿ ಮೂಲಕ ಉತ್ತಮ ಹೆಸರು ಗಳಿಸಿದೆ. ಅತ್ಯಂತ ಪ್ರಾಮಾಣಿಕತೆಯಿಂದ ಕಾರ್ಯನಿರ್ವಹಿಸುತ್ತಿರುವ ಸಂಸ್ಥೆ ಬೆಳೆಯುತ್ತಿರುವ ಗಜೇಂದ್ರಗಡ ನಗರದ ಅಗತ್ಯಕ್ಕೆ ತಕ್ಕಂತೆ ಲೇಔಟ್ ಅಭಿವೃದ್ಧಿಪಡಿಸುತ್ತಿರುವುದು ಹೆಮ್ಮೆಯ ಸಂಗತಿ ಎಂದು ಹೇಳಿದರು.

ಮಾಜಿ ಸಚಿವ ಹಾಗೂ ಮಾಜಿ ಶಾಸಕ ಕಳಕಪ್ಪ ಬಂಡಿ ಮಾತನಾಡಿ, ಕೊರವಿ ಸಂಸ್ಥೆ ಈ ನಗರಕ್ಕೆ ಮೊದಲೇ ಬರಬೇಕಾಗಿತ್ತು. ಅತ್ಯುತ್ತಮ ರಸ್ತೆ, ಚರಂಡಿ ಹಾಗೂ ಆಧುನಿಕ ಮೂಲಸೌಕರ್ಯಗಳೊಂದಿಗೆ ಲೇಔಟ್ ಅಭಿವೃದ್ಧಿಪಡಿಸುತ್ತಿದ್ದು, ಗ್ರಾಹಕರಿಗೆ ತಿಂಗಳಿಗೆ ಕೇವಲ ₹6 ಸಾವಿರದ ಸುಲಭ ಕಂತಿನಲ್ಲಿ ನಿವೇಶನ ಒದಗಿಸುತ್ತಿರುವುದು ಶ್ಲಾಘನೀಯ. ಸಂಸ್ಥೆಯ ಅಭಿವೃದ್ಧಿ ಕಾರ್ಯಗಳು ರಾಜ್ಯಾದ್ಯಂತ ಇನ್ನಷ್ಟು ವಿಸ್ತರಿಸಿ ಯಶಸ್ಸು ಗಳಿಸಲಿ ಎಂದು ಶುಭ ಹಾರೈಸಿದರು.

ಚನ್ನು ಪಾಟೀಲ ಮಾತನಾಡಿ, ಕೊರವಿ ಸಂಸ್ಥೆಯ ಜನಪರ ಕಾರ್ಯವೈಖರಿಯನ್ನು ಮುಕ್ತಕಂಠದಿಂದ ಶ್ಲಾಘಿಸಿದರು.

ಕಾರ್ಯಕ್ರಮದಲ್ಲಿ ವೀರಣ್ಣ ಶೆಟ್ಟರ, ಉಮೇಶ ಮಲ್ಲಾಪೂರ, ವಿಶ್ವನಾಥ ಕೊರವಿ, ಮುತ್ತು ಕಡಗದ ಸೇರಿದಂತೆ ಹಲವು ಗಣ್ಯರು, ಮುಖಂಡರು ಹಾಗೂ ನೂರಾರು ಸಾರ್ವಜನಿಕರು ಭಾಗವಹಿಸಿದ್ದರು.

## ತಿಂಗಳಿಗೆ ₹6 ಸಾವಿರ ಕಂತಿನಲ್ಲಿ ನಿವೇಶನ

**ಗಜೇಂದ್ರಗಡದ ಕೊರವಿ ಡೆವಲಪರ್ಸ್ 25ನೇ ಲೇಔಟ್‌ನಲ್ಲಿ ಗ್ರಾಹಕರಿಗೆ ತಿಂಗಳಿಗೆ ಕೇವಲ ₹6 ಸಾವಿರದ ಸುಲಭ ಕಂತಿನಲ್ಲಿ ನಿವೇಶನ ಖರೀದಿಸುವ ಅವಕಾಶ ಕಲ್ಪಿಸಲಾಗಿದೆ. ಲೇಔಟ್‌ನಲ್ಲಿ ಗುಣಮಟ್ಟದ ರಸ್ತೆ, ಕುಡಿಯುವ ನೀರು, ಚರಂಡಿ ಸೇರಿದಂತೆ ಎಲ್ಲ ಅಗತ್ಯ ಮೂಲಭೂತ ಸೌಕರ್ಯಗಳನ್ನು ಅಭಿವೃದ್ಧಿಪಡಿಸಲಾಗುವುದು ಎಂದು ಸಂಸ್ಥೆ ತಿಳಿಸಿದೆ.**

## ರಾಜ್ಯ ಸರ್ಕಾರದ ಯೋಜನೆಗಳನ್ನು ಪರಿಣಾಮಕಾರಿಯಾಗಿ ಜಾರಿಗೊಳಿಸಲು ಶ್ರಮ: ಪಿ.ಟಿ. ಪರಮೇಶ್ವರ ನಾಯ್ಕ

## ಗ್ಯಾರಂಟಿ ಯೋಜನೆಗಳು ಅರ್ಹರಿಗೆ ತಲುಪಲಿ



**ವಿಜಯಸಾಕ್ಷಿ ಸುದ್ದಿ, ಹಗರಿಬೊಮ್ಮನಹಳ್ಳಿ**

ರಾಜ್ಯ ಸರ್ಕಾರದ ಪಂಚ ಗ್ಯಾರಂಟಿ ಯೋಜನೆಗಳು ಪ್ರತಿಯೊಬ್ಬ ಅರ್ಹ ಫಲಾನುಭವಿಗೂ ತಲುಪುವಂತೆ ಪರಿಣಾಮಕಾರಿಯಾಗಿ ಅನುಷ್ಠಾನಗೊಳಿಸಲು ಶ್ರಮಿಸಲಾಗುವುದು ಎಂದು ಕರ್ನಾಟಕ ರಾಜ್ಯ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿಯ ರಾಜ್ಯ ಉಪಾಧ್ಯಕ್ಷ ಪಿ.ಟಿ. ಪರಮೇಶ್ವರ ನಾಯ್ಕ ಹೇಳಿದರು.

ರಾಜ್ಯ ಉಪಾಧ್ಯಕ್ಷರಾಗಿ ನೇಮಕಗೊಂಡ ಬಳಿಕ ಹಗರಿಬೊಮ್ಮನಹಳ್ಳಿಗೆ ಆಗಮಿಸಿದ ಅವರನ್ನು ಕಾಂಗ್ರೆಸ್ ಕಾರ್ಯಕರ್ತರು ಹಾಗೂ ಅಭಿಮಾನಿಗಳು ಸನ್ಮಾನಿಸಿದರು. ಬಳಿಕ ಮಾತನಾಡಿದ ಅವರು, ಚುನಾವಣೆಯಲ್ಲಿ ಸೋಲಿನ ನಂತರವೂ ಪಕ್ಷದ ಕೆಲಸ ಮಾಡಲು ಬಯಸಿದ್ದ ನನಗೆ ಪಕ್ಷದ ವರಿಷ್ಠರು ಮಹತ್ವದ ಜವಾಬ್ದಾರಿ ನೀಡಿದ್ದಾರೆ.

ಅವರ ನಂಬಿಕೆಗೆ ತಕ್ಕಂತೆ ಗ್ಯಾರಂಟಿ ಯೋಜನೆಗಳನ್ನು ಅರ್ಹ ಫಲಾನುಭವಿಗಳಿಗೆ ತಲುಪಿಸುವ ಮೂಲಕ ಕಾಂಗ್ರೆಸ್ ಪಕ್ಷವನ್ನು ಮತ್ತೊಮ್ಮೆ ಅಧಿಕಾರಕ್ಕೆ ತರಲು ಶ್ರಮಿಸುತ್ತೇನೆ ಎಂದರು. ರಾಜ್ಯ ಸರ್ಕಾರದ ಮಹತ್ವಾಕಾಂಕ್ಷೆಯ ಪಂಚ ಗ್ಯಾರಂಟಿ ಯೋಜನೆಗಳ ಪರಿಣಾಮಕಾರಿ ಅನುಷ್ಠಾನಕ್ಕಾಗಿ ವಿಭಾಗ, ಜಿಲ್ಲೆ ಹಾಗೂ ತಾಲೂಕು ಮಟ್ಟದಲ್ಲಿ ಸಭೆಗಳನ್ನು ನಡೆಸಿ ಫಲಾನುಭವಿಗಳಿಗೆ ಯೋಜನೆಗಳ ಸೌಲಭ್ಯ ತಲುಪಿಸಲಾಗುವುದು ಎಂದು ತಿಳಿಸಿದರು.

ಬಿಜೆಪಿ ಗ್ಯಾರಂಟಿ ಯೋಜನೆಗಳನ್ನು ಟೀಕಿಸುತ್ತಿದ್ದರೂ, ಅವರ ಪಕ್ಷದವರೇ ಈ ಯೋಜನೆಗಳ ಫಲಾನುಭವಿಗಳಾಗಿದ್ದಾರೆ.

**ರಾಜ್ಯ ಸರ್ಕಾರದ ಪಂಚ ಗ್ಯಾರಂಟಿ ಯೋಜನೆಗಳು ಪ್ರತಿಯೊಬ್ಬ ಅರ್ಹ ಫಲಾನುಭವಿಗೂ ತಲುಪುವಂತೆ ಪ್ರಾಮಾಣಿಕವಾಗಿ ಕೆಲಸ ಮಾಡುತ್ತೇನೆ.**

**- ಪಿ.ಟಿ. ಪರಮೇಶ್ವರ ನಾಯ್ಕ,** ರಾಜ್ಯ ಉಪಾಧ್ಯಕ್ಷ, ಕರ್ನಾಟಕ ರಾಜ್ಯ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿ

ಟೀಕೆ ಮಾಡುವುದನ್ನು ಬಿಟ್ಟು ಯೋಜನೆಗಳ ಲಾಭ ಪಡೆಯುವುದನ್ನು ನಿಲ್ಲಿಸಲಿ ಎಂದು ಸವಾಲು ಹಾಕಿದರು.

ನೀಟ್ ಪರೀಕ್ಷೆಯ ಅಕ್ರಮವನ್ನು ಪ್ರಶ್ನಿಸಿ ಪ್ರತಿಭಟನೆ ನಡೆಸಿದ ವಿದ್ಯಾರ್ಥಿಗಳ ಮೇಲೆ ಪೊಲೀಸ್ ದೌರ್ಜನ್ಯ ನಡೆಸಿರುವುದು ಖಂಡನೀಯ. ಹೋರಾಟವನ್ನು ಬಲಪ್ರಯೋಗದಿಂದ ಹತ್ತಿಕ್ಕುವ ಪ್ರಯತ್ನ ನಡೆಯುತ್ತಿದೆ ಎಂದು ಆರೋಪಿಸಿದರು.

ತಮ್ಮ ಜನ್ಮದಿನದ ಅಂಗವಾಗಿ ಹುಲಿಗೆಮ್ಮ ದೇವಸ್ಥಾನಕ್ಕೆ ತೆರಳುವ ಮಾರ್ಗಮಧ್ಯೆ ಹಗರಿ ಆಂಜನೇಯ ದೇವಸ್ಥಾನದ ಬಳಿ ನಡೆದ ಸನ್ಮಾನ ಸಮಾರಂಭದಲ್ಲಿ ಅವರು ಮಾತನಾಡಿದರು.

ಈ ಸಂದರ್ಭದಲ್ಲಿ ಜಿಲ್ಲಾ ಕಾಂಗ್ರೆಸ್ ಹಿಂದುಳಿದ ವರ್ಗಗಳ ಅಧ್ಯಕ್ಷ ಸೊನ್ನದ ಮಹೇಶ್, ಸಕ್ರಹಳ್ಳಿ ಮಲ್ಲಿಕಾರ್ಜುನ, ಏಣಿಗಿ ಪಕ್ಕೀರ್ ಸಾಬು, ಬೋವಿ ಈರಣ್ಣ, ಬೋವಿ ಹುಲುಗಪ್ಪ, ಕೆ.ಎಸ್. ಉಡುಚಪ್ಪ, ಮಾಜಿ ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಹೆಚ್.ಎ. ಕೊಟ್ರೇಶ್, ಸಿ. ಬಸವರಾಜ್, ದಾದಾಪೀರ್ ಸೇರಿದಂತೆ ಕಾಂಗ್ರೆಸ್ ಮುಖಂಡರು ಉಪಸ್ಥಿತರಿದ್ದರು.

## ಕಾರ್ಗಿಲ್ ವಿಜಯೋತ್ಸವ: ಇಂದು ಡಬಾಲಿ ಕಾಲೇಜಿನಲ್ಲಿ ವಿಶೇಷ ಕಾರ್ಯಕ್ರಮ

**ವಿಜಯಸಾಕ್ಷಿ ಸುದ್ದಿ, ಶಿರಹಟ್ಟಿ**

ಪಟ್ಟಣದ ಎಫ್.ಎಂ. ಡಬಾಲಿ ಪದವಿಪೂರ್ವ ಮಹಾವಿದ್ಯಾಲಯದಲ್ಲಿ ಜುಲೈ 26ರಂದು ಕಾರ್ಗಿಲ್ ವಿಜಯ ದಿವಸದ ಅಂಗವಾಗಿ ಸಾವಿತ್ರಿಬಾಯಿ ಫುಲೆ ರೇಂಜರ್ಸ್ ಘಟಕ ವತಿಯಿಂದ ಟಿಕಾರ್ಗಿಲ್ ವಿಜಯ ದಿವಸ್‌ಟಿ ಹಾಗೂ ಟಿಪೋಷಕರ ದಿನಟಿ ವಿಶೇಷ ಕಾರ್ಯಕ್ರಮವನ್ನು ಆಯೋಜಿಸಲಾಗಿದೆ.

ಬೆಳಿಗ್ಗೆ 8 ಗಂಟೆಗೆ ನಡೆಯಲಿರುವ ಕಾರ್ಯಕ್ರಮದಲ್ಲಿ ಕಾರ್ಗಿಲ್ ಯುದ್ಧದಲ್ಲಿ ದೇಶಕ್ಕಾಗಿ ಪ್ರಾಣ ತ್ಯಾಗ ಮಾಡಿದ ವೀರಯೋಧರಿಗೆ ನುಡಿನಮನ ಸಲ್ಲಿಸಲಾಗುವುದು. ಶಿರಹಟ್ಟಿ ಪಟ್ಟಣದ ಮಾಜಿ ಯೋಧರನ್ನು ಸನ್ಮಾನಿಸುವ ಕಾರ್ಯಕ್ರಮವೂ ಹಮ್ಮಿಕೊಳ್ಳಲಾಗಿದೆ.

ರೇಂಜರ್ಸ್ ಘಟಕದ ಲೀಡರ್ ಶ್ರೀಮತಿ ಸುಧಾ ಹುಚ್ಚಣ್ಣವರ ಮಾರ್ಗದರ್ಶನದಲ್ಲಿ ಫ್ಯಾಮಿಲಿ ಟ್ರೀ ಪರಿಕಲ್ಪನೆಯಡಿ ಸೃಜನಾತ್ಮಕ ಚಟುವಟಿಕೆ ಆಯೋಜಿಸಲಾಗಿದೆ. ಕಾಲೇಜಿನ ಪ್ರಥಮ ಹಾಗೂ ದ್ವಿತೀಯ ಪಿಯುಸಿಯ 24 ರೇಂಜರ್ಸ್ ವಿದ್ಯಾರ್ಥಿನಿಯರು ಕಾರ್ಯಕ್ರಮದಲ್ಲಿ ಭಾಗವಹಿಸಲಿದ್ದಾರೆ.

ಕಾಲೇಜಿನ ಪ್ರಾಚಾರ್ಯ ಎಂ.ಸಿ. ಭಜಂತ್ರಿ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಲಿದ್ದು, ಕಾಲೇಜಿನ ಉಪನ್ಯಾಸಕ ವೃಂದ ಕಾರ್ಯಕ್ರಮದಲ್ಲಿ ಉಪಸ್ಥಿತರಿರುವರು ಎಂದು ಪ್ರಕಟಣೆ ತಿಳಿಸಿದೆ.




**ಲಕ್ಷ್ಮೇಶ್ವರ: ಆಷಾಢ ಮಾಸದ ಅಂಗವಾಗಿ ಲಕ್ಷ್ಮೇಶ್ವರದ ಸವಣೂರು ರಸ್ತೆಯಲ್ಲಿರುವ ಶ್ರೀ ವೆಂಕಟೇಶ್ವರ ದೇವಸ್ಥಾನದಲ್ಲಿ ವಿಶೇಷ ಪೂಜೆ, ಮಹಾಭಿಷೇಕ ಹಾಗೂ ಪಲ್ಲಕ್ಕಿ ಉತ್ಸವವನ್ನು ಭಕ್ತಿಭಾವದಿಂದ ಹಾಗೂ ವಿಜೃಂಭಣೆಯಿಂದ ನೆರವೇರಿಸಲಾಯಿತು. ಈ ಸಂದರ್ಭದಲ್ಲಿ ನೂರಾರು ಭಕ್ತರು ಭಾಗವಹಿಸಿ ಶ್ರೀ ವೆಂಕಟೇಶ್ವರನ ದರ್ಶನ ಪಡೆದು ಪೂಜಾ ಕೈಂಕರ್ಯಗಳಲ್ಲಿ ಪಾಲ್ಗೊಂಡರು.**

ಸಂಕ್ಷಿಪ್ತ ಸುದ್ದಿಗಳು

## ಗ್ರಾಮೋದ್ಯೋಗ ವಿಕಾಸ ಯೋಜನೆಗೆ ಅರ್ಜಿ ಆಹ್ವಾನ

**ವಿಜಯಸಾಕ್ಷಿ ಸುದ್ದಿ, ಗದಗ**

ಸೂಕ್ಷ್ಮ, ಸಣ್ಣ ಮತ್ತು ಮಧ್ಯಮ ಉದ್ಯಮಗಳ ಸಚಿವಾಲಯದ ಕೇಂದ್ರ ವಲಯದ ಗ್ರಾಮೋದ್ಯೋಗ ವಿಕಾಸ ಯೋಜನೆ ಅಡಿಯಲ್ಲಿ ಖಾದಿ ಮತ್ತು ಗ್ರಾಮೋದ್ಯೋಗ ಆಯೋಗ ಮೂಲಕ ವಿವಿಧ ಕೌಶಲ್ಯಾಭಿವೃದ್ಧಿ ತರಬೇತಿಗಳಿಗೆ ಅರ್ಹ ಅಭ್ಯರ್ಥಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ. ಆಗಸ್ಟ್ 7 ಅರ್ಜಿ ಸಲ್ಲಿಸಲು ಕೊನೆಯ ದಿನವಾಗಿದೆ.18ರಿಂದ 55 ವರ್ಷದೊಳಗಿನ, ಆಧಾರ್ ಕಾರ್ಡ್ ಅಥವಾ ಸರ್ಕಾರದಿಂದ ನೀಡಲಾದ ಮಾನ್ಯ ಗುರುತಿನ ಚೀಟಿ ಹೊಂದಿರುವ ಭಾರತೀಯ ನಾಗರಿಕರು ಅರ್ಜಿ ಸಲ್ಲಿಸಲು ಅರ್ಹರಾಗಿದ್ದಾರೆ. ಯೋಜನೆ ಯಡಿ ಜೇನು ಸಾಕಾಣಿಕೆ, ಚಕ್ರ ಕುಂಬಾರಿಕೆ, ವಿದ್ಯುತ್ ತಂತ್ರಜ್ಞ (ಇಲೆಕ್ಟ್ರಿಷಿಯನ್), ಮೂಲಭೂತ ಪ್ಲಂಬಿಂಗ್, ಹೊಲಿಗೆ ಯಂತ್ರ ನಿರ್ವಹಣೆ, ಅಗರಬತ್ತಿ ತಯಾರಿಕೆ, ಪಾದರಕ್ಷೆ ತಯಾರಿಕೆ ಮತ್ತು ದುರಸ್ತಿ, ಮರದ ಆಟಿಕೆ ತಯಾರಿಕೆ, ಮಸಾಲೆ ಹಾಗೂ ರುಚಿಕಾರಕ ಪದಾರ್ಥಗಳ ಸಂಸ್ಕರಣೆ, ಕಾಗದದ ತಟ್ಟೆ-ದೊನ್ನೆ ತಯಾರಿಕೆ ಹಾಗೂ ಕಾಗದ ಸಂಸ್ಕರಣೆ ಸೇರಿದಂತೆ ವಿವಿಧ ವೃತ್ತಿಪರ ತರಬೇತಿಗಳನ್ನು ನೀಡಲಾಗುತ್ತದೆ. ಅರ್ಜಿ ನಮೂನೆ ಹಾಗೂ ಯೋಜನೆಯ ವಿವರಗಳು ಕೆವಿಐಸಿ ವೆಬ್‌ಸೈಟ್‌ನಲ್ಲಿ ಲಭ್ಯವಿದ್ದು, ಹೆಚ್ಚಿನ ಮಾಹಿತಿಗಾಗಿ ಗದಗ ಜಿಲ್ಲಾ ಕೈಗಾರಿಕಾ ಕೇಂದ್ರ ಕಚೇರಿಯನ್ನು ಸಂಪರ್ಕಿಸುವಂತೆ ಜಿಲ್ಲಾ ಕೈಗಾರಿಕಾ ಕೇಂದ್ರದ ಜಂಟಿ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ಪತ್ರಿಕಾ ದಿನಾಚರಣೆ ಹಾಗೂ ವೈದ್ಯ ದಿನಾಚರಣೆಯಲ್ಲಿ ಆನಂದಯ್ಯ ವಿರಕ್ತಮಠ ಅಭಿಮತ

## ಪತ್ರಿಕಾರಂಗ, ವೈದ್ಯ ವೃತ್ತಿ ಸಮಾಜದ ಎರಡು ಕಣ್ಣುಗಳು



**ವಿಜಯಸಾಕ್ಷಿ ಸುದ್ದಿ, ಮುಳಗುಂದ**

ಪತ್ರಿಕಾರಂಗ ಮತ್ತು ವೈದ್ಯ ವೃತ್ತಿ ಸಮಾಜದ ಎರಡು ಕಣ್ಣುಗಳಿದ್ದಂತೆ. ಪತ್ರಕರ್ತರು ಸಮಾಜದ ಅಂಕುಡೊಂಕು ತಿದ್ದುವ ಕೆಲಸ ಮಾಡಿದರೆ, ವೈದ್ಯರು ಜೀವ ಉಳಿಸುವ ಮೂಲಕ ಸಮಾಜದ ಆರೋಗ್ಯ ಕಾಪಾಡುತ್ತಾರೆ ಎಂದು ಜನಶ್ರೀ ಟೈಮ್ಸ್ ವಾಹಿನಿಯ ಸಂಪಾದಕ ಆನಂದಯ್ಯ ವಿರಕ್ತಮಠ ಹೇಳಿದರು.

ಪಟ್ಟಣದ ಎಸ್‌ಜೆಜೆಎಂ ಸಂಯುಕ್ತ ಪದವಿಪೂರ್ವ ಮಹಾವಿದ್ಯಾಲಯ ಹಾಗೂ ಮುಳಗುಂದ ಕಾರ್ಯನಿರತ ಪತ್ರಕರ್ತರ ಸಂಘದ ವತಿಯಿಂದ ಬಾಲಲೀಲಾ ಮಹಾಂತ ಶಿವಯೋಗಿ ಕಲಾಭವನದಲ್ಲಿ ಹಮ್ಮಿಕೊಂಡಿದ್ದ ಪತ್ರಿಕಾ ದಿನಾಚರಣೆ ಹಾಗೂ ವೈದ್ಯ ದಿನಾಚರಣೆ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

ಕಾರ್ಯಕ್ರಮದ ಸಾನ್ನಿಧ್ಯ ವಹಿಸಿದ್ದ ನೀಲಗುಂದ ಗುದ್ನೇಶ್ವರಮಠದ ಪ್ರಭುಲಿಂಗ ದೇವರು ಮಾತನಾಡಿ, ಪ್ರಾಚೀನ ಕಾಲದಿಂದಲೂ ಸಂದೇಶ ರವಾನಿಸುವ ಮಾಧ್ಯಮವಾಗಿ ಪತ್ರಿಕಾರಂಗದ ಪರಿಕಲ್ಪನೆ ಇತ್ತು. ಇಂದಿನ ದಿನಗಳಲ್ಲಿ ಪತ್ರಿಕೆಗಳು ಸಮಾಜಕ್ಕೆ ಜ್ಞಾನ ನೀಡುವ ಪ್ರಮುಖ ಮಾಧ್ಯಮವಾಗಿದ್ದು, ಮಕ್ಕಳು ಪ್ರತಿದಿನ ಪತ್ರಿಕೆ ಓದುವ ಅಭ್ಯಾಸ ಬೆಳೆಸಿಕೊಳ್ಳಬೇಕು ಎಂದು ಸಲಹೆ ನೀಡಿದರು.

ಕಾರ್ಯಕ್ರಮ ಉದ್ಘಾಟಿಸಿದ ಡಾ. ಎಸ್.ಸಿ. ಚವಡಿ ಮಾತನಾಡಿ, ಪತ್ರಕರ್ತರು ವಸ್ತುನಿಷ್ಠ ಮತ್ತು ನಿಖರ ಮಾಹಿತಿಯನ್ನು ಸಮಾಜಕ್ಕೆ ತಲುಪಿಸುವ ಜವಾಬ್ದಾರಿ ಹೊಂದಿದ್ದಾರೆ. ವೈದ್ಯರನ್ನು ಸಮಾಜ ದೇವರ ಸಮಾನವಾಗಿ ಕಾಣುವುದರಿಂದ ವೈದ್ಯರು ತಮ್ಮ ವೃತ್ತಿಯ ಘನತೆಯನ್ನು ಕಾಪಾಡಿಕೊಂಡು ಸೇವೆ ಸಲ್ಲಿಸಬೇಕು ಎಂದು ಹೇಳಿದರು.

ಕಾರ್ಯಕ್ರಮದ ಅಧ್ಯಕ್ಷತೆಯನ್ನು ಎಂ.ಡಿ. ಬಟ್ಟೂರ ವಹಿಸಿದ್ದರು. ಶರಣು ದೊಡ್ಡೂರ,

**ಪತ್ರಿಕಾರಂಗ ಸಮಾಜದ ಅಂಕುಡೊಂಕು ತಿದ್ದುವ ಶಕ್ತಿಯಾಗಿದ್ದರೆ, ವೈದ್ಯ ವೃತ್ತಿ ಜೀವ ಉಳಿಸುವ ಸೇವೆಯಾಗಿದೆ. ಇವೆರಡೂ ಸಮಾಜದ ಎರಡು ಕಣ್ಣುಗಳಂತೆ ಕಾರ್ಯನಿರ್ವಹಿಸುತ್ತವೆ.**

**- ಆನಂದಯ್ಯ ವಿರಕ್ತಮಠ,** ಸಂಪಾದಕರು, ಜನಶ್ರೀ ಟೈಮ್ಸ್

ಸಿಪಿಐ ಬಿ.ಜಿ. ಸುಬ್ಬಾಪೂರಮಠ, ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದ ಜಿಲ್ಲಾ ಅಧ್ಯಕ್ಷ ರಾಜು ಹೆಬ್ಬಳ್ಳಿ, ಮುಳಗುಂದ ಘಟಕದ ಅಧ್ಯಕ್ಷ ಮಹೇಶ ಛಬ್ಬಿ, ಪ್ರಾಚಾರ್ಯ ಎ.ಎಂ. ಅಂಗಡಿ, ಮುತ್ತು ಕುರುಬಗೌಳಿ, ವಿ.ಡಿ. ಕಣವಿ ಸೇರಿದಂತೆ ಹಲವರು ಉಪಸ್ಥಿತರಿದ್ದರು. ವಿದ್ಯಾರ್ಥಿಗಳು ಹಾಗೂ ಸಾರ್ವಜನಿಕರು ಕಾರ್ಯಕ್ರಮದಲ್ಲಿ ಭಾಗವಹಿಸಿದ್ದರು.

### ಜಕ್ಕಲಿಯಲ್ಲಿ ಪೌಷ್ಟಿಕ ಆಹಾರ ಮೇಳ; ಸಿರಿಧಾನ್ಯ ಹಾಗೂ ನೈಸರ್ಗಿಕ ಆಹಾರ ಸೇವನೆಗೆ ತಜ್ಞರ ಕರೆ

## ಪೌಷ್ಟಿಕ ಆಹಾರದಿಂದಲೇ ಆರೋಗ್ಯವಂತ ಸಮಾಜ ನಿರ್ಮಾಣ



**ವಿಜಯಸಾಕ್ಷಿ ಸುದ್ದಿ, ನರೇಗಲ್ಲ**

ಆರೋಗ್ಯವಂತ ಸಮಾಜ ನಿರ್ಮಾಣಕ್ಕೆ ಸಮತೋಲಿತ ಪೌಷ್ಟಿಕ ಆಹಾರವೇ ಮೂಲಾಧಾರವಾಗಿದ್ದು, ಪ್ರತಿಯೊಂದು ಕುಟುಂಬವೂ ಆರೋಗ್ಯಕರ ಆಹಾರ ಪದ್ಧತಿಯನ್ನು ರೂಢಿಸಿಕೊಳ್ಳಬೇಕು ಎಂದು ಶ್ರೀ ಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆ (ಬಿ.ಸಿ. ಟ್ರಸ್ಟ್) ರೋಣ ತಾಲೂಕು ಯೋಜನಾಧಿಕಾರಿ ಮಹಾಬಲೇಶ್ವರ ಪಟಗಾರ ಹೇಳಿದರು.

ಶ್ರೀ ಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆ ವತಿಯಿಂದ ಹೊಸಳ್ಳಿ ವಲಯದ ಜಕ್ಕಲಿ ಕಾರ್ಯಕ್ಷೇತ್ರದ ಜ್ಞಾನವಿಕಾಸ ಮಹಿಳಾ ಕಾರ್ಯಕ್ರಮದಡಿ ಶ್ರೀ ಕಲ್ಮೇಶ್ವರ ದೇವಸ್ಥಾನದ ಆವರಣದಲ್ಲಿ ಗುರುವಾರ ಆಯೋಜಿಸಿದ್ದ ಪೌಷ್ಟಿಕ ಆಹಾರ ಮೇಳ ಉದ್ಘಾಟಿಸಿ ಅವರು ಮಾತನಾಡಿದರು.

ಮಹಿಳೆಯರು ತಯಾರಿಸುವ ಆಹಾರವೇ ಕುಟುಂಬದ ಎಲ್ಲ ಸದಸ್ಯರ ಆರೋಗ್ಯದ ಮೇಲೆ ನೇರ ಪರಿಣಾಮ ಬೀರುತ್ತದೆ. ಆದ್ದರಿಂದ ಪೌಷ್ಟಿಕ ಆಹಾರದ ಕುರಿತು ಪ್ರತಿಯೊಂದು ಮನೆಯಲ್ಲೂ ಅರಿವು ಹೆಚ್ಚಬೇಕು ಎಂದು ಅವರು ಹೇಳಿದರು.

ಶ್ರೀ ಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆ ಕಳೆದ 46 ವರ್ಷಗಳಿಂದ ಗ್ರಾಮೀಣಾಭಿವೃದ್ಧಿಗೆ ಸೇವೆ ಸಲ್ಲಿಸುತ್ತಿದ್ದು, ರೋಣ ಹಾಗೂ ಗಜೇಂದ್ರಗಡ ತಾಲೂಕುಗಳಲ್ಲಿ 2,350 ಸ್ವಸಹಾಯ ಸಂಘಗಳ ಮೂಲಕ 23,500ಕ್ಕೂ ಅಧಿಕ ಮಹಿಳೆಯರನ್ನು ಸಂಘಟಿಸಿದೆ. 25 ಜ್ಞಾನವಿಕಾಸ ಕೇಂದ್ರಗಳ ಮೂಲಕ ಆರೋಗ್ಯ, ಶಿಕ್ಷಣ, ಸ್ವಉದ್ಯೋಗ, ಕಾನೂನು ಅರಿವು, ಮೂಢನಂಬಿಕೆ ನಿವಾರಣೆ ಹಾಗೂ ಪೌಷ್ಟಿಕ ಆಹಾರದ ಕುರಿತು ನಿರಂತರ ತರಬೇತಿ ನೀಡಲಾಗುತ್ತಿದೆ ಎಂದು ವಿವರಿಸಿದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಮಾಜಿ ತಾಲೂಕು ಪಂಚಾಯಿತಿ ಸದಸ್ಯ ಎಂ.ಎನ್. ಮೇಟಿ ಮಾತನಾಡಿ, ಬದಲಾಗುತ್ತಿರುವ ಆಹಾರ ಪದ್ಧತಿ ಮತ್ತು ಜೀವನಶೈಲಿಯಿಂದ ಅನಾರೋಗ್ಯ ಹೆಚ್ಚುತ್ತಿದ್ದು, ಸಿರಿಧಾನ್ಯಗಳು, ಹಸಿರು ಸೊಪ್ಪು-ತರಕಾರಿಗಳು, ಹಣ್ಣುಗಳು ಹಾಗೂ ನೈಸರ್ಗಿಕ ಆಹಾರ ಸೇವನೆಯೊಂದಿಗೆ ನಿಯಮಿತ ವ್ಯಾಯಾಮಕ್ಕೂ ಆದ್ಯತೆ ನೀಡಬೇಕು ಎಂದು ಹೇಳಿದರು.

ಸಮುದಾಯ ಆರೋಗ್ಯಾಧಿಕಾರಿ ಡಾ. ಸಂತೋಷ ರಾಥೋಡ್ ಗರ್ಭಿಣಿಯರು, ಬಾಣಂತಿಯರು ಹಾಗೂ ಮಕ್ಕಳಿಗೆ ಪೌಷ್ಟಿಕ ಆಹಾರದ ಮಹತ್ವ ವಿವರಿಸಿದರು. ನವಜಾತ ಶಿಶುಗಳಿಗೆ ಮೊದಲ ಆರು ತಿಂಗಳು ತಾಯಿಯ ಎದೆಹಾಲನ್ನೇ ನೀಡುವುದು ಅತ್ಯುತ್ತಮ ಪೌಷ್ಟಿಕ ಆಹಾರ ಎಂದು ತಿಳಿಸಿದರು.

ಪ್ರಾಥಮಿಕ ಸುರಕ್ಷಣಾಧಿಕಾರಿ ಎಸ್.ವಿ. ಹಿರೇವಡೆಯರ ಆರೋಗ್ಯಕರ ಜೀವನಕ್ಕಾಗಿ ಪೌಷ್ಟಿಕ ಆಹಾರ, ನಿಯಮಿತ ವ್ಯಾಯಾಮ ಮತ್ತು ಉತ್ತಮ ಜೀವನಶೈಲಿಯನ್ನು ಅಳವಡಿಸಿಕೊಳ್ಳುವಂತೆ ಕರೆ ನೀಡಿದರು.

**ಕುಟುಂಬದ ಆರೋಗ್ಯ ಅಡುಗೆ ಮನೆಯಿಂದಲೇ ಆರಂಭವಾಗುತ್ತದೆ. ಪೌಷ್ಟಿಕ ಆಹಾರ ಸೇವನೆ ಪ್ರತಿಯೊಬ್ಬರ ಜೀವನಶೈಲಿಯ ಭಾಗವಾಗಬೇಕು.**

**- ಮಹಾಬಲೇಶ್ವರ ಪಟಗಾರ,** ಯೋಜನಾಧಿಕಾರಿ

### ಪೌಷ್ಟಿಕ ಖಾದ್ಯಗಳ ಪ್ರದರ್ಶನ ಆಕರ್ಷಣೆ

ಕಾರ್ಯಕ್ರಮದಲ್ಲಿ ಮಹಿಳೆಯರು ಸಿರಿಧಾನ್ಯ, ವಿವಿಧ ಧಾನ್ಯಗಳು, ಕಾಳುಗಳು, ಹಣ್ಣು ಹಾಗೂ ತರಕಾರಿಗಳಿಂದ ತಯಾರಿಸಿದ ಪೌಷ್ಟಿಕ ಖಾದ್ಯಗಳ ಪ್ರದರ್ಶನ ಮತ್ತು ಪ್ರಾತ್ಯಕ್ಷಿಕೆ ನಡೆಸಿ ಗಮನ ಸೆಳೆದರು. ಉತ್ತಮ ಪೌಷ್ಟಿಕ ಆಹಾರ ತಯಾರಿಸಿದ ಮಹಿಳೆಯರಿಗೆ ನೆನಪಿನ ಕಾಣಿಕೆ ನೀಡಿ ಗೌರವಿಸಲಾಯಿತು.

ಪತ್ರಕರ್ತ ಸಂಗಮೇಶ ಮೆಣಸಗಿ ಹಾಗೂ ಒಕ್ಕೂಟದ ಅಧ್ಯಕ್ಷೆ ವೀರಮ್ಮ ಕಡಗದ ಮುಖ್ಯ ಅತಿಥಿಗಳಾಗಿ ಭಾಗವಹಿಸಿದ್ದರು.

ಸರೋಜಾ ನಾಲ್ವಾಡ ಪ್ರಾರ್ಥಿಸಿದರು. ಜ್ಞಾನವಿಕಾಸ ಕೇಂದ್ರದ ಸಮನ್ವಯಾಧಿಕಾರಿ ಲಕ್ಷ್ಮೀ ಮಠದ ಸ್ವಾಗತಿಸಿ ಕಾರ್ಯಕ್ರಮ ನಿರೂಪಿಸಿದರು. ಸೇವಾ ಪ್ರತಿನಿಧಿ ದೇವಕ್ಕ ಪಲ್ಲೇದ ವಂದಿಸಿದರು.

## ನೀಟ್ ಹೆಸರಿನಲ್ಲಿ ದೇಶದ್ರೋಹಿಗಳ ಷಡ್ಯಂತ್ರ: ವಿಜಯಕುಮಾರ ಗಡ್ಡಿ

**ವಿಜಯಸಾಕ್ಷಿ ಸುದ್ದಿ, ಗದಗ**

ನೀಟ್ ಪರೀಕ್ಷೆ ವಿಚಾರವಾಗಿ ದೆಹಲಿಯ ಜಂತರ್ ಮಂತರ್‌ನಲ್ಲಿ ನಡೆದ ಪ್ರತಿಭಟನೆ ಪ್ರಧಾನಿ ನರೇಂದ್ರ ಮೋದಿ ಹಾಗೂ ಕೇಂದ್ರ ಸರ್ಕಾರದ ಜನಪ್ರಿಯತೆಗೆ ಧಕ್ಕೆ ತರಲು ನಡೆಸಿದ ರಾಜಕೀಯ ಷಡ್ಯಂತ್ರವಾಗಿದೆ ಎಂದು ಬಿಜೆಪಿ ಮುಖಂಡ ಹಾಗೂ ಉದ್ಯಮಿ ವಿಜಯಕುಮಾರ ಗಡ್ಡಿ ಆರೋಪಿಸಿದ್ದಾರೆ.

ಪತ್ರಿಕಾ ಪ್ರಕಟಣೆಯಲ್ಲಿ ಈ ಕುರಿತು ಪ್ರತಿಕ್ರಿಯಿಸಿರುವ ಅವರು, ನೀಟ್ ಪರೀಕ್ಷೆಯಲ್ಲಿ ಅಕ್ರಮ ಬೆಳಕಿಗೆ ಬಂದ ತಕ್ಷಣ ಕೇಂದ್ರ ಸರ್ಕಾರ ಮರು ಪರೀಕ್ಷೆ ನಡೆಸಿ, ಶೀಘ್ರ ಫಲಿತಾಂಶ ಪ್ರಕಟಿಸಿದ್ದಲ್ಲದೆ, ಅಕ್ರಮದಲ್ಲಿ ಭಾಗಿಯಾದವರ ವಿರುದ್ಧ ಕಾನೂನು ಕ್ರಮ ಕೈಗೊಂಡಿದೆ ಎಂದು ಹೇಳಿದ್ದಾರೆ.

ಇಂತಹ ಸಂದರ್ಭದಲ್ಲಿ ಕೇಂದ್ರ ಶಿಕ್ಷಣ ಸಚಿವರ ರಾಜೀನಾಮೆಗೆ ಪ್ರತಿಪಕ್ಷಗಳು ಒತ್ತಾಯಿಸುತ್ತಿರುವುದು ರಾಜಕೀಯ ಪ್ರೇರಿತ ನಡೆ ಎಂದು ಆರೋಪಿಸಿದ ಅವರು, ಪ್ರತಿಭಟನೆಯ ಹೆಸರಿನಲ್ಲಿ ಪ್ರಧಾನಿ ನಿವಾಸದ ಮುಂದೆ ನಡೆಯುತ್ತಿರುವ ಪ್ರತಿಭಟನೆಗಳನ್ನು ಕೆಲವರು ರಾಜಕೀಯ ಲಾಭಕ್ಕಾಗಿ ಬಳಸಿಕೊಳ್ಳಲು ಯತ್ನಿಸುತ್ತಿದ್ದಾರೆ ಎಂದು ಟೀಕಿಸಿದರು.

ನೀಟ್ ಪ್ರತಿಭಟನೆಯಲ್ಲಿ ಭಾಗವಹಿಸಿರುವ ಬಹುತೇಕರಿಗೆ ಪರೀಕ್ಷೆಯೊಂದಿಗೆ ನೇರ ಸಂಬಂಧವೇ ಇಲ್ಲ. ಕೇಂದ್ರ ಸರ್ಕಾರವನ್ನು ವಿರೋಧಿಸುವ ಉದ್ದೇಶದಿಂದ ನೀಟ್ ವಿಷಯವನ್ನು ಬಳಸಿಕೊಂಡು ಹಿಂಸಾತ್ಮಕ ವಾತಾವರಣ ಸೃಷ್ಟಿಸುವ ಪ್ರಯತ್ನ ನಡೆದಿದೆ ಎಂದು ವಿಜಯಕುಮಾರ ಗಡ್ಡಿ ಆರೋಪಿಸಿದ್ದಾರೆ. ದೇಶವನ್ನು ಪ್ರಾದೇಶಿಕತೆ ಮತ್ತು ರಾಜಕೀಯ ಉದ್ದೇಶಗಳ ಹೆಸರಿನಲ್ಲಿ ವಿಭಜಿಸಲು ಕೆಲ ಶಕ್ತಿಗಳು ಯತ್ನಿಸುತ್ತಿದ್ದು, ಇಂತಹ ದುರುದ್ದೇಶದ ಪ್ರತಿಭಟನೆಗಳಿಗೆ ಜನ ಬೆಂಬಲ ನೀಡುವುದಿಲ್ಲ ಎಂದು ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಧರ್ಮೇಂದ್ರ ಪ್ರಧಾನ್ ರಾಜೀನಾಮೆ ಬೆನ್ನಲ್ಲೇ ಸಿಜೆಪಿ ವಿಜಯೋತ್ಸವ



**ವಿಜಯಸಾಕ್ಷಿ ಸುದ್ದಿ, ನವದೆಹಲಿ**

ಕೇಂದ್ರ ಶಿಕ್ಷಣ ಸಚಿವ ಸ್ಥಾನಕ್ಕೆ ಧರ್ಮೇಂದ್ರ ಪ್ರಧಾನ್ ರಾಜೀನಾಮೆ ನೀಡಿದ ಬೆನ್ನಲ್ಲೇ ಕಾಕ್ರೋಚ್ ಜನತಾ ಪಾರ್ಟಿ ವಿಜಯೋತ್ಸವ ಆಚರಿಸಿದೆ. ನೀಟ್-ಯುಜಿ ಸೇರಿದಂತೆ ಸ್ಪರ್ಧಾತ್ಮಕ ಪರೀಕ್ಷೆಗಳಲ್ಲಿನ ಅಕ್ರಮಗಳ ವಿರುದ್ಧ ನಡೆಸಿದ ಹೋರಾಟಕ್ಕೆ ಇದು ವಿದ್ಯಾರ್ಥಿಗಳ ಗೆಲುವು ಎಂದು ಬಣ್ಣಿಸಿರುವ ಸಿಜೆಪಿ, ವಿದ್ಯಾರ್ಥಿಗಳ ಶಕ್ತಿ ಚಿರಾಯುವಾಗಲಿ ಎಂಬ ಸಂದೇಶವನ್ನು ಹಂಚಿಕೊಂಡಿದೆ. ಹೊಸದಾಗಿ ರೂಪುಗೊಂಡ ವಿಡಂಬನಾತ್ಮಕ ರಾಜಕೀಯ ಗುಂಪಾದ ಕಾಕ್ರೋಚ್ ಜನತಾ ಪಾರ್ಟಿ, ನೀಟ್ ಪ್ರಶ್ನೆಪತ್ರಿಕೆ ಸೋರಿಕೆ ಸೇರಿದಂತೆ ವಿವಿಧ ಸ್ಪರ್ಧಾತ್ಮಕ ಪರೀಕ್ಷೆಗಳಲ್ಲಿನ ಅಕ್ರಮಗಳ ವಿರುದ್ಧ ಧರ್ಮೇಂದ್ರ ಪ್ರಧಾನ್ ಅವರ ರಾಜೀನಾಮೆಗೆ ಆಗ್ರಹಿಸಿ ಪ್ರತಿಭಟನೆ ನಡೆಸಿತ್ತು. ಜೂನ್ ತಿಂಗಳಿಂದ ದೆಹಲಿಯ ಜಂತರ್ ಮಂತರ್‌ನಲ್ಲಿ ಸಿಜೆಪಿ ನೇತೃತ್ವದಲ್ಲಿ ವಿದ್ಯಾರ್ಥಿಗಳು ಧರಣಿ ನಡೆಸುತ್ತಿದ್ದು, ಕೇಂದ್ರ ಸರ್ಕಾರದ ವಿರುದ್ಧ ಧ್ವನಿ ಎತ್ತಿದ್ದರು. ಇದೇ ವೇಳೆ ಸಿಜೆಪಿ ಹಾಗೂ ಕೇಂದ್ರ ಸರ್ಕಾರದ ನಡುವೆ ನಡೆದ ಮೂರನೇ ಸುತ್ತಿನ ಮಾತುಕತೆ ಸಂದರ್ಭದಲ್ಲಿ ಧರ್ಮೇಂದ್ರ ಪ್ರಧಾನ್ ತಮ್ಮ ರಾಜೀನಾಮೆ ಘೋಷಿಸಿದ್ದಾರೆ.

## ಸತ್ಯ, ಧರ್ಮ, ಸದಾಚಾರದಿಂದಲೇ ಆತ್ಮಜ್ಞಾನದ ಸಾಕ್ಷಾತ್ಕಾರ

**ವಿಜಯಸಾಕ್ಷಿ ಸುದ್ದಿ, ಗದಗ**



ವೈರಾಗ್ಯ, ಅಂತರಮುಖತೆ, ಸತ್ಯನಿಷ್ಠೆ, ಸದಾ ಚಾರ ಹಾಗೂ ಇಂದ್ರಿಯನಿಗ್ರಹದಿಂದ ಮನಸ್ಸು ಪರಿಶುದ್ಧಗೊಂಡಾಗ ಮಾತ್ರ ಆತ್ಮಜ್ಞಾನ ಮತ್ತು ಬ್ರಹ್ಮಜ್ಞಾನದ ದಾರಿ ತೆರೆದುಕೊಳ್ಳುತ್ತದೆ ಎಂದು ಚಿಂತಕ ಹಾಗೂ ವೈದ್ಯ ಡಾ. ಎಸ್.ಬಿ. ಶೆಟ್ಟರ್ ಹೇಳಿದರು.

ಗದಗ-ಬೆಟಗೇರಿ ಶ್ರೀ ಶಿರಡಿ ಸಾಯಿಬಾಬಾ ಸತ್ಸಂಗದ ವತಿಯಿಂದ ಗುರುಪೂರ್ಣಿಮೆ ಅಂಗವಾಗಿ ನಗರದ ಶ್ರೀ ಶಿರಡಿ ಸಾಯಿಬಾಬಾ ಮಂದಿರದಲ್ಲಿ ಆಯೋಜಿಸಿದ್ದ ಶ್ರೀ ಸಾಯಿ ಸಚ್ಚರಿತ್ರೆ ಪ್ರವಚನ ಮಾಲಿಕೆ-5ರಲ್ಲಿ ಅವರು ಪ್ರವಚನ ನೀಡಿದರು.

ಮನುಷ್ಯನು ಮೊದಲು ತನ್ನ ಮನಸ್ಸು, ಅಹಂಕಾರ ಹಾಗೂ ಇಂದ್ರಿಯಗಳನ್ನು ಗೆಲ್ಲಬೇಕು. ಸದ್ಗುರುವಿನ ಮಾರ್ಗದರ್ಶನ, ವೈರಾಗ್ಯ, ಶ್ರದ್ಧೆ-ಸಬೂರಿ ಮತ್ತು ಅಂತರಮುಖತೆಯ ಮೂಲಕವೇ ಆತ್ಮಸಾಕ್ಷಾತ್ಕಾರ ಸಾಧ್ಯವಾಗುತ್ತದೆ ಎಂದು ಹೇಳಿದರು.

ಸಾಯಿಬಾಬಾ ಸಚ್ಚರಿತ್ರೆಯ ಬ್ರಹ್ಮಜ್ಞಾನದ ತತ್ವವನ್ನು ವಿವರಿಸಿದ ಅವರು, ಸಾಯಿಬಾಬಾ ಭಕ್ತರು ಪ್ರೀತಿ, ಶ್ರದ್ಧೆ ಹಾಗೂ ನಿಷ್ಕಾಮ ಭಾವದಿಂದ ಸಮರ್ಪಿಸಿದ ಕಾಣಿಕೆಯನ್ನು ಮಾತ್ರ ಸ್ವೀಕರಿಸುತ್ತಿದ್ದರು. ಅಹಂಕಾರ ಮತ್ತು ಆಡಂಬರದಿಂದ ಸಲ್ಲಿಸಿದ ಅರ್ಪಣೆಗೆ ಮಹತ್ವ ನೀಡುತ್ತಿರಲಿಲ್ಲ ಎಂದರು.

ಬ್ರಹ್ಮಜ್ಞಾನಕ್ಕಾಗಿ ಬಂದ ಶ್ರೀಮಂತ ವ್ಯಕ್ತಿಯಿಂದ ಸಾಯಿಬಾಬಾ ಕೇಳಿದ ಐದು ರೂಪಾಯಿಗಳು ಹಣವಲ್ಲ, ಪಂಚೇಂದ್ರಿಯಗಳನ್ನು ಪರಮಾತ್ಮನಿಗೆ ಸಮರ್ಪಿಸುವ ಸಂಕೇತವಾಗಿತ್ತು. ಮನಸ್ಸು, ಬುದ್ಧಿ ಹಾಗೂ ಅಹಂಕಾರವನ್ನು ದೇವರಿಗೆ ಅರ್ಪಿಸುವ ಮನೋಭಾವವೇ ಬ್ರಹ್ಮಜ್ಞಾನಕ್ಕೆ ಮೂಲ ಎಂದು ತಿಳಿಸಿದರು.

ಗುರುವಿನ ಮಹತ್ವವನ್ನು ವಿವರಿಸಿದ ಅವರು, ನಾನು ಯಾರು? ಎಂಬ ಆತ್ಮಶೋಧನೆಯ ಪ್ರಶ್ನೆಗೆ ಉತ್ತರ ಕಂಡುಕೊಡುವುದೇ ಸದ್ಗುರುವಿನ ಕಾರ್ಯ. ಧ್ಯಾನದಿಂದ ಸಿಟ್ಟು, ಅಹಂಕಾರ, ಅಸೂಯೆಯಂತಹ ದುರ್ಗುಣಗಳು ದೂರವಾಗುತ್ತವೆ. ಶ್ರದ್ಧೆ ಮತ್ತು ಸಬೂರಿಯೇ ಗುರುವಿಗೆ ಸಲ್ಲಿಸುವ ನಿಜವಾದ ದಕ್ಷಿಣೆ ಎಂದು ಹೇಳಿದರು.


ಮಹೇಶಗೌಡ ತಲೇಗೌಡ್ರ ಸ್ವಾಗತಿಸಿ ಪ್ರಾಸ್ತಾವಿಕವಾಗಿ ಮಾತನಾಡಿದರು. ಅಮೃತ ವಾಲಿ ಕಾರ್ಯಕ್ರಮ ನಿರೂಪಿಸಿ ವಂದಿಸಿದರು. ಸತ್ಸಂಗ ಸಮಿತಿಯ ಪದಾಧಿಕಾರಿಗಳು ಹಾಗೂ ಭಕ್ತರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿದ್ದರು.

**ಜಪ-ತಪಗಳಿಗಿಂತ ಮನಸ್ಸಿನ ಪರಿಶುದ್ಧತೆ ಮುಖ್ಯ. ಸತ್ಯ, ಧರ್ಮ ಮತ್ತು ಸದಾಚಾರವನ್ನು ಅಳವಡಿಸಿಕೊಂಡಾಗ ಮಾತ್ರ ಆತ್ಮಜ್ಞಾನದ ದಾರಿ ತೆರೆದುಕೊಳ್ಳುತ್ತದೆ.**

**- ಡಾ. ಎಸ್.ಬಿ. ಶೆಟ್ಟರ್**

### ದೇವರಭೂಪುರದಲ್ಲಿ ಅಭಿನವ ಗಜದಂಡ ಶಿವಾಚಾರ್ಯರ ಪಟ್ಟಾಧಿಕಾರದ 21ನೇ ವರ್ಧಂತಿ

## ಆಂತರಿಕ ಜೀವನ ಪರಿಶುದ್ಧವಾದಾಗಲೇ ಬದುಕು ಸಾರ್ಥಕ



**ವಿಜಯಸಾಕ್ಷಿ ಸುದ್ದಿ, ಲಿಂಗಸುಗೂರು**

ಭೌತಿಕ ಸಂಪತ್ತು ಮಾತ್ರ ಜೀವನವನ್ನು ಸಾರ್ಥಕಗೊಳಿಸುವುದಿಲ್ಲ. ಧರ್ಮಪ್ರಜ್ಞೆ, ಸದಾಚಾರ ಮತ್ತು ಆಂತರಿಕ ಶುದ್ಧತೆ ಬೆಳೆದಾಗಲೇ ಜೀವನಕ್ಕೆ ನಿಜವಾದ ಅರ್ಥ ದೊರೆಯುತ್ತದೆ ಎಂದು ಬಾಳೆಹೊನ್ನೂರು ಶ್ರೀ ರಂಭಾಪುರಿ ವೀರಸಿಂಹಾಸನ ಮಹಾಸಂಸ್ಥಾನ ಪೀಠದ ಜಗದ್ಗುರು ಡಾ. ವೀರಸೋಮೇಶ್ವರ ಶಿವಾಚಾರ್ಯರು ಹೇಳಿದರು.

ತಾಲೂಕಿನ ದೇವರಭೂಪುರ ಬೃಹನ್ಮಠದಲ್ಲಿ ಅಭಿನವ ಗಜದಂಡ ಶಿವಾಚಾರ್ಯರ ಪಟ್ಟಾಧಿಕಾರದ 21ನೇ ವರ್ಧಂತಿ ಅಂಗವಾಗಿ ಆಯೋಜಿಸಿದ್ದ ಜನಜಾಗೃತಿ ಧರ್ಮ ಸಮಾರಂಭದಲ್ಲಿ ಸಾನ್ನಿಧ್ಯ ವಹಿಸಿ ಆಶೀರ್ವಚನ ನೀಡಿದ ಅವರು, ಕರ್ತವ್ಯಪ್ರಜ್ಞೆ, ಶಿಸ್ತು, ಶ್ರದ್ಧೆ ಹಾಗೂ ಸಮರ್ಪಣಾ ಮನೋಭಾವದಿಂದ ಬದುಕು ಕಟ್ಟಿಕೊಳ್ಳಬೇಕು ಎಂದು ಕರೆ ನೀಡಿದರು.

ಯುವಜನತೆ ಆಲಸ್ಯ ಮತ್ತು ದುರ್ವ್ಯಸನಗಳಿಂದ ದೂರವಿದ್ದು ಸದೃಢ ಸಮಾಜ ನಿರ್ಮಾಣದಲ್ಲಿ ಮುಂಚೂಣಿಯಲ್ಲಿರಬೇಕು ಎಂದು ತಿಳಿಸಿದ ಅವರು, ಅಭಿನವ ಗಜದಂಡ ಶಿವಾಚಾರ್ಯರು ಕಳೆದ 21 ವರ್ಷಗಳಲ್ಲಿ ಸಮಾಜಮುಖಿ ಕಾರ್ಯಗಳ ಮೂಲಕ ಗಮನಾರ್ಹ ಸೇವೆ ಸಲ್ಲಿಸಿದ್ದಾರೆ ಎಂದು ಶ್ಲಾಘಿಸಿದರು.

ಇದೇ ಸಂದರ್ಭದಲ್ಲಿ ಶ್ರೀಗಳಿಗೆ ರಂಭಾಪುರಿ ಪೀಠದ ವತಿಯಿಂದ ರೇಷ್ಮೆ ಮಡಿ, ಫಲ, ಪುಷ್ಪ ಹಾಗೂ ಸ್ಮರಣಿಕೆ ನೀಡಿ ಗೌರವಿಸಲಾಯಿತು.

ಕಾಶಿ ಜಗದ್ಗುರು ಡಾ. ಚಂದ್ರಶೇಖರ ಶಿವಾಚಾರ್ಯರು ಮಾತನಾಡಿ, ಸಮಾಜಕ್ಕೆ ಸನ್ಮಾರ್ಗ ತೋರಿಸುವುದೇ ನಿಜವಾದ ಸಾಧನೆ ಎಂದರು. ಕಾಶಿ ನೂತನ ಜಗದ್ಗುರು ಡಾ. ಮಲ್ಲಿಕಾರ್ಜುನ ವಿಶ್ವಾರಾಧ್ಯ ಶಿವಾಚಾರ್ಯರು ಧರ್ಮಾಚರಣೆಯ ಮಹತ್ವವನ್ನು ವಿವರಿಸಿ, ಸರಳ ಮತ್ತು ಸಾತ್ವಿಕ ಜೀವನವೇ ಸಮಾಜಕ್ಕೆ ಆದರ್ಶವಾಗಬೇಕು ಎಂದು ಹೇಳಿದರು.

ಶಾಸಕ ಮಾನಪ್ಪ ವಜ್ಜಲ, ಮಾಜಿ ಕೇಂದ್ರ ಸಚಿವ ಬಸವರಾಜ ಪಾಟೀಲ ಬೈಯಾಪುರ, ಮಾಜಿ ಸಚಿವ ಅಮರೇಗೌಡ ಪಾಟೀಲ ಬೈಯಾಪುರ ಸೇರಿದಂತೆ ಹಲವರು ಮಾತನಾಡಿ, ಗುರುಗಳ ಮಾರ್ಗದರ್ಶನ ಮತ್ತು ಸಮಾಜ ಸೇವೆಯ ಅಗತ್ಯವನ್ನು ಒತ್ತಿ ಹೇಳಿದರು.

ಅಭಿನವ ಗಜದಂಡ ಶಿವಾಚಾರ್ಯರು ಮಾತನಾಡಿ, ಸೂಕ್ತ ಸಂಸ್ಕಾರ ದೊರೆತರೆ ಪ್ರತಿಯೊಬ್ಬರೂ ಉತ್ತಮ ವ್ಯಕ್ತಿಗಳಾಗಬಹುದು. ಜೀವ ಇರುವವರೆಗೂ ಸರ್ವಜನರ ಒಳಿತಿಗಾಗಿ ಶ್ರಮಿಸುವ ಸಂಕಲ್ಪ ಹೊಂದಿದ್ದೇವೆ ಎಂದು ಹೇಳಿದರು.

ಕಾರ್ಯಕ್ರಮದಲ್ಲಿ ಜಯಶಾಂತಲಿಂಗ ಶಿವಾಚಾರ್ಯರು, ಡಾ. ನಾಗಭೂಷಣ ಶಿವಾಚಾರ್ಯರು, ವರರುದ್ರಮುನಿ ಶಿವಾಚಾರ್ಯರು, ಸೋಮನಾಥ ಶಿವಾಚಾರ್ಯರು, ಪ್ರಶಾಂತ ಸಾಗರ ಶಿವಾಚಾರ್ಯರು, ಶಿವಯೋಗಿ ಶಿವಾಚಾರ್ಯರು ಸೇರಿದಂತೆ ಸುಮಾರು 25ಕ್ಕೂ ಹೆಚ್ಚು ಶಿವಾಚಾರ್ಯರು ಪಾಲ್ಗೊಂಡಿದ್ದರು. ವಿವಿಧ ಕ್ಷೇತ್ರಗಳ ಗಣ್ಯರು, ದಾನಿಗಳನ್ನು ಜಗದ್ಗುರುಗಳು ಸನ್ಮಾನಿಸಿದರು.

ಬೆಳಿಗ್ಗೆ ಅಭಿನವ ಗಜದಂಡ ಶಿವಾಚಾರ್ಯರಿಗೆ ಮಂಗಳಸ್ನಾನ, ಮಹಾರುದ್ರಯಾಗದ ಪೂರ್ಣಾಹುತಿ ಹಾಗೂ ಸಂಜೆ ಶ್ರೀಮಠದ ನೂತನ ರಥ ಉದ್ಘಾಟನೆ ಸೇರಿದಂತೆ ವಿವಿಧ ಧಾರ್ಮಿಕ ಕಾರ್ಯಕ್ರಮಗಳು ಜರುಗಿದವು.

**ಭೌತಿಕ ಬದುಕು ಶ್ರೀಮಂತ ವಾಗುವುದಷ್ಟೇ ಸಾಕಾಗುವುದಿಲ್ಲ. ಧರ್ಮಪ್ರಜ್ಞೆ ಮತ್ತು ಆಂತರಿಕ ಜೀವನ ಪರಿಶುದ್ಧಗೊಂಡಾಗಲೇ ಬದುಕು ಸಾರ್ಥಕವಾಗುತ್ತದೆ.**

**- ಡಾ. ವೀರಸೋಮೇಶ್ವರ ಶಿವಾಚಾರ್ಯರು,** ರಂಭಾಪುರಿ ಜಗದ್ಗುರುಗಳು

### ಮನೋರಮಾ ಸ್ವತಂತ್ರ ಪದವಿ ಪೂರ್ವ ಕಾಲೇಜಿನಲ್ಲಿ ಶೈಕ್ಷಣಿಕ ಚಟುವಟಿಕೆಗಳಿಗೆ ಚಾಲನೆ

## ಪಠ್ಯ, ಪಠ್ಯೇತರ ಚಟುವಟಿಕೆಗಳಿಂದ ವ್ಯಕ್ತಿತ್ವ ವಿಕಸನ



**ವಿಜಯಸಾಕ್ಷಿ ಸುದ್ದಿ, ಗದಗ**

ವಿದ್ಯಾರ್ಥಿಗಳ ಸರ್ವತೋಮುಖ ಬೆಳವಣಿಗೆಗೆ ಪಠ್ಯ ಹಾಗೂ ಪಠ್ಯೇತರ ಚಟುವಟಿಕೆಗಳು ಅತ್ಯಂತ ಅಗತ್ಯವಾಗಿದ್ದು, ಅವು ವ್ಯಕ್ತಿತ್ವ ವಿಕಸನಕ್ಕೆ ಭದ್ರ ಬುನಾದಿಯಾಗುತ್ತವೆ ಎಂದು ವಿಡಿಎಸ್ ಬಾಲಕರ ಸಂಯುಕ್ತ ಪದವಿ ಪೂರ್ವ ಕಾಲೇಜಿನ ಪ್ರಾಚಾರ್ಯ ಎಂ.ಸಿ. ಕಟ್ಟಿಮನಿ ಹೇಳಿದರು.

ನಗರದ ಶ್ರೀಮತಿ ಮನೋರಮಾ ಬಾಯಿ ಮೋಹನ್ ಕುಡತರಕರ್ ಫೌಂಡೇಶನ್ ವತಿಯಿಂದ ನಡೆಸಲಾಗುತ್ತಿರುವ ಮನೋರಮಾ ಸ್ವತಂತ್ರ ಪದವಿ ಪೂರ್ವ ಕಾಲೇಜಿನಲ್ಲಿ ಹಮ್ಮಿಕೊಂಡಿದ್ದ ಪಠ್ಯ ಹಾಗೂ ಪಠ್ಯೇತರ ಚಟುವಟಿಕೆಗಳ ಉದ್ಘಾಟನಾ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

ಕಾಲೇಜಿನ ಪ್ರಾಚಾರ್ಯ ಬಿ.ಎಸ್. ಹಿರೇಮಠ ಮಾತನಾಡಿ, ವಿದ್ಯಾರ್ಥಿಗಳು ಶಿಸ್ತು ಮತ್ತು ಸಂಯಮದಿಂದ ವರ್ತಿಸಬೇಕು. ಕಾಲೇಜಿನಲ್ಲಿ ನಡೆಯುವ ಎಲ್ಲ ಚಟುವಟಿಕೆಗಳಲ್ಲಿ ಸಕ್ರಿಯವಾಗಿ ಭಾಗವಹಿಸಿ ಗುರುಗಳ ಮಾರ್ಗದರ್ಶನದಲ್ಲಿ ಮುನ್ನಡೆಯಬೇಕು. ವಿದ್ಯಾರ್ಥಿಗಳಿಗೆ ಮೊಬೈಲ್ ಬಳಕೆಯನ್ನು ಸಂಪೂರ್ಣವಾಗಿ ನಿಷೇಧಿಸಲಾಗಿದೆ ಎಂದು ತಿಳಿಸಿದರು.

ಕಾರ್ಯಕ್ರಮದ ಅಧ್ಯಕ್ಷತೆಯನ್ನು ಸಂಸ್ಥೆಯ ಅಧ್ಯಕ್ಷ ಎನ್.ಎಂ. ಕುಡತರಕರ್ ವಹಿಸಿದ್ದರು.

ಈ ಸಂದರ್ಭದಲ್ಲಿ ಸಂಸ್ಥೆಯ ನಿರ್ದೇಶಕರಾದ ಮಂಜುನಾಥ ಕುಡತರರ್ಕ, ಸಂಜಯಕುಮಾರ ಕುಡತರರ್ಕ, ಚೇತನ ಕುಡತರರ್ಕ, ಆಡಳಿತಾಧಿಕಾರಿ ಕಿಶೋರ ಮುದಗಲ್ಲ, ಸಂಯೋಜಕಿ ಪ್ರೊ. ಶಾಹಿದಾ ಶಿರಹಟ್ಟಿ, ಸಿಬ್ಬಂದಿ ಹಾಗೂ ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

**ಪಠ್ಯ ಹಾಗೂ ಪಠ್ಯೇತರ ಚಟುವಟಿಕೆಗಳಲ್ಲಿ ಸಕ್ರಿಯವಾಗಿ ಪಾಲ್ಗೊಳ್ಳುವುದರಿಂದ ವಿದ್ಯಾರ್ಥಿಗಳ ವ್ಯಕ್ತಿತ್ವ ವಿಕಸನಗೊಳ್ಳುತ್ತದೆ. ಗುರುಗಳು ಹಾಗೂ ಹಿರಿಯರನ್ನು ಗೌರವಿಸಿ ಆದರ್ಶ ಬದುಕು ರೂಪಿಸಿಕೊಳ್ಳಬೇಕು.**

**- ಎಂ.ಸಿ. ಕಟ್ಟಿಮನಿ,** ಪ್ರಾಚಾರ್ಯರು

## ಸಂಕ್ಷಿಪ್ತ ಸುದ್ದಿಗಳು

# ರಾಜೀನಾಮೆಯಿಂದ ಹೋರಾಟ ಮುಗಿದಿಲ್ಲ: ಜಂತರ್ ಮಂತರ್‌ನಲ್ಲಿ ಪ್ರತಿಭಟನೆ ಮುಂದುವರಿಕೆ ಘೋಷಿಸಿದ ಸಿಜೆಪಿ

**ವಿಜಯಸಾಕ್ಷಿ ಸುದ್ದಿ, ನವದೆಹಲಿ**

ಕೇಂದ್ರ ಶಿಕ್ಷಣ ಸಚಿವ ಧರ್ಮೇಂದ್ರ ಪ್ರಧಾನ್ ರಾಜೀನಾಮೆ



ನೀಡಿರುವುದನ್ನು ಸ್ವಾಗತಿಸಿರುವ ಕಾಕ್ರೋಚ್ ಜನತಾ ಪಾರ್ಟಿ, ಇದು ತಮ್ಮ ಹೋರಾಟದ ಮೊದಲ ಗೆಲುವು ಮಾತ್ರ ಎಂದು ಘೋಷಿಸಿದೆ. ಉಳಿದ ಪ್ರಮುಖ ಬೇಡಿಕೆಗಳು ಈಡೇರುವವರೆಗೂ ದೆಹಲಿಯ ಜಂತರ್ ಮಂತರ್‌ನಲ್ಲಿ ಪ್ರತಿಭಟನೆ ನಿರಂತರವಾಗಿ ಮುಂದುವರಿಯಲಿದೆ ಎಂದು ಪಕ್ಷ ಸ್ಪಷ್ಟಪಡಿಸಿದೆ.

ಸಿಜೆಪಿ ತನ್ನ ಅಧಿಕೃತ ಎಕ್ಸ್ ಖಾತೆಯಲ್ಲಿ ನವೀಕರಿಸಿದ ಬೇಡಿಕೆಗಳ ಪಟ್ಟಿಯನ್ನು ಪ್ರಕಟಿಸಿದ್ದು, ಧರ್ಮೇಂದ್ರ ಪ್ರಧಾನ್ ರಾಜೀನಾಮೆ ಬೇಡಿಕೆ ಈಡೇರಿರುವುದಕ್ಕೆ ಗುರುತು ಹಾಕಿದೆ. ಆದರೆ ಇನ್ನೂ ಮೂರು ಪ್ರಮುಖ ಬೇಡಿಕೆಗಳು ಬಾಕಿಯಿದ್ದು, ಅವುಗಳನ್ನು ಈಡೇರಿಸುವಂತೆ ಕೇಂದ್ರ ಸರ್ಕಾರವನ್ನು ಮತ್ತೊಮ್ಮೆ ಒತ್ತಾಯಿಸಿದೆ.

ಪಕ್ಷದ ಪ್ರಮುಖ ಬೇಡಿಕೆಗಳೆಂದರೆ ಆತ್ಮಹತ್ಯೆ ಮಾಡಿಕೊಂಡ ಎಲ್ಲಾ ವಿದ್ಯಾರ್ಥಿಗಳ ಕುಟುಂಬಗಳಿಗೆ ₹1 ಕೋಟಿ ಪರಿಹಾರ ನೀಡುವುದು, ಪ್ರತಿಭಟನೆಯಲ್ಲಿ ಭಾಗವಹಿಸಿದ ಯಾವುದೇ ವಿದ್ಯಾರ್ಥಿಗಳ ವಿರುದ್ಧ ಕಾನೂನು ಕ್ರಮ ಕೈಗೊಳ್ಳದಿರುವುದು ಹಾಗೂ ಆರ್‌ಎಎಫ್ ಮತ್ತು ದೆಹಲಿ ಪೊಲೀಸರು ಸಾರ್ವಜನಿಕವಾಗಿ ಕ್ಷಮೆಯಾಚಿಸುವುದು.

ಜಂತರ್ ಮಂತರ್ ಮಾತ್ರವಲ್ಲ, ಇಡೀ ದೇಶವೇ ಈ ಬೇಡಿಕೆಗಳು ಈಡೇರುವುದನ್ನು ಕಾಯುತ್ತಿದೆ. ಎಲ್ಲ ಬೇಡಿಕೆಗಳು ಈಡೇರುವವರೆಗೂ ನಮ್ಮ ಹೋರಾಟ ನಿಲ್ಲುವುದಿಲ್ಲ ಎಂದು ಸಿಜೆಪಿ ತನ್ನ ಹೇಳಿಕೆಯಲ್ಲಿ ತಿಳಿಸಿದೆ.

ಪಕ್ಷದ ಸಂಸ್ಥಾಪಕ ಅಭಿಜಿತ್ ದೀಪ್ಕೆ, ಈ ಸರ್ಕಾರದಲ್ಲಿ ರಾಜೀನಾಮೆ ಆಗುವುದೇ ಇಲ್ಲ ಎಂದು ಹೇಳಲಾಗುತ್ತಿತ್ತು. ಆದರೆ ನಾವು ಅದನ್ನು ಸಾಧ್ಯ ಮಾಡಿದ್ದೇವೆ. ಇದು ಮೋದಿ ಸರ್ಕಾರದ ಮೊದಲ ರಾಜೀನಾಮೆ ಎಂದು ಪ್ರತಿಕ್ರಿಯಿಸಿದ್ದಾರೆ.

ಧರ್ಮೇಂದ್ರ ಪ್ರಧಾನ್ ರಾಜೀನಾಮೆ ಸುದ್ದಿ ಹೊರಬಿದ್ದ ತಕ್ಷಣ ಜಂತರ್ ಮಂತರ್‌ನಲ್ಲಿ ಪ್ರತಿಭಟನೆ ನಡೆಸುತ್ತಿದ್ದ ವಿದ್ಯಾರ್ಥಿಗಳು ಹಾಗೂ ಬೆಂಬಲಿಗರು ಸಂಭ್ರಮಾಚರಣೆ ನಡೆಸಿ, ಇದನ್ನು ತಮ್ಮ ಹೋರಾಟದ ಮೊದಲ ಮಹತ್ವದ ಗೆಲುವು ಎಂದು ಬಣ್ಣಿಸಿದರು.


ಇದೇ ವೇಳೆ ಧರ್ಮೇಂದ್ರ ಪ್ರಧಾನ್ ತಮ್ಮ ರಾಜೀನಾಮೆ ಪತ್ರವನ್ನು ಪ್ರಧಾನಿ ನರೇಂದ್ರ ಮೋದಿ ಅವರಿಗೆ ಸಲ್ಲಿಸಿದ್ದು, ದೇಶದ ಯುವಜನರು ಗೊಂದಲದ ವಾತಾವರಣಕ್ಕೆ ಒಳಗಾಗದಂತೆ ನೋಡಿಕೊಳ್ಳುವ ಉದ್ದೇಶದಿಂದ ಈ ನಿರ್ಧಾರ ಕೈಗೊಂಡಿರುವುದಾಗಿ ತಿಳಿಸಿದ್ದಾರೆ.

### ಧರ್ಮೇಂದ್ರ ಪ್ರಧಾನ್ ರಾಜೀನಾಮೆ ಪ್ರಜಾಪ್ರಭುತ್ವದ ಗೆಲುವು: ಅರವಿಂದ್ ಕೇಜ್ರಿವಾಲ್

# ನೀಟ್ ವ್ಯವಸ್ಥೆಯಲ್ಲಿ ಮಹತ್ವದ ಸುಧಾರಣೆ ಅಗತ್ಯ

**ವಿಜಯಸಾಕ್ಷಿ ಸುದ್ದಿ, ನವದೆಹಲಿ**

ಕೇಂದ್ರ ಶಿಕ್ಷಣ ಸಚಿವ ಧರ್ಮೇಂದ್ರ ಪ್ರಧಾನ್ ರಾಜೀನಾಮೆ



ನೀಡಿರುವುದನ್ನು ಆಮ್ ಆದ್ಮಿ ಪಕ್ಷದ ರಾಷ್ಟ್ರೀಯ ಸಂಚಾಲಕ ಅರವಿಂದ್ ಕೇಜ್ರಿವಾಲ್ ಸ್ವಾಗತಿಸಿದ್ದು, ಇದನ್ನು ಪ್ರಜಾಪ್ರಭುತ್ವದ ಗೆಲುವು ಎಂದು ಬಣ್ಣಿಸಿದ್ದಾರೆ. ಇದೇ ವೇಳೆ ಭವಿಷ್ಯದಲ್ಲಿ ಪ್ರಶ್ನೆಪತ್ರಿಕೆ ಸೋರಿಕೆ ಪ್ರಕರಣಗಳಿಗೆ ಶಾಶ್ವತ ತಡೆ ಹಾಕಲು ನೀಟ್ ಪರೀಕ್ಷಾ ವ್ಯವಸ್ಥೆಯಲ್ಲಿ ವ್ಯಾಪಕ ಸುಧಾರಣೆಗಳನ್ನು ಜಾರಿಗೆ ತರಬೇಕೆಂದು ಕೇಂದ್ರ ಸರ್ಕಾರವನ್ನು ಒತ್ತಾಯಿಸಿದ್ದಾರೆ. ಎಕ್ಸ್ ಖಾತೆಯಲ್ಲಿ ವಿಡಿಯೋ ಸಂದೇಶ ಹಂಚಿಕೊಂಡಿರುವ ಕೇಜ್ರಿವಾಲ್, ದೇಶದ ಯುವಕರು ಹಾಗೂ ಜೆನ್-ಝಿ ಪೀಳಿಗೆಯ ನಿರಂತರ ಹೋರಾಟದ ಮುಂದೆ ಕೇಂದ್ರ ಸರ್ಕಾರ ತಲೆಬಾಗಬೇಕಾದ ಪರಿಸ್ಥಿತಿ ನಿರ್ಮಾಣವಾಗಿದೆ ಎಂದು ಹೇಳಿದ್ದಾರೆ.

ಧರ್ಮೇಂದ್ರ ಪ್ರಧಾನ್ ಅವರ ರಾಜೀನಾಮೆ ಪ್ರಜಾಪ್ರಭುತ್ವದ ಗೆಲುವು. ಇದರಿಂದ ಸಂವಿಧಾನದ ಮೌಲ್ಯಗಳ ಮೇಲಿನ ಜನರ ನಂಬಿಕೆ ಮತ್ತಷ್ಟು ಬಲಗೊಳ್ಳಲಿದೆ. ಆದರೆ ಕೇವಲ ರಾಜೀನಾಮೆಯಿಂದ ಸಮಸ್ಯೆ ಪರಿಹಾರವಾಗುವುದಿಲ್ಲ. ಪ್ರಶ್ನೆಪತ್ರಿಕೆ ಸೋರಿಕೆಗಳಿಗೆ ಶಾಶ್ವತ ಕಡಿವಾಣ ಹಾಕಲು ನೀಟ್ ಪರೀಕ್ಷಾ ವ್ಯವಸ್ಥೆಯಲ್ಲಿ ಮೂಲಭೂತ ಬದಲಾವಣೆಗಳನ್ನು ತರಬೇಕು ಎಂದು ಕೇಜ್ರಿವಾಲ್ ಒತ್ತಾಯಿಸಿದ್ದಾರೆ.

ಯುವ ಹೋರಾಟಗಾರರಿಗೆ ಅಭಿನಂದನೆ ಸಲ್ಲಿಸಿರುವ ಅವರು, ನಿಮ್ಮ ನಿರಂತರ ಹೋರಾಟದಿಂದಲೇ ಕೇಂದ್ರ ಸರ್ಕಾರ ಈ ನಿರ್ಧಾರ ಕೈಗೊಂಡಿದೆ. ಜನರಿಗೆ ಪ್ರಜಾಪ್ರಭುತ್ವದ ಮೇಲೆ ಮತ್ತೆ ವಿಶ್ವಾಸ ಮೂಡಬೇಕಾದರೆ ಪರೀಕ್ಷಾ ವ್ಯವಸ್ಥೆಯನ್ನು ಸಂಪೂರ್ಣ ಪಾರದರ್ಶಕಗೊಳಿಸಬೇಕು ಎಂದು ಹೇಳಿದ್ದಾರೆ.

ಇದೇ ವೇಳೆ ಎಎಪಿ ಹಿರಿಯ ನಾಯಕ ಗೋಪಾಲ್ ರೈ ಕೂಡ ಧರ್ಮೇಂದ್ರ ಪ್ರಧಾನ್ ರಾಜೀನಾಮೆಯನ್ನು ಸ್ವಾಗತಿಸಿದ್ದು, ಬಿಹಾರ ಮತ್ತು ಗುಜರಾತ್‌ನಲ್ಲಿ ಪ್ರತಿಭಟನೆ ವೇಳೆ ಬಂಧಿಸಲ್ಪಟ್ಟ ವಿದ್ಯಾರ್ಥಿಗಳನ್ನು ತಕ್ಷಣವೇ ಬಿಡುಗಡೆ ಮಾಡಬೇಕೆಂದು ಆಗ್ರಹಿಸಿದ್ದಾರೆ.

ನೀಟ್ ಪ್ರಶ್ನೆಪತ್ರಿಕೆ ಸೋರಿಕೆ ಪ್ರಕರಣದ ಹಿನ್ನೆಲೆಯಲ್ಲಿ ದೆಹಲಿ ಸೇರಿದಂತೆ ದೇಶಾದ್ಯಂತ ವಿದ್ಯಾರ್ಥಿಗಳ ಪ್ರತಿಭಟನೆ ತೀವ್ರಗೊಂಡಿದ್ದ ಬೆನ್ನಲ್ಲೇ ಧರ್ಮೇಂದ್ರ ಪ್ರಧಾನ್ ರಾಜೀನಾಮೆ ನೀಡಿದ್ದು, ಇತ್ತೀಚಿನ ಬೆಳವಣಿಗೆಗಳು ತಮಗೆ ನೋವು ತಂದಿವೆ ಎಂದು ಅವರು ರಾಜೀನಾಮೆ ಪತ್ರದಲ್ಲಿ ಉಲ್ಲೇಖಿಸಿದ್ದಾರೆ.

# ಇಂದು ಶರಣ ವೈದ್ಯ ಸಂಗಣ್ಣನವರ ಕುರಿತು ಉಪನ್ಯಾಸ

**ವಿಜಯಸಾಕ್ಷಿ ಸುದ್ದಿ, ಗದಗ**

ಗದಗ-ಬೆಟಗೇರಿ ಬಸವದಳದ ವತಿಯಿಂದ ಜುಲೈ 26ರಂದು ಬೆಳಿಗ್ಗೆ 10 ಗಂಟೆಗೆ ಶಿವಾನಂದ ನಗರದ ಬಸವ ಸಮುದಾಯ



ಭವನದಲ್ಲಿ ನಡೆಯಲಿರುವ 1708ನೇ ಶರಣ ಸಂಗಮ ಕಾರ್ಯಕ್ರಮದಲ್ಲಿ ಶರಣ ವೈದ್ಯ ಸಂಗಣ್ಣನವರ ಕುರಿತು ವಿಶೇಷ ಉಪನ್ಯಾಸ ಏರ್ಪಡಿಸಲಾಗಿದೆ.

ಕಾರ್ಯಕ್ರಮದ ಅಧ್ಯಕ್ಷತೆಯನ್ನು ಬಸವದಳದ ಅಧ್ಯಕ್ಷ ವಿ.ಕೆ. ಕರೇಗೌಡ್ರ ವಹಿಸಲಿದ್ದು, ಶರಣತತ್ವ ಚಿಂತಕಿ ಶರಣೆ ನೀಲಲೋಚನಾ ಸಿ. ಹಂಚಿನಾಳ ಅವರು ಶರಣ ವೈದ್ಯ ಸಂಗಣ್ಣನವರು ವಿಷಯದ ಕುರಿತು ಉಪನ್ಯಾಸ ನೀಡಲಿದ್ದಾರೆ.

ಬಸವದಳದ ಸದಸ್ಯರು, ಶರಣ ಸಾಹಿತ್ಯಾಭಿಮಾನಿಗಳು ಹಾಗೂ ಸಾರ್ವಜನಿಕರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸುವಂತೆ ಬಸವದಳದ ಕಾರ್ಯಾಧ್ಯಕ್ಷ ಪ್ರಕಾಶ ಅಸುಂಡಿ ಪ್ರಕಟಣೆಯಲ್ಲಿ ಕೋರಿದ್ದಾರೆ.

---

ವಿಶ್ವ ಅಂಗಾಂಗ ದಾನ ದಿನ ಅಂಗವಾಗಿ ಜಾಗೃತಿ ಅಭಿಯಾನಕ್ಕೆ ಶಾಸಕ ಎಚ್.ಕೆ.ಪಾಟೀಲ ಕರೆ

# ಅಂಗಾಂಗ ದಾನದಿಂದ ಜೀವದಾನ ಸಾಧ್ಯ




**ವಿಜಯಸಾಕ್ಷಿ ಸುದ್ದಿ, ಗದಗ**

ಅಂಗಾಂಗ ದಾನವು ನಿಸ್ವಾರ್ಥ ಸೇವೆಯ ಪ್ರತೀಕವಾಗಿದ್ದು, ಒಬ್ಬ ದಾನಿಯ ಮೂಲಕ ಎಂಟು ಜನರ ಜೀವ ಉಳಿಸಲು ಸಾಧ್ಯ. ಆದ್ದರಿಂದ ಅಂಗಾಂಗ ದಾನದ ಕುರಿತು ಸಮಾಜದಲ್ಲಿ ಹೆಚ್ಚಿನ ಜಾಗೃತಿ ಮೂಡಿಸುವ ಅಗತ್ಯವಿದೆ ಎಂದು ಮಾಜಿ ಸಚಿವ ಹಾಗೂ ಗದಗ ಶಾಸಕ ಡಾ. ಎಚ್.ಕೆ. ಪಾಟೀಲ್ ಹೇಳಿದರು. ವಿಶ್ವ ಅಂಗಾಂಗ ದಾನ ದಿನದ ಅಂಗವಾಗಿ ಎಚ್.ಕೆ. ಪಾಟೀಲ್ ಸೇವಾ ತಂಡದ ವತಿಯಿಂದ ಆಯೋಜಿಸಿದ್ದ ಆನ್‌ಲೈನ್ ಸಮಾಲೋಚನಾ ಸಭೆಯಲ್ಲಿ ಮಾತನಾಡಿದ ಅವರು, ಮರಣಾನಂತರ ದೇಹವನ್ನು ದಾನ ಮಾಡುವ ಮೂಲಕ ಇನ್ನೊಬ್ಬರ ಬದುಕಿಗೆ ಹೊಸ ಆಶಾಕಿರಣ ನೀಡಬಹುದು.

> **ಒಬ್ಬ ಅಂಗಾಂಗ ದಾನಿಯಿಂದ ಎಂಟು ಜನರ ಜೀವ ಉಳಿಯಬಹುದು. ಅಂಗಾಂಗ ದಾನವು ಪರೋಪಕಾರ ಮತ್ತು ನಿಸ್ವಾರ್ಥ ಸೇವೆಯ ಅತ್ಯುನ್ನತ ರೂಪವಾಗಿದೆ.**
> **- ಡಾ. ಎಚ್.ಕೆ. ಪಾಟೀಲ್**, ಶಾಸಕ

ಅಂಗಾಂಗಗಳ ಕೊರತೆಯಿಂದ ಪ್ರತಿವರ್ಷ ಸಾವಿರಾರು ಮಂದಿ ಜೀವ ಕಳೆದುಕೊಳ್ಳುತ್ತಿರುವುದು ಆತಂಕಕಾರಿ ಬೆಳವಣಿಗೆಯಾಗಿದ್ದು, ಈ ಕುರಿತು ಜನಜಾಗೃತಿ ಮೂಡಿಸುವುದು ಪ್ರತಿಯೊಬ್ಬರ ಜವಾಬ್ದಾರಿಯಾಗಿದೆ ಎಂದರು.

ಎಚ್.ಕೆ. ಪಾಟೀಲ್ ಸೇವಾ ತಂಡದ ಅಧ್ಯಕ್ಷ ಪ್ರಭು ಬುರಬುರೆ ನೇತೃತ್ವದಲ್ಲಿ ನಡೆದ ಸಭೆಯಲ್ಲಿ ರಕ್ತದಾನ ಹಾಗೂ ಅಂಗಾಂಗ ದಾನದ ಕುರಿತು ಸಾರ್ವಜನಿಕರಲ್ಲಿ ಅರಿವು ಮೂಡಿಸಲು ಕೈಗೊಳ್ಳಬೇಕಾದ ಕಾರ್ಯಕ್ರಮಗಳ ಬಗ್ಗೆ ಚರ್ಚಿಸಲಾಯಿತು.

ಸಭೆಯಲ್ಲಿ ಡಾ. ಎಸ್.ಆರ್. ನಾಗನೂರ, ಬಿ.ಬಿ. ಅಸೂಟಿ, ಅಶೋಕ ಮಂದಾಲಿ, ಸಿದ್ದಲಿಂಗೇಶ ಪಾಟೀಲ್, ಡಾ. ವೆಂಕಟೇಶ್ ರಾಠೋಡ್, ದೇವೇಂದ್ರ, ಕಳಸಾಪೂರ, ಡಾ. ಪ್ಯಾರಾಅಲಿ ನೂರಾನಿ, ಮಹಮ್ಮದ್ ಝುಫರ್ ಖಾಜಿ, ಶಿವಪ್ಪ ಬಳ್ಳಾರಿ, ಡಾ. ಸ್ಟೀಫನ್, ಡಾ. ಬಸಯ್ಯ, ರಾಘವೇಂದ್ರ ಪಾಲನಕರ, ಸಮೀರ್ ಕೊಟ್ಟೂರು, ದಾದಾಪೀರ ಮುಂಡರಗಿ, ವಿಜಯಕುಮಾರ ಹಾಲಮಠ ಸೇರಿದಂತೆ ಹಲವರು ಉಪಸ್ಥಿತರಿದ್ದರು.

# ಗ್ರಾಮಗಳ ಅಭಿವೃದ್ಧಿಯಿಂದಲೇ ದೇಶದ ಪ್ರಗತಿ ಸಾಧ್ಯ



**ವಿಜಯಸಾಕ್ಷಿ ಸುದ್ದಿ, ಡಂಬಳ**

ಗ್ರಾಮಗಳ ಸರ್ವಾಂಗೀಣ ಅಭಿವೃದ್ಧಿಯೇ ದೇಶದ ಪ್ರಗತಿಗೆ ಭದ್ರ ಅಡಿಪಾಯವಾಗಿದ್ದು, ಜನಪರ ಯೋಜನೆಗಳ ಮೂಲಕ ಗ್ರಾಮೀಣ ಜನರ ಬದುಕನ್ನು ಬಲಪಡಿಸುವ ಕೆಲಸವನ್ನು ಕಾಂಗ್ರೆಸ್ ಸರ್ಕಾರ ಮಾಡುತ್ತಿದೆ ಎಂದು ರೋಣ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿ ಅಧ್ಯಕ್ಷ ಮಿಥುನ ಜಿ. ಪಾಟೀಲ ಹೇಳಿದರು.

ಡಂಬಳ ಹೋಬಳಿಯ ಬರದೂರು ಗ್ರಾಮದಲ್ಲಿ ಕಾಶೀಲಿಂಗೇಶ್ವರ ದೇವಸ್ಥಾನ ಸಮೀಪದ ಬೆಳಗಟ್ಟಿಗೆ ಸಂಪರ್ಕಿಸುವ ರಸ್ತೆ ಹಾಗೂ ಎಸ್‌ಸಿ ಕಾಲೋನಿಯಲ್ಲಿ ₹75 ಲಕ್ಷ ವೆಚ್ಚದ ಸಿಸಿ ರಸ್ತೆ ಮತ್ತು ಚರಂಡಿ ನಿರ್ಮಾಣ ಕಾಮಗಾರಿಗೆ ಭೂಮಿಪೂಜೆ ನೆರವೇರಿಸಿ, ಬಳಿಕ ಸರ್ಕಾರಿ ಕನ್ನಡ ಹಿರಿಯ ಪ್ರಾಥಮಿಕ ಶಾಲೆಯ ವಿದ್ಯಾರ್ಥಿಗಳಿಗೆ ಡೆಸ್ಕ್, ಶಾಲಾ ಬ್ಯಾಗ್ ಹಾಗೂ ನೋಟ್‌ಬುಕ್ ವಿತರಿಸಿ ಅವರು ಮಾತನಾಡಿದರು.

ರಾಜ್ಯ ಸರ್ಕಾರದ ಗೃಹಲಕ್ಷ್ಮಿ, ಶಕ್ತಿ, ಅನ್ನಭಾಗ್ಯ, ಯುವನಿಧಿ ಹಾಗೂ ಗೃಹಜ್ಯೋತಿ ಯೋಜನೆಗಳಿಗೆ ವಾರ್ಷಿಕ ₹56 ಸಾವಿರ ಕೋಟಿ ವೆಚ್ಚ ಮಾಡಲಾಗುತ್ತಿದ್ದು, ಈ ಯೋಜನೆಗಳು ಜನಸಾಮಾನ್ಯರ ಜೀವನಮಟ್ಟ ಸುಧಾರಿಸಲು ನೆರವಾಗುತ್ತಿವೆ ಎಂದು ಹೇಳಿದರು.

ಮುಂಡರಗಿ ತಾಲೂಕು ಗ್ಯಾರಂಟಿ ಸಮಿತಿ ಅಧ್ಯಕ್ಷ ಡಿ.ಡಿ. ಮೋರನಾಳ ಮಾತನಾಡಿ, ಪಂಚಾಯತ್ ರಾಜ್ ವ್ಯವಸ್ಥೆ ಗ್ರಾಮೀಣ ಅಭಿವೃದ್ಧಿಗೆ ಬಲ ನೀಡಿದ್ದು, ಗ್ರಾಮ ಪಂಚಾಯಿತಿಗಳಿಗೆ ಹೆಚ್ಚಿನ ಅಧಿಕಾರ ಮತ್ತು ಸಂಪನ್ಮೂಲ ದೊರೆತಾಗ ಮಾತ್ರ ಗ್ರಾಮಗಳ ಅಭಿವೃದ್ಧಿ ವೇಗ ಪಡೆಯುತ್ತದೆ ಎಂದು ಹೇಳಿದರು.

ಮುಖಂಡ ಪ್ರಕಾಶ ಸಜ್ಜನ ಮಾತನಾಡಿ, ಬರದೂರು ಗ್ರಾಮದ ಅಭಿವೃದ್ಧಿಗೆ ಶಾಸಕ ಜಿ.ಎಸ್. ಪಾಟೀಲ ವಿಶೇಷ ಅನುದಾನ ಒದಗಿಸಿದ್ದು, ರಸ್ತೆ, ಕೆರೆ ಅಭಿವೃದ್ಧಿ ಸೇರಿದಂತೆ ವಿವಿಧ ಕಾಮಗಾರಿಗಳ ಮೂಲಕ ರೈತರ ಹಿತ ಕಾಪಾಡುವ ಕೆಲಸ ಮಾಡಿದ್ದಾರೆ ಎಂದು ಹೇಳಿದರು.

ಕಾರ್ಯಕ್ರಮದಲ್ಲಿ ಇಓ ವಿಜಯಕುಮಾರ ಬೆಣ್ಣಿ, ಅಭಿಯಂತರರಾದ ನಾಗರಾಜ, ನಿಂಗಪ್ಪ ತೋಟಪ್ಪನವರ, ಗೌಸುಸಾಬ ದೋಟಿಹಾಳ, ಶರಣಪ್ಪ ಕಲ್ಲಹಳ್ಳಿ, ಮಂಜಪ್ಪ ಬೆಳಗಟ್ಟಿ, ಯಮನಪ್ಪ ಚುಂಗಿನ, ಸೋಮು ಹೈತಾಪುರ, ಪ್ರಕಾಶ ನಾಡಗೌಡರ, ಈಶಪ್ಪ ಗೋಡಿ, ಅಮರೇಶ ಹಿರೇಮಠ, ನಾಗರಾಜ ಸಜ್ಜನ, ಯಮನಪ್ಪ ಹಳ್ಳಿಕೇರಿ, ದುರಗವ್ವ ತಳಗೇರಿ, ಮಂಜಪ್ಪ ಕುರಿ, ಶಂಕ್ರಪ್ಪ ಮ್ಯಾಗೇರಿ, ದೇವಪ್ಪ ಶಿರೂರ, ಬಸಪ್ಪ ಮೇಟಿ, ಮಲ್ಲೇಶ ಕಟ್ಟಿಮನಿ, ಶ್ರೀಕಾಂತ ಜನಸೂರ, ನಿಂಗಪ್ಪ ಗೋಡಿ, ನೀಲಪ್ಪ ಶಿರೋಳ, ವೀರೇಶ ರೋಣದ, ಹಂಚಾಳಪ್ಪ ಉಪ್ಪಾರ, ನಿಂಗಪ್ಪ ತಳಗೇರ, ಬಸುರಾಜ ಬಾರಕೇರ ಸೇರಿದಂತೆ ಹಲವರು ಉಪಸ್ಥಿತರಿದ್ದರು.

> **ಗ್ರಾಮಗಳು ಅಭಿವೃದ್ಧಿಯಾದರೆ ಮಾತ್ರ ದೇಶದ ಅಭಿವೃದ್ಧಿ ಸಾಧ್ಯ. ಜನರ ಬದುಕಿನ ಗುಣಮಟ್ಟ ಸುಧಾರಿಸುವುದೇ ಸರ್ಕಾರದ ಯೋಜನೆಗಳ ಮುಖ್ಯ ಉದ್ದೇಶ.**
> **- ಮಿಥುನ ಜಿ. ಪಾಟೀಲ,**
> ರೋಣ ಗ್ಯಾರಂಟಿ ಸಮಿತಿ ಅಧ್ಯಕ್ಷ

---

ಸಮಾಜಮುಖಿ ಸೇವಾ ಯೋಜನೆಗಳಿಗೆ

# ಇನ್ನರ್ ವೀಲ್ ಕ್ಲಬ್ ಒತ್ತು



**ವಿಜಯಸಾಕ್ಷಿ ಸುದ್ದಿ, ಗದಗ**

ಇನ್ನರ್ ವೀಲ್ ಕ್ಲಬ್ ಗದಗ-ಬೆಟಗೇರಿಯ ಆಡಳಿತ ಮಂಡಳಿ ಹಾಗೂ ಸರ್ವ ಸದಸ್ಯರ ಮಾಸಿಕ ಸಭೆ ನಗರದ ರೋಟರಿ ಐ ಕೇರ್ ಸೆಂಟರ್‌ನಲ್ಲಿ ನಡೆಯಿತು.

ಸಭೆಯು ಆರಂಭದಲ್ಲಿ ಶ್ರೀಮತಿ ಪುಷ್ಪಾ ಭಂಡಾರಿ ಹಾಗೂ ಶ್ರೀಮತಿ ವಿದ್ಯಾ ಗಂಜಿಹಾಳ ಇನ್ನರ್ ವೀಲ್ ಪ್ರಾರ್ಥನೆ ನೆರವೇರಿಸಿದರು. ಕಾರ್ಯದರ್ಶಿ ಪೂಜಾ ಭೂಮಾ ಹಿಂದಿನ ಸಭೆಯ ನಡಾವಳಿಯನ್ನು ಮಂಡಿಸಿ ಸದಸ್ಯರ ಅನುಮೋದನೆ ಪಡೆದರು.

ಸಭೆಯಲ್ಲಿ ಕಳೆದ ತಿಂಗಳಲ್ಲಿ ಕ್ಲಬ್ ವತಿಯಿಂದ ಹಮ್ಮಿಕೊಳ್ಳಲಾದ ವಿವಿಧ ಸಮಾಜಮುಖಿ ಸೇವಾ ಚಟುವಟಿಕೆಗಳ ಕುರಿತು ಪರಿಶೀಲನೆ ನಡೆಸಿ, ಮುಂಬರುವ ಯೋಜನೆಗಳ ಬಗ್ಗೆ ಸಮಗ್ರ ಚರ್ಚೆ ನಡೆಯಿತು. ಇದೇ ವೇಳೆ ಪಿಡಿಸಿ ಪ್ರೇಮಾ ಗುಳಗೌಡರ ಅವರು ಕ್ಲಬ್‌ನ ಆಡಳಿತಾತ್ಮಕ ಕಾರ್ಯವೈಖರಿ ಹಾಗೂ ಕಚೇರಿ ದಾಖಲೆಗಳ ಸಮರ್ಪಕ ನಿರ್ವಹಣೆ ಕುರಿತು ಸದಸ್ಯರಿಗೆ ಮಾರ್ಗದರ್ಶನ ನೀಡಿದರು. ಸದಸ್ಯರು ಪರಿಸರ ಸಂರಕ್ಷಣೆ, ಮಹಿಳಾ ಸಬಲೀಕರಣ, ಆರೋಗ್ಯ ಹಾಗೂ ಶಿಕ್ಷಣ ಕ್ಷೇತ್ರಗಳಲ್ಲಿ ಇನ್ನಷ್ಟು ಪರಿಣಾಮಕಾರಿ ಸೇವಾ ಕಾರ್ಯಕ್ರಮಗಳನ್ನು ಕೈಗೊಳ್ಳುವ ಕುರಿತು ತಮ್ಮ ಅಭಿಪ್ರಾಯಗಳನ್ನು ಹಂಚಿಕೊಂಡರು.

ಕ್ಲಬ್ ಅಧ್ಯಕ್ಷೆ ಮಂಜುಳಾ ಅಕ್ಕಿ ಮಾತನಾಡಿ, ಸದಸ್ಯರ ಸಹಕಾರವನ್ನು ಶ್ಲಾಘಿಸಿ, ಸೇವೆ ಮತ್ತು ಸ್ನೇಹದ ಮೌಲ್ಯಗಳನ್ನು ಉಳಿಸಿಕೊಂಡು ಇನ್ನರ್ ವೀಲ್‌ನ ಧ್ಯೇಯಗಳನ್ನು ಯಶಸ್ವಿಯಾಗಿ ಮುಂದುವರಿಸಲಾಗುವುದು ಎಂದು ತಿಳಿಸಿದರು. ಸಭೆಯಲ್ಲಿ ಕ್ಲಬ್‌ನ ಮಾಜಿ ಅಧ್ಯಕ್ಷೆಯರು ಹಾಗೂ ಸದಸ್ಯರು ಉಪಸ್ಥಿತರಿದ್ದರು.

# ವಿದ್ಯಾರ್ಥಿನಿಯರಿಗೆ ಕಲಿಕಾ ಸಾಮಗ್ರಿ ವಿತರಣೆ



**ವಿಜಯಸಾಕ್ಷಿ ಸುದ್ದಿ, ರೋಣ**

ಶಿಕ್ಷಣದ ಗುಣಮಟ್ಟ ಹೆಚ್ಚಿಸುವ ಹಾಗೂ ಸರ್ಕಾರಿ ಶಾಲಾ ಮಕ್ಕಳಲ್ಲಿ ಕಲಿಕೆಯ ಆಸಕ್ತಿ ಬೆಳೆಸುವ ಉದ್ದೇಶದಿಂದ ಯೂತ್ ಫಾರ್ ಸೇವಾ ಟ್ರಸ್ಟ್, ಬೆಂಗಳೂರು ಹಾಗೂ ಟೆಕ್ಸಾಸ್ ಇನ್ಸ್ಟ್ರುಮೆಂಟ್ಸ್ ಕಂಪನಿಯ ಸಹಯೋಗದಲ್ಲಿ ರೋಣ ತಾಲೂಕಿನ ಹಾಲಕೇರಿ ಗ್ರಾಮದ ಸರ್ಕಾರಿ ಹಿರಿಯ ಪ್ರಾಥಮಿಕ ಹೆಣ್ಣುಮಕ್ಕಳ ಶಾಲೆಯ 1ರಿಂದ 7ನೇ ತರಗತಿ ವಿದ್ಯಾರ್ಥಿನಿಯರಿಗೆ ಸುಮಾರು ₹75 ಸಾವಿರ ಮೌಲ್ಯದ ಕಲಿಕಾ ಸಾಮಗ್ರಿಗಳನ್ನು ವಿತರಿಸಲಾಯಿತು.

ಮುಖ್ಯ ಅತಿಥಿಯಾಗಿ ಮಾತನಾಡಿದ ರುದ್ರಾ, ವಿದ್ಯಾರ್ಥಿ ಜೀವನದಲ್ಲಿ ಶಿಕ್ಷಣಕ್ಕೆ ಹೆಚ್ಚಿನ ಆದ್ಯತೆ ನೀಡಿ ಶ್ರದ್ಧೆಯಿಂದ ಕಲಿಯಬೇಕು. ಜೀವನದಲ್ಲಿ ಉನ್ನತ ಸ್ಥಾನಕ್ಕೇರಿದ ಬಳಿಕ ತಾವು ಕಲಿತ ಶಾಲೆ, ಗ್ರಾಮ ಹಾಗೂ ಸಮಾಜಕ್ಕೆ ಋಣ ತೀರಿಸುವ ಮನೋಭಾವ ಪ್ರತಿಯೊಬ್ಬ ವಿದ್ಯಾರ್ಥಿಯಲ್ಲೂ ಬೆಳೆಯಬೇಕು ಎಂದು ಹೇಳಿದರು.

ಅತಿಥಿ ಹರ್ಷ ಮಾತನಾಡಿ, ಮಕ್ಕಳು ದೊಡ್ಡ ಕನಸುಗಳನ್ನು ಕಾಣಬೇಕು. ಆ ಕನಸುಗಳನ್ನು ನನಸಾಗಿಸಲು ಗುರಿ, ನಿರಂತರ ಪರಿಶ್ರಮ, ಆತ್ಮವಿಶ್ವಾಸ ಹಾಗೂ ಶಿಸ್ತು ಅಗತ್ಯ. ಇಂದಿನ ಕಲಿಕೆಯೇ ನಾಳಿನ ಯಶಸ್ಸಿಗೆ ಭದ್ರ ಬುನಾದಿಯಾಗುತ್ತದೆ ಎಂದು ಹೇಳಿದರು. ಕ್ಲಸ್ಟರ್ ಸಂಪನ್ಮೂಲ ವ್ಯಕ್ತಿ ಮುತ್ತಣ್ಣ ಶಾಲೆಯ ಶೈಕ್ಷಣಿಕ ಪ್ರಗತಿ, ಸ್ವಚ್ಛತೆ, ಪರಿಸರ ಸಂರಕ್ಷಣೆ ಹಾಗೂ ಶಾಲಾ ಅಭಿವೃದ್ಧಿಯಲ್ಲಿ ಸಮುದಾಯದ ಸಹಭಾಗಿತ್ವದ ಅಗತ್ಯವನ್ನು ವಿವರಿಸಿದರು.


ಕಾರ್ಯಕ್ರಮದಲ್ಲಿ ಡಿಡಿಪಿಐ ಕಚೇರಿಯ ಸೂಪರಿಂಟೆಂಡೆಂಟ್ ಬಿ.ಎಚ್. ಯಲ್ಲಪ್ಪಗೌಡ್ರು, ಎಸ್‌ಡಿಎಂಸಿ ಅಧ್ಯಕ್ಷರು, ಉಪಾಧ್ಯಕ್ಷರು, ಸದಸ್ಯರು, ಶಿಕ್ಷಣ ಪ್ರೇಮಿ ಸುರೇಶ್ ರೊಟ್ಟಿ, ಮುಖ್ಯ ಶಿಕ್ಷಕಿ ಪಿ.ಬಿ. ಜುಟ್ಲದ, ಶಿಕ್ಷಕರಾದ ಎಸ್.ಎಸ್. ಸಜ್ಜನ, ಡಿ.ಐ. ಹಿರೇಹಾಳ, ಬಿ.ಎಡ್. ಕಲಿಕಾರ್ಥಿಗಳು, ಅಮೃತ ಬುರಡಿ, ಆನಂದ ಒಲಿ, ಅನ್ನಕ್ಕ ದೈಗೊಂಡ, ಗ್ರಾಮಸ್ಥರು, ಪೋಷಕರು ಹಾಗೂ ಸಾರ್ವಜನಿಕರು ಉಪಸ್ಥಿತರಿದ್ದರು.

ವಿದ್ಯಾರ್ಥಿನಿಯರ ಪ್ರಾರ್ಥನೆಯೊಂದಿಗೆ ಕಾರ್ಯಕ್ರಮ ಆರಂಭವಾಯಿತು. ಹಡಪದ ಕಾರ್ಯಕ್ರಮ ನಿರೂಪಿಸಿ ವಂದಿಸಿದರು. ಬಳಿಕ ವಿದ್ಯಾರ್ಥಿನಿಯರಿಗೆ ಕಲಿಕಾ ಸಾಮಗ್ರಿಗಳನ್ನು ವಿತರಿಸಲಾಯಿತು.

---

# ಉಮರ್ ಖಾಲಿದ್ ಪೋಸ್ಟರ್ ಪ್ರದರ್ಶನದಲ್ಲಿ ತಪ್ಪೇನು?

### ಕೇಂದ್ರ ಸರ್ಕಾರದ ವಿರುದ್ಧ ಬಿಕೆ ಹರಿಪ್ರಸಾದ್ ವಾಗ್ದಾಳಿ



**ವಿಜಯಸಾಕ್ಷಿ ಸುದ್ದಿ, ಬೆಂಗಳೂರು**

ನೀಟ್ ಪ್ರಶ್ನೆಪತ್ರಿಕೆ ಸೋರಿಕೆ ವಿರುದ್ಧ ಬೆಂಗಳೂರಿನಲ್ಲಿ ನಡೆದ ಪ್ರತಿಭಟನೆಯಲ್ಲಿ ಉಮರ್ ಖಾಲಿದ್ ಪರ ಪೋಸ್ಟರ್ ಪ್ರದರ್ಶಿಸಿದ ವಿಚಾರ ರಾಜಕೀಯ ವಿವಾದಕ್ಕೆ ತಿರುಗಿದ್ದು, ಕೆಪಿಸಿಸಿ ಅಧ್ಯಕ್ಷ ಬಿಕೆ ಹರಿಪ್ರಸಾದ್ ಕೇಂದ್ರ ಸರ್ಕಾರದ ವಿರುದ್ಧ ತೀವ್ರ ವಾಗ್ದಾಳಿ ನಡೆಸಿದ್ದಾರೆ.

2020ರ ದೆಹಲಿ ಗಲಭೆ ಪ್ರಕರಣದ ಆರೋಪಿ ಉಮರ್ ಖಾಲಿದ್ ಪೋಸ್ಟರ್ ಪ್ರದರ್ಶಿಸಿದರಲ್ಲಿ ತಪ್ಪೇನಿದೆ ಎಂದು ಪ್ರಶ್ನಿಸಿರುವ ಅವರು, ಯಾವುದೇ ಚಾರ್ಜ್‌ಶೀಟ್ ಸಲ್ಲಿಸದೇ ಐದು ವರ್ಷಗಳಿಂದ ಜೈಲಿನಲ್ಲಿ ಇರಿಸಿರುವುದನ್ನು ಖಂಡಿಸಿದ್ದಾರೆ.

ಶುಕ್ರವಾರ (ಜು.24) ಬೆಂಗಳೂರಿನಲ್ಲಿ ನಡೆದ ನೀಟ್ ಪ್ರತಿಭಟನೆ ಬಳಿಕ ಮಾಧ್ಯಮಗಳೊಂದಿಗೆ ಮಾತನಾಡಿದ ಬಿಕೆ ಹರಿಪ್ರಸಾದ್, ಉಮರ್ ಖಾಲಿದ್ ಪೋಸ್ಟರ್ ಪ್ರದರ್ಶಿಸಿದರೆ ಅಪರಾಧವೇ? ಐದು ವರ್ಷಗಳಿಂದ ಅವರನ್ನು ಜೈಲಿನಲ್ಲಿ ಇಟ್ಟಿದ್ದೀರಾ, ಇನ್ನೂ ಚಾರ್ಜ್‌ಶೀಟ್ ಹಾಕಿಲ್ಲ. ಇದೇನು ಪ್ರಜಾಪ್ರಭುತ್ವವೇ? ಇದು ಪಾಕಿಸ್ತಾನನಾ? ಕೇಂದ್ರ ಸರ್ಕಾರ ಪಾಕಿಸ್ತಾನದ ಮಾದರಿಯಲ್ಲಿ ಆಡಳಿತ ನಡೆಸುತ್ತಿದೆ ಎಂದು ಕಿಡಿಕಾರಿದರು.

ಪ್ರತಿಭಟನೆಯ ವೇಳೆ ಕೆಲವರು 'Ukhad Le BLR Police' ಎಂಬ ಬರಹವಿದ್ದ ಪೋಸ್ಟರ್‌ಗಳನ್ನು ಪ್ರದರ್ಶಿಸಿದರೆ, ಮತ್ತೊಂದು ಗುಂಪು ಉಮರ್ ಖಾಲಿದ್ ಹಾಗೂ ಶಾಜೀರ್ಲ್ ಇಮಾಮ್ ಪರ ಘೋಷಣೆಗಳಿದ್ದ ಪೋಸ್ಟರ್‌ಗಳನ್ನು ಹಿಡಿದು ಪ್ರತಿಭಟನೆಯಲ್ಲಿ ಭಾಗವಹಿಸಿತು.

ಈ ಬೆಳವಣಿಗೆ ಪೊಲೀಸರ ಗಮನ ಸೆಳೆದ ತಕ್ಷಣ ಅವರು ಪರಿಸ್ಥಿತಿ ನಿಯಂತ್ರಣಕ್ಕೆ ಕ್ರಮ ಕೈಗೊಂಡು ಪೋಸ್ಟರ್‌ಗಳನ್ನು ವಶಪಡಿಸಿಕೊಂಡರು. ಕೆಲಕಾಲ ಗೊಂದಲದ ವಾತಾವರಣ ನಿರ್ಮಾಣವಾದರೂ ಯಾವುದೇ ಅಹಿತಕರ ಘಟನೆ ಸಂಭವಿಸದೇ ಪ್ರತಿಭಟನೆ ಶಾಂತಿಯುತವಾಗಿ ಮುಂದುವರಿಯಿತು.

ಪ್ರತಿಭಟನೆಯಲ್ಲಿದ್ದ ಕೆಲ ವಿದ್ಯಾರ್ಥಿಗಳು ಉಮರ್ ಖಾಲಿದ್ ಪರ ಪೋಸ್ಟರ್ ಹಿಡಿದಿದ್ದ ಯುವತಿಗೆ ಸ್ಥಳದಲ್ಲೇ ತರಾಟೆಗೆ ತೆಗೆದುಕೊಂಡರು. ಇಂತಹ ಪೋಸ್ಟರ್‌ಗಳು ಪ್ರತಿಭಟನೆಯ ಮೂಲ ಉದ್ದೇಶಕ್ಕೆ ಧಕ್ಕೆ ಉಂಟುಮಾಡುತ್ತವೆ ಎಂದು ಹೇಳಿ ಸ್ಥಳ ತೊರೆಯುವಂತೆ ಒತ್ತಾಯಿಸಿದರು. ಬಳಿಕ ಯುವತಿ ಅಲ್ಲಿಂದ ತೆರಳಿದರು.

2020ರ ಈಶಾನ್ಯ ದೆಹಲಿ ಗಲಭೆ ಪ್ರಕರಣದಲ್ಲಿ ಉಮರ್ ಖಾಲಿದ್ ಮತ್ತು ಶಾರ್ಜೀಲ್ ಇಮಾಮ್ ಆರೋಪಿಗಳಾಗಿದ್ದು, ಇದೇ ವಿಚಾರ ಮತ್ತೆ ನೀಟ್ ಪ್ರತಿಭಟನೆಯ ವೇದಿಕೆಯಲ್ಲಿ ರಾಜಕೀಯ ಚರ್ಚೆಗೆ ಕಾರಣವಾಗಿದೆ.

---

ಗುರುಪೂರ್ಣಿಮೆ ಅಂಗವಾಗಿ ಶ್ರೀ ಸಾಯಿ ಸಚ್ಚರಿತ್ರೆ ಪ್ರವಚನ; ಇಂದು ಜೋಳಿಗೆ ಭಿಕ್ಷೆ, ನಾಳೆ ಪ್ರಸಾದಾಲಯ ಲೋಕಾರ್ಪಣೆ

# ಸಾಯಿಬಾಬರ ಪವಾಡಗಳು ನಂಬಿಕೆಯ ಶಕ್ತಿಯ ಸಂಕೇತ

**ವಿಜಯಸಾಕ್ಷಿ ಸುದ್ದಿ, ಗದಗ**

ಸಾಯಿಬಾಬರ ಪವಾಡಗಳು ಕೇವಲ ಅಲೌಕಿಕ ಘಟನೆಗಳಲ್ಲ. ಅವು ಭಕ್ತರಲ್ಲಿ ನಂಬಿಕೆ, ಧೈರ್ಯ, ಆತ್ಮಬಲ ಮತ್ತು ಆಧ್ಯಾತ್ಮಿಕ ಜಾಗೃತಿಯನ್ನು ಮೂಡಿಸುವ ದಿವ್ಯ ಅನುಭವಗಳಾಗಿವೆ ಎಂದು ಚಿಂತಕ ಹಾಗೂ ವೈದ್ಯ ಡಾ. ಎಸ್.ಬಿ. ಶೆಟ್ಟರ ಹೇಳಿದರು.



ಗದಗ-ಬೆಟಗೇರಿ ಶ್ರೀ ಶಿರಡಿ ಸಾಯಿಬಾಬಾ ಸತ್ಸಂಗದಿಂದ ಗುರುಪೂರ್ಣಿಮೆ ಅಂಗವಾಗಿ ನಗರದ ಶ್ರೀ ಶಿರಡಿ ಸಾಯಿಬಾಬಾ ಮಂದಿರದಲ್ಲಿ ಆಯೋಜಿಸಿದ್ದ ಶ್ರೀ ಸಾಯಿ ಸಚ್ಚರಿತ್ರೆ ಪ್ರವಚನ ಮಾಲಿಕೆ-6ರಲ್ಲಿ ಅವರು ಮಾತನಾಡಿದರು.

ಸಾಯಿಬಾಬರ ಅನುಗ್ರಹವು ಭಕ್ತರ ನಿಷ್ಕಪಟ ಶ್ರದ್ಧೆ ಮತ್ತು ನಂಬಿಕೆಗೆ ಪ್ರತಿಫಲವಾಗಿ ದೊರೆಯುತ್ತದೆ. ಭಕ್ತರ ಸಂಕಷ್ಟಗಳನ್ನು ಅವರ ಕರ್ಮಕ್ಕೆ ಅನುಗುಣವಾಗಿ ನಿವಾರಿಸುತ್ತಿದ್ದ ಬಾಬಾರವರು ನೋವನ್ನು ಕಡಿಮೆ ಮಾಡುವುದರ ಜೊತೆಗೆ ಆಧ್ಯಾತ್ಮಿಕ ಬದುಕಿನ ದಾರಿಯನ್ನೂ ತೋರಿಸುತ್ತಿದ್ದರು ಎಂದು ಹೇಳಿದರು.

ಸಾಯಿಬಾಬರ ಪವಿತ್ರ ಉದಿ ಕೇವಲ ಬೂದಿಯಲ್ಲ, ಅದು ದೈವಾನುಗ್ರಹ, ಆತ್ಮವಿಶ್ವಾಸ ಮತ್ತು ಭಕ್ತಿಯ ಸಂಕೇತವಾಗಿದೆ. ಪ್ಲೇಗ್, ಕಿಡ್ನಿ ಕಲ್ಲು, ಪ್ರಸೂತಿ ಸಮಸ್ಯೆ ಸೇರಿದಂತೆ ಹಲವು ಸಂದರ್ಭಗಳಲ್ಲಿ ಉದಿಯ ಮಹಿಮೆಯಿಂದ ಭಕ್ತರು ಸಂಕಷ್ಟಗಳಿಂದ ಪಾರಾದ ಪ್ರಸಂಗಗಳು ಶ್ರೀ ಸಾಯಿ ಸಚ್ಚರಿತ್ರೆಯಲ್ಲಿ ಉಲ್ಲೇಖಗೊಂಡಿವೆ ಎಂದು ವಿವರಿಸಿದರು.

ದಕ್ಷಿಣೆ ಹಣದ ವ್ಯವಹಾರವಲ್ಲ, ಅದು ಕೃತಜ್ಞತೆ, ದಾನ ಮತ್ತು ಸಮರ್ಪಣೆಯ ಪ್ರತೀಕವಾಗಿದೆ. ನಾನು ಒಂದು ರೂಪಾಯಿ ಪಡೆದರೆ ಹತ್ತು ರೂಪಾಯಿ ಹಿಂದಿರುಗಿಸಬೇಕಾಗುತ್ತದೆ ಎಂಬ ಬಾಬಾರವರ ಸಂದೇಶ ದಾನದ ಮಹತ್ವವನ್ನು ಸಾರುತ್ತದೆ ಎಂದು ತಿಳಿಸಿದರು.

ವೈದ್ಯಕೀಯ ಕ್ಷೇತ್ರದಲ್ಲಿಯೂ ಸಾಯಿಬಾಬರ ಅನುಗ್ರಹದ ಅನೇಕ ಅನುಭವಗಳಿದ್ದು, ಆಸ್ಟಿಯೋಮೈಲೈಟಿಸ್‌ನಂತಹ ಗಂಭೀರ ಕಾಯಿಲೆಯಿಂದ ಬಳಲುತ್ತಿದ್ದ ಬಾಲಕ ಉದಿ ಪ್ರಸಾದದಿಂದ ಗುಣಮುಖನಾದ ಪ್ರಸಂಗ ಸೇರಿದಂತೆ ತಾವು ವೈದ್ಯರಾಗಿದ್ದ ವೇಳೆ ಕಂಡ ಹಲವು ಅನುಭವಗಳನ್ನು ಹಂಚಿಕೊಂಡರು.

ಪವಾಡಗಳ ಹಿಂದೆ ಹೋಗುವುದಕ್ಕಿಂತ ಶ್ರದ್ಧೆ, ಸಬೂರಿ, ಸೇವೆ ಹಾಗೂ ಗುರುಭಕ್ತಿಯನ್ನು ಜೀವನದಲ್ಲಿ ಅಳವಡಿಸಿಕೊಂಡರೆ ನಿಜವಾದ ಆಧ್ಯಾತ್ಮಿಕ ನೆಮ್ಮದಿ ಹಾಗೂ ದೈವಾನುಗ್ರಹ ದೊರೆಯುತ್ತದೆ. ಗುರುಪೂರ್ಣಿಮೆಯ ನಿಜವಾದ ಆಚರಣೆ ಗುರುತತ್ವದ ಮೇಲಿನ ಅಚಲ ನಂಬಿಕೆಯನ್ನು ಬೆಳೆಸಿಕೊಳ್ಳುವುದಾಗಿದೆ ಎಂದು ಹೇಳಿದರು.ಪ್ರಸಾದ ಸೇವೆಯನ್ನು ಸಾಯಿಪ್ರಸಾದ ಶೆಟ್ಟರ, ಪ್ರಣವ್ ಎನ್. ರಾವ್, ಶಾಂತಾ ಗೋವಣ್ಣವರ, ಡಾ. ಎಲ್.ವಿ. ಪಾಟೀಲ, ಅನ್ವಯ್ ಗೊಂದಕರ, ಮಲ್ಲಿಕಾರ್ಜುನ ಕುರಿ, ಮಲ್ಲಿಕಾರ್ಜುನ ಪೂಜಾರ, ವಿಜಯಲಕ್ಷ್ಮಿ ಚೇಗರಡ್ಡಿ, ರಾಜು ಗುಡಸಾಲಿ, ಶ್ರೀದೇವಿ ಪಾಟೀಲ ಹಾಗೂ ಅಥರ್ವ ಬುಳ್ಳಾ ಕುಟುಂಬ ವಹಿಸಿಕೊಂಡಿತ್ತು. ಮಹೇಶಗೌಡ ತಲೆಗೌಡ್ರ ಸ್ವಾಗತಿಸಿದರು. ಸದಾಶಿವಪ್ಪ ವಾಲಿ ವಂದಿಸಿದರು. ಭಕ್ತರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿದ್ದರು.

**ನಾಳೆ ಪ್ರಸಾದಾಲಯ ಲೋಕಾರ್ಪಣೆ, ಪುಸ್ತಕ ಬಿಡುಗಡೆ:** ಜುಲೈ 27ರಂದು ಸಂಜೆ 7 ಗಂಟೆಗೆ ಶ್ರೀ ಶಿರಡಿ ಸಾಯಿಬಾಬಾ ಮಂದಿರದಲ್ಲಿ ಶ್ರೀ ಸಾಯಿ ಪ್ರಸಾದಾಲಯ ಲೋಕಾರ್ಪಣೆ ಹಾಗೂ ಡಾ. ಎಸ್.ಬಿ. ಶೆಟ್ಟರ ಅವರ ಅನುವಾದಿತ ಟಿಶ್ರೀ ಶಿರಡಿ ಸಾಯಿಬಾಬಾ ಮಹಾತ್ಮೆ (ಸಂಕಲ್ಪ ಸಿದ್ಧಿವ್ರತ)ಟಿ ದ್ವಿತೀಯ ಆವೃತ್ತಿಯ ಪುಸ್ತಕ ಬಿಡುಗಡೆ ನಡೆಯಲಿದೆ.

ಸುಕ್ಷೇತ್ರ ಬಳಗಾನೂರಿನ ಪೂಜ್ಯ ಶಿವಶಾಂತವೀರ ಶರಣರು ಸಾನ್ನಿಧ್ಯ ವಹಿಸಲಿದ್ದು, ಸತ್ಸಂಗ ಸಮಿತಿಯ ಅಧ್ಯಕ್ಷ ಮಹೇಶಗೌಡ ತಲೆಗೌಡ್ರ ಅಧ್ಯಕ್ಷತೆ ವಹಿಸುವರು. ದತ್ತಾ ಸಮೂಹ ಸಂಸ್ಥೆಯ ವ್ಯವಸ್ಥಾಪಕ ನಿರ್ದೇಶಕ ಕಿರಣ ಭೂಮಾ ಮುಖ್ಯ ಅತಿಥಿಯಾಗಿ, ಸತ್ಸಂಗದ ನಿರ್ದೇಶಕಿ ಸುಶೀಲಾ ಕೋಟಿ ಅತಿಥಿಯಾಗಿ ಭಾಗವಹಿಸಲಿದ್ದಾರೆ. ಸತ್ಸಂಗದ ಸಂಸ್ಥಾಪಕ ಅಧ್ಯಕ್ಷ ಡಾ. ಸಂಗಮನಾಥ ಬಿ. ಶೆಟ್ಟರ ಹಾಗೂ ನಿರ್ದೇಶಕ ರಘುವೀರ ಪತ್ತೆಪೂರ ಉಪಸ್ಥಿತರಿರುವರು.

### ಇಂದು ಜೋಳಿಗೆ ಭಿಕ್ಷೆ

**ಜುಲೈ 26ರಂದು ಬೆಳಿಗ್ಗೆ 9 ಗಂಟೆಯಿಂದ ಜೋಳಿಗೆ ಭಿಕ್ಷೆ ಕಾರ್ಯಕ್ರಮ ನಡೆಯಲಿದೆ. ಶ್ರೀ ಶಿರಡಿ ಸಾಯಿಬಾಬಾ ಮಂದಿರದಿಂದ ಆರಂಭವಾಗುವ ಮೆರವಣಿಗೆ ವಿವೇಕಾನಂದ ಬಡಾವಣೆ ಹಾಗೂ ಕರಿಯಮ್ಮಕಲ್ಲ ಬಡಾವಣೆಗಳಲ್ಲಿ ಸಂಚರಿಸಿ, ಶ್ರೀ ರಾಘವೇಂದ್ರಸ್ವಾಮಿ ಮಠದ ಮಾರ್ಗವಾಗಿ ಮರಳಿ ಮಂದಿರಕ್ಕೆ ಆಗಮಿಸಲಿದೆ.**

**ಸಂಕ್ಷಿಪ್ತ ಸುದ್ದಿಗಳು**

## ಅಂಗನವಾಡಿ ಕಾರ್ಯಕರ್ತೆ ಕುಟುಂಬಕ್ಕೆ ಸಾಂತ್ವನ



**ವಿಜಯಸಾಕ್ಷಿ ಸುದ್ದಿ, ಮುಂಡರಗಿ**

ವಿಶೇಷ ಮತದಾರರ ಪಟ್ಟಿ ಪರಿಷ್ಕರಣೆ (ಎಸ್‌ಐಆರ್) ಕಾರ್ಯದಲ್ಲಿ ತೊಡಗಿದ್ದ ವೇಳೆ ಹೃದಯಾಘಾತದಿಂದ ಮೃತಪಟ್ಟ ತಾಲೂಕಿನ ಬಾವೇವಾಡಿ ಗ್ರಾಮದ ಅಂಗನವಾಡಿ ಕಾರ್ಯಕರ್ತೆ ಹಾಗೂ ಬಿಎಲ್‌ಒ ರತ್ನಾ ಬಳಿಗೇರ ಅವರ ನಿವಾಸಕ್ಕೆ ಶಿರಹಟ್ಟಿ ವಿಧಾನಸಭಾ ಕ್ಷೇತ್ರದ ಬಿಜೆಪಿ ಮುಖಂಡ ಐ.ಎಸ್. ಪೂಜಾರ ಭೇಟಿ ನೀಡಿ ಕುಟುಂಬದವರಿಗೆ ಸಾಂತ್ವನ ಹೇಳಿದರು.ರತ್ನಾ ಬಳಿಗೇರ ಅವರು ಕರ್ತವ್ಯನಿಷ್ಠೆಯಿಂದ ಕೆಲಸ ನಿರ್ವಹಿಸುತ್ತಿದ್ದರು. ಅವರ ಅಕಾಲಿಕ ನಿಧನದಿಂದ ಕುಟುಂಬಕ್ಕೆ ಹಾಗೂ ಸಾರ್ವಜನಿಕ ಸೇವೆಗೆ ತುಂಬಲಾರದ ನಷ್ಟವಾಗಿದೆ ಎಂದು ಅವರು ಹೇಳಿದರು. ಕುಟುಂಬಕ್ಕೆ ಸರ್ಕಾರದಿಂದ ದೊರೆಯಬೇಕಾದ ಎಲ್ಲಾ ಸೌಲಭ್ಯಗಳನ್ನು ಒದಗಿಸುವಂತೆ ಜಿಲ್ಲಾಧಿಕಾರಿ, ಸಂಬಂಧಪಟ್ಟ ನೋಡಲ್ ಅಧಿಕಾರಿ ಹಾಗೂ ಇತರ ಅಧಿಕಾರಿಗಳೊಂದಿಗೆ ಚರ್ಚಿಸಿ, ಹೆಚ್ಚಿನ ಪರಿಹಾರ ದೊರಕಿಸಲು ಒತ್ತಾಯಿಸಲಾಗುವುದು ಎಂದು ಭರವಸೆ ನೀಡಿದರು. ಈ ಸಂದರ್ಭದಲ್ಲಿ ಬಸವರಾಜ ಕಂತಿ, ಶಿವಣ್ಣ ಪುಂಡಲೀಕ ಲಮಾಣಿ, ಸೋಮು ಹಾಗೂ ಕುಟುಂಬದ ಸದಸ್ಯರು ಉಪಸ್ಥಿತರಿದ್ದರು.

### ಕೆಎಎಂಎಸ್ ವಿನಾಯಿತಿ ಕುರಿತು ರಾಜ್ಯ ಮಟ್ಟದಲ್ಲಿ ಚರ್ಚೆ | ಕಾರ್ಯಕ್ಷಮತೆ ವಿಚಾರ ಸಂಕಿರಣದಲ್ಲಿ ಡಾ. ಬಸವರಾಜ ಬಳ್ಳಾರಿ ಹೇಳಿಕೆ

# ಆರೋಗ್ಯ ಸಿಬ್ಬಂದಿಗೆ ಒಪಿಎಸ್ ಭರವಸೆ

**ವಿಜಯಸಾಕ್ಷಿ ಸುದ್ದಿ, ಗದಗ**

ರಾಜ್ಯ ಸರ್ಕಾರಿ ನೌಕರರಿಗೆ ಹಳೆ ಪಿಂಚಣಿ ಯೋಜನೆ (ಒಪಿಎಸ್) ಜಾರಿಗೊಳಿಸುವ ನಿಟ್ಟಿನಲ್ಲಿ ಪೂರ್ವಸಿದ್ಧತೆಗಳು ನಡೆಯುತ್ತಿವೆ. ಜೊತೆಗೆ 24/7 ಸೇವೆ ಸಲ್ಲಿಸುವ ಆರೋಗ್ಯ ನಿರೀಕ್ಷಣಾಧಿಕಾರಿಗಳು ಹಾಗೂ ಆರೋಗ್ಯ ಸುರಕ್ಷತಾ ಅಧಿಕಾರಿಗಳಿಗೆ ಕೆಎಎಂಎಸ್ (KAAMS) ಆನ್‌ಲೈನ್ ಹಾಜರಾತಿ ವ್ಯವಸ್ಥೆಯಿಂದ ವಿನಾಯಿತಿ ನೀಡುವ ಕುರಿತು ರಾಜ್ಯ ಮಟ್ಟದಲ್ಲಿ ಚರ್ಚಿಸಲಾಗುವುದು ಎಂದು ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘದ ರಾಜ್ಯ ಉಪಾಧ್ಯಕ್ಷ ಹಾಗೂ ಗದಗ ಜಿಲ್ಲಾ ಘಟಕದ ಅಧ್ಯಕ್ಷ ಡಾ. ಬಸವರಾಜ ಬಳ್ಳಾರಿ ಹೇಳಿದರು.

ನಗರದ ರಾಯಲ್ ವಿಲ್ಲಾ ಹೋಟೆಲ್ ಸಭಾಂಗಣದಲ್ಲಿ ಕರ್ನಾಟಕ ರಾಜ್ಯ ಆರೋಗ್ಯ ಮತ್ತು ವೈದ್ಯಕೀಯ ಶಿಕ್ಷಣ ಇಲಾಖೆ ನೌಕರರ ಕೇಂದ್ರ ಸಂಘ, ಬೆಂಗಳೂರು ಹಾಗೂ ಗದಗ ಜಿಲ್ಲಾ ಶಾಖೆ ವತಿಯಿಂದ ಆಯೋಜಿಸಿದ್ದ ಆರೋಗ್ಯ ಇಲಾಖೆ ನೌಕರರ ಕಾರ್ಯಕ್ಷಮತೆ ವಿಚಾರ ಸಂಕಿರಣ ಮತ್ತು ಪದೋನ್ನತಿ ಪಡೆದ ಅಧಿಕಾರಿಗಳು ಹಾಗೂ ನೌಕರರ ಅಭಿನಂದನಾ ಸಮಾರಂಭ ಉದ್ಘಾಟಿಸಿ ಅವರು ಮಾತನಾಡಿದರು.



ಆರೋಗ್ಯ ಇಲಾಖೆ ಸಿಬ್ಬಂದಿ ಜೀವದ ಹಂಗು ತೊರೆದು ಸಾರ್ವಜನಿಕರ ಆರೋಗ್ಯ ರಕ್ಷಣೆಗೆ ಸೇವೆ ಸಲ್ಲಿಸುತ್ತಿದ್ದಾರೆ. ಇಂತಹ ಸಿಬ್ಬಂದಿಯ ಕಾರ್ಯಕ್ಷಮತೆ ಹೆಚ್ಚಿಸಲು ಕಾಲಕಾಲಕ್ಕೆ ತರಬೇತಿ ನೀಡುವುದು ಅಗತ್ಯವಾಗಿದೆ. ಸರ್ಕಾರಿ ನೌಕರರ ಸಮಸ್ಯೆಗಳ ಪರಿಹಾರ ಹಾಗೂ ಹಿತರಕ್ಷಣೆಗೆ ರಾಜ್ಯ ಸರ್ಕಾರಿ ನೌಕರರ ಸಂಘ ಸದಾ ಬದ್ಧವಾಗಿದೆ ಎಂದು ಹೇಳಿದರು.

ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘದ ಗದಗ ಜಿಲ್ಲಾ ಕಾರ್ಯಾಧ್ಯಕ್ಷ ಸಿದ್ದಪ್ಪ ಎನ್. ಲಿಂಗದಾಳ ಮಾತನಾಡಿ, ಆರೋಗ್ಯ ಸೇವೆಯನ್ನು ದೇವರ ಸೇವೆಯೆಂದು ಭಾವಿಸಿ ಬಡವರು-ಶ್ರೀಮಂತರು ಎಂಬ ಭೇದವಿಲ್ಲದೆ ಸೇವೆ ಸಲ್ಲಿಸಬೇಕು. ಆರೋಗ್ಯ ಇಲಾಖೆಯಲ್ಲಿ ಸೇವೆ ಸಲ್ಲಿಸುವ ಅವಕಾಶ ದೊರೆತಿರುವುದು ಪ್ರತಿಯೊಬ್ಬರಿಗೂ ಹೆಮ್ಮೆಯ ಸಂಗತಿ ಎಂದರು.

ಗದಗ ತಾಲೂಕು ಕ್ಷೇತ್ರ ಆರೋಗ್ಯ ಶಿಕ್ಷಣಾಧಿಕಾರಿ ಡಾ. ರಾಜೇಂದ್ರ ಗಡಾದ ಪ್ರಾಸ್ತಾವಿಕವಾಗಿ ಮಾತನಾಡಿ, ಸಾರ್ವಜನಿಕರಿಗೆ ಕರುಣೆ, ಅಕ್ಕರೆ ಮತ್ತು ಆತ್ಮೀಯತೆಯಿಂದ ಆರೋಗ್ಯ ಸೇವೆ ನೀಡುವುದು ಆರೋಗ್ಯ ಸಿಬ್ಬಂದಿಯ ಪ್ರಮುಖ ಜವಾಬ್ದಾರಿಯಾಗಿದೆ ಎಂದು ಹೇಳಿದರು. ಮುಖ್ಯ ಅತಿಥಿಗಳಾದ ಡಾ. ಆರ್.ಸಿ. ಬಸರಿಗಿಡದ ಹಾಗೂ ಡಾ. ಜಿ.ಎಸ್. ಪಲ್ಲೇದ ಮಾತನಾಡಿ, ಪದೋನ್ನತಿ, ವರ್ಗಾವಣೆ ಹಾಗೂ ನಿವೃತ್ತಿ ಹೊಂದಿದ ಅಧಿಕಾರಿಗಳು ಮತ್ತು ಸಿಬ್ಬಂದಿಯನ್ನು ಸನ್ಮಾನಿಸಿರುವ ಸಂಘದ ಕಾರ್ಯ ಶ್ಲಾಘನೀಯವಾಗಿದೆ ಎಂದು ಮೆಚ್ಚುಗೆ ವ್ಯಕ್ತಪಡಿಸಿದರು. ಕಾರ್ಯಕ್ರಮದ ಅಧ್ಯಕ್ಷತೆಯನ್ನು ಮಲ್ಲಿಕಾರ್ಜುನ ಎಫ್. ಕಲಕಂಬಿ ವಹಿಸಿದ್ದರು. ಆಹಾರ ಸುರಕ್ಷತಾ ಅಧಿಕಾರಿ ವಿವೇಕ ತಿರುಮಲ್ಲೆ, ಅಜಯಕುಮಾರ ಕಲಾಲ, ಸರೋಜಾ ಕಟ್ಟಿಮನಿ, ವೈ.ಎನ್. ಕಡೇಮನಿ, ಬಿ.ಸಿ. ಹಿರೇಹಾಳ ಸೇರಿದಂತೆ ಹಲವರು ಉಪಸ್ಥಿತರಿದ್ದರು.

ಈ ಸಂದರ್ಭದಲ್ಲಿ ನೂತನ ಜಿಲ್ಲಾ ಕುಷ್ಠರೋಗ ನಿಯಂತ್ರಣಾಧಿಕಾರಿ ಡಾ. ಜಿ.ಎಸ್. ಪಲ್ಲೇದ, ನಿವೃತ್ತ ಜಿಲ್ಲಾ ಕುಷ್ಠರೋಗ ನಿಯಂತ್ರಣಾಧಿಕಾರಿ ಡಾ. ಆರ್.ಸಿ. ಬಸರಿಗಿಡದ, ಜೆ.ಡಿ. ಯರಗುಡಿ ಸೇರಿದಂತೆ ಪದೋನ್ನತಿ, ವರ್ಗಾವಣೆ ಹಾಗೂ ನಿವೃತ್ತಿ ಹೊಂದಿದ ಹಲವು ಅಧಿಕಾರಿಗಳು ಮತ್ತು ಸಿಬ್ಬಂದಿಯನ್ನು ಸನ್ಮಾನಿಸಿ ಗೌರವಿಸಲಾಯಿತು.

ಕೆ.ವಿ. ಬಡಿಗೇರ ಕಾರ್ಯಕ್ರಮ ನಿರೂಪಿಸಿದರು. ಮುತ್ತಪ್ಪ ಹಟ್ಟಿಮನಿ ಸ್ವಾಗತಿಸಿದರು. ಎಸ್.ಬಿ. ಗಡಾದ ವಂದಿಸಿದರು.

> **ಸರ್ಕಾರಿ ನೌಕರರಿಗೆ ಒಪಿಎಸ್ ಜಾರಿಗೆ ಪೂರ್ವಸಿದ್ಧತೆ ನಡೆದಿದೆ. ಆರೋಗ್ಯ ಸಿಬ್ಬಂದಿಗೆ ಕೆಎಎಂಎಸ್ ಹಾಜರಾತಿ ವ್ಯವಸ್ಥೆಯಿಂದ ವಿನಾಯಿತಿ ನೀಡುವ ಕುರಿತು ರಾಜ್ಯ ಮಟ್ಟದಲ್ಲಿ ಚರ್ಚಿಸುತ್ತೇನೆ.**
> **- ಡಾ. ಬಸವರಾಜ ಬಳ್ಳಾರಿ,**
> ರಾಜ್ಯ ಉಪಾಧ್ಯಕ್ಷ, ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘ

### ಅರುಣೋದಯ ವಿಶೇಷ ಶಾಲೆಯಲ್ಲಿ ಪಾಲಕರಿಗೆ ನಡೆದ ಅರಿವು ಕಾರ್ಯಕ್ರಮ

# ವಿಶೇಷ ಮಕ್ಕಳ ಬೆಳವಣಿಗೆಗೆ ಪಾಲಕರ ಪಾತ್ರ ಮಹತ್ವದ್ದು




**ವಿಜಯಸಾಕ್ಷಿ ಸುದ್ದಿ, ಗದಗ**

ವಿಶೇಷಚೇತನ ಮಕ್ಕಳು ಸಮಾಜದ ಅಮೂಲ್ಯ ಸಂಪತ್ತಾಗಿದ್ದು, ಅವರ ಶೈಕ್ಷಣಿಕ ಬೆಳವಣಿಗೆ ಹಾಗೂ ಸ್ವಾವಲಂಬಿ ಬದುಕು ರೂಪಿಸುವಲ್ಲಿ ಪಾಲಕರ ಪಾತ್ರ ಅತ್ಯಂತ ಮಹತ್ವದ್ದಾಗಿದೆ ಎಂದು ಸಂಪನ್ಮೂಲ ವ್ಯಕ್ತಿ ಕವಿತಾ ದಂಡಿನ ಹೇಳಿದರು.

ನಗರದ ಸೇವಾಭಾರತಿ ಸಂಸ್ಥೆಯ ಅರುಣೋದಯ ವಿಶೇಷ ಅಗತ್ಯತೆವುಳ್ಳ ಮಕ್ಕಳ ಶಾಲೆಯಲ್ಲಿ ಆಯೋಜಿಸಿದ್ದ ವಿಶೇಷ ಮಕ್ಕಳ ಪಾಲಕರ ಅರಿವು ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

ವಿಶೇಷಚೇತನ ಮಕ್ಕಳಲ್ಲಿ ಆತ್ಮವಿಶ್ವಾಸ ಬೆಳೆಸಲು ಪ್ರೀತಿ, ತಾಳ್ಮೆ ಮತ್ತು ನಿರಂತರ ಪ್ರೋತ್ಸಾಹ ಅಗತ್ಯ. ಸರಿಯಾದ ಶಿಕ್ಷಣ, ಆರೈಕೆ ಹಾಗೂ ವೈದ್ಯರ ಸಲಹೆಯಂತೆ ಚಿಕಿತ್ಸೆ ನೀಡಿದರೆ ಅವರು ಜೀವನದಲ್ಲಿ ಉತ್ತಮ ಸಾಧನೆ ಮಾಡಬಲ್ಲರು ಎಂದು ತಿಳಿಸಿದರು.

ಅತಿಥಿಯಾಗಿ ಆಗಮಿಸಿದ್ದ ಶಿಕ್ಷಕಿ ನಂದಾದೇವಿ ಗಿರಡ್ಡಿ ತಮ್ಮ ಪುತ್ರಿಯರಾದ ವೇದಾ ಮತ್ತು ನಂದಿತಾ ಅವರ ಜನ್ಮದಿನವನ್ನು ವಿಶೇಷ ಮಕ್ಕಳೊಂದಿಗೆ ಆಚರಿಸಿ, ಎಲ್ಲರಿಗೂ ಸಿಹಿಭೋಜನ ವಿತರಿಸಿದರು.

ನಂದಾದೇವಿ ಮಾತನಾಡಿ, ವಿಶೇಷ ಮಕ್ಕಳು ಸಾಮಾನ್ಯ ಮಕ್ಕಳಂತೆ ಸಮಾಜದ ಮುಖ್ಯವಾಹಿನಿಯಲ್ಲಿ ಬದುಕುವಂತಾಗಲು ಎಲ್ಲರ ಸಹಕಾರ ಅಗತ್ಯ. ತಮ್ಮ ಮಕ್ಕಳಿಗಾಗಿ ಹಗಲಿರುಳು ಶ್ರಮಿಸುವ ಪಾಲಕರೇ ಅವರ ನಿಜವಾದ ಶಕ್ತಿ ಎಂದು ಹೇಳಿದರು.

ಶಾಲಾ ಆಡಳಿತ ಮಂಡಳಿ ಅಧ್ಯಕ್ಷ ಲುಕ್ಕಣಸಾ ರಾಜೋಳಿ ಮಾತನಾಡಿ, ವಿಶೇಷ ಮಕ್ಕಳೊಂದಿಗೆ ಜನ್ಮದಿನ ಆಚರಿಸುವಂತಹ ಸಾಮಾಜಿಕ ಕಳಕಳಿಯ ಕಾರ್ಯಗಳು ಸಮಾಜಕ್ಕೆ ಉತ್ತಮ ಸಂದೇಶ ನೀಡುತ್ತವೆ ಎಂದು ಮೆಚ್ಚುಗೆ ವ್ಯಕ್ತಪಡಿಸಿದರು.

ಕಾರ್ಯಕ್ರಮದಲ್ಲಿ ಕವಿತಾ ದಂಡಿನ ಅವರು ವಿವಿಧ ಚಟುವಟಿಕೆಗಳ ಮೂಲಕ ಮಕ್ಕಳಿಗೆ ಮನರಂಜನೆ ನೀಡಿದರು. ಪಾಲಕರು ಸಹ ಉತ್ಸಾಹದಿಂದ ಭಾಗವಹಿಸಿ ಸಂತಸ ವ್ಯಕ್ತಪಡಿಸಿದರು.

ವೇದಿಕೆಯಲ್ಲಿ ಆಡಳಿತ ಮಂಡಳಿ ಸದಸ್ಯ ಬಸವರಾಜ ಪಟ್ಟಣಶೆಟ್ಟಿ, ಸಂಪನ್ಮೂಲ ವ್ಯಕ್ತಿ ಶಶಿಧರ ಚಳಗೇರಿ, ಶ್ರೀನಿವಾಸ ರಡ್ಡಿ ಉಪಸ್ಥಿತರಿದ್ದರು. ಕಾರ್ಯದರ್ಶಿ ಜಯರಾಜ ಮುಳಗುಂದ ಸ್ವಾಗತಿಸಿದರು. ಮುಖ್ಯೋಪಾಧ್ಯಾಯ ಮಲ್ಲಪ್ಪ ಹಕ್ಕಿ ಕಾರ್ಯಕ್ರಮ ನಿರೂಪಿಸಿ ವಂದಿಸಿದರು.

ಶಿಕ್ಷಕರಾದ ಜಗದೀಶ ಹಡಪದ, ಜಯಶ್ರೀ ಭಾವರೆ, ಸುರೇಶ ಹಾದಿ, ಸಿಬ್ಬಂದಿಗಳಾದ ಮಲ್ಲಿಕಾರ್ಜುನ ನಾಗಲಾಪೂರ, ರೇಣುಕಾ ದಾಸರ, ವೀಣಾ ಕೊಲ್ಲಾಪುರೆ ಹಾಗೂ ಪಾಲಕರು ಕಾರ್ಯಕ್ರಮದಲ್ಲಿ ಭಾಗವಹಿಸಿದ್ದರು.

> **ವಿಶೇಷಚೇತನ ಮಕ್ಕಳಿಗೆ ಪ್ರೀತಿ, ತಾಳ್ಮೆ ಮತ್ತು ನಿರಂತರ ಪ್ರೋತ್ಸಾಹ ನೀಡಿದರೆ ಅವರಲ್ಲಿ ಆತ್ಮವಿಶ್ವಾಸ ಬೆಳೆದು ಜೀವನದಲ್ಲಿ ಸಾಧನೆ ಮಾಡಲು ಸಾಧ್ಯವಾಗುತ್ತದೆ.**
> **- ಕವಿತಾ ದಂಡಿನ, ಸಂಪನ್ಮೂಲ ವ್ಯಕ್ತಿ**

# ಗದಗದ ಸಂಕಲ್ಪಕ್ಕೆ ಜಾಗತಿಕ ಗೌರವ




**ವಿಜಯಸಾಕ್ಷಿ ಸುದ್ದಿ, ಬೆಂಗಳೂರು**

ಜಲ ನಿರ್ವಹಣೆ ಮತ್ತು ಸುಸ್ಥಿರ ಗ್ರಾಮೀಣ ಅಭಿವೃದ್ಧಿ ಕ್ಷೇತ್ರದಲ್ಲಿ ಸಲ್ಲಿಸಿರುವ ಗಮನಾರ್ಹ ಸೇವೆಗಾಗಿ ಸಂಕಲ್ಪ ಗ್ರಾಮೀಣ ಅಭಿವೃದ್ಧಿ ಸಂಸ್ಥೆಗೆ ಪ್ರತಿಷ್ಠಿತ Global CSR Sustainability Excellence Award ಪ್ರದಾನ ಮಾಡಲಾಗಿದೆ. ಕರ್ನಾಟಕ ವಾಣಿಜ್ಯ ಮತ್ತು ಕೈಗಾರಿಕಾ ಮಹಾಸಂಸ್ಥೆ (FKCCI) ವತಿಯಿಂದ ಬೆಂಗಳೂರಿನಲ್ಲಿ ಆಯೋಜಿಸಿದ್ದ Global CSR Sustainability Awards ಸಮಾರಂಭದಲ್ಲಿ ಜಲ ನಿರ್ವಹಣಾ ಕ್ಷೇತ್ರದಲ್ಲಿನ ಅತ್ಯುತ್ತಮ ಸಾಧನೆಗಾಗಿ ಈ ಪ್ರಶಸ್ತಿಯನ್ನು ನೀಡಿ ಗೌರವಿಸಲಾಯಿತು.

ಸಂಸ್ಥೆಯ ಸಂಸ್ಥಾಪಕ ಹಾಗೂ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಸಿಕಂದರ್ ಮೀರಾನಾಯಕ್ ಅವರು ಸಂಸ್ಥೆಯ ಪ್ರಧಾನ ಲೆಕ್ಕಾಧಿಕಾರಿ ಉಮೇಶ್ ಮುಗಳಿ ಅವರೊಂದಿಗೆ ಪ್ರಶಸ್ತಿಯನ್ನು ಸ್ವೀಕರಿಸಿದರು.

ಕಾರ್ಯಕ್ರಮವನ್ನು ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಉದ್ಘಾಟಿಸಿದರು. ದಾವಣಗೆರೆ ಲೋಕಸಭಾ ಕ್ಷೇತ್ರದ ಸಂಸದೆ ಪ್ರಭಾ ಮಲ್ಲಿಕಾರ್ಜುನ ವಿವಿಧ ಕ್ಷೇತ್ರಗಳಲ್ಲಿ ಸಾಧನೆ ಮಾಡಿದ ಸಂಸ್ಥೆಗಳಿಗೆ ಪ್ರಶಸ್ತಿಗಳನ್ನು ಪ್ರದಾನ ಮಾಡಿದರು. ಎಫ್‌ಕೆಸಿಸಿಐ ಅಧ್ಯಕ್ಷೆ ಉಮಾ ರೆಡ್ಡಿ ಸೇರಿದಂತೆ ಕೈಗಾರಿಕೆ, ವಾಣಿಜ್ಯ ಹಾಗೂ ಸಾಮಾಜಿಕ ಕ್ಷೇತ್ರದ ಅನೇಕ ಗಣ್ಯರು ಕಾರ್ಯಕ್ರಮದಲ್ಲಿ ಉಪಸ್ಥಿತರಿದ್ದರು.

ಸಂಕಲ್ಪ ಗ್ರಾಮೀಣ ಅಭಿವೃದ್ಧಿ ಸಂಸ್ಥೆಗೆ ದೊರೆತ ಈ ರಾಷ್ಟ್ರೀಯ ಮಟ್ಟದ ಗೌರವವು ಖಆಐ ಫೌಂಡೇಶನ್ ಸಹಯೋಗದಲ್ಲಿ ಯಶಸ್ವಿಯಾಗಿ ಅನುಷ್ಠಾನಗೊಳ್ಳುತ್ತಿರುವ ಟರೈತ ಬಂಧುಟ ಯೋಜನೆಯಡಿ ಜಲ ಸಂರಕ್ಷಣೆ, ಸುಸ್ಥಿರ ಕೃಷಿ ಹಾಗೂ ಗ್ರಾಮೀಣ ಜೀವನೋಪಾಯ ವೃದ್ಧಿಗಾಗಿ ಕೈಗೊಂಡ ಪರಿಣಾಮಕಾರಿ ಕಾರ್ಯಗಳಿಗೆ ಸಂದ ಮಾನ್ಯತೆಯಾಗಿದೆ.

ಕಾರ್ಯಕ್ರಮದಲ್ಲಿ SBI ಫೌಂಡೇಶನ್ ಅಧ್ಯಕ್ಷ ಹಾಗೂ ಸಿಒಒ ಪ್ರತ್ಯುಷ್ ಮೆಹರೋತ್ರಾ, ಡಿಜಿಎಂ ಮತ್ತು ಸಿಡಿಒ ರಾಜೇಶ್ ಕುಮಾರ್ ಚೌಧರಿ, ಸಿಒಒ ಸಿದ್ದಲಿಂಗೇಶ ಬಿ., ಡಿಎಂ ಕಿರಣ ಘೋರಪಡೆ ಸೇರಿದಂತೆ ಅಧಿಕಾರಿಗಳು ಸಂಸ್ಥೆಯ ಕಾರ್ಯವನ್ನು ಶ್ಲಾಘಿಸಿದರು. ಈ ಸಂದರ್ಭದಲ್ಲಿ ಸಂಸ್ಥೆಯು ಫೌಂಡೇಶನ್, ಯೋಜನೆಯ ಅನುಷ್ಠಾನಕ್ಕೆ ಸಹಕರಿಸಿದ ರೈತರು, ಗ್ರಾಮಸ್ಥರು, ದಾನಿಗಳು, ಸಹಭಾಗಿತ್ವ ಸಂಸ್ಥೆಗಳು ಹಾಗೂ ಸಿಬ್ಬಂದಿಗೆ ಕೃತಜ್ಞತೆ ಸಲ್ಲಿಸಿತು.

> **ಜಲ ಸಂರಕ್ಷಣೆ ಮತ್ತು ಸುಸ್ಥಿರ ಗ್ರಾಮೀಣ ಅಭಿವೃದ್ಧಿಗಾಗಿ ನಮ್ಮ ತಂಡದ ಸಮರ್ಪಿತ ಕಾರ್ಯಕ್ಕೆ ದೊರೆತ ಈ ರಾಷ್ಟ್ರೀಯ ಮಟ್ಟದ ಗೌರವ ಇನ್ನಷ್ಟು ಜವಾಬ್ದಾರಿಯಿಂದ ಸೇವೆ ಸಲ್ಲಿಸಲು ಪ್ರೇರಣೆ ನೀಡಿದೆ.**
> **- ಸಿಕಂದರ್ ಮೀರಾನಾಯಕ್,**
> ಸಂಸ್ಥಾಪಕ ಮತ್ತು ಸಿಇಒ, ಸಂಕಲ್ಪ ಗ್ರಾಮೀಣ ಅಭಿವೃದ್ಧಿ ಸಂಸ್ಥೆ

# ತುಂತುರು ಮಳೆಯಲ್ಲಿ ಮಕ್ಕಳ ಸಂಭ್ರಮ



**ವಿಜಯಸಾಕ್ಷಿ ಸುದ್ದಿ, ಗದಗ**

ಗದಗ ತಾಲೂಕಿನ ಹಾತಲಗೇರಿಯ ಶ್ರೀ ಮಹೇಶಕುಮಾರ ಬೇಲೇರಿ ಪೂರ್ವ ಪ್ರಾಥಮಿಕ ಆಂಗ್ಲ ಮಾಧ್ಯಮ ಶಾಲೆಯಲ್ಲಿ ಟಅಂಬ್ರೆಲಾ ಡೇಟವನ್ನು ಸಂಭ್ರಮದಿಂದ ಆಚರಿಸಲಾಯಿತು.

ಈ ಸಂದರ್ಭದಲ್ಲಿ ಪುಟಾಣಿಗಳು ತುಂತುರು ಮಳೆ ಹನಿಯಲ್ಲಿ ಛತ್ರಿ ಹಿಡಿದು ಟಮಳೆಬಿಲ್ಲೆ.. ಮಳೆಬಿಲ್ಲೆ..ಟ ಹಾಗೂ ಟಸ್ವಾತಿ ಮುತ್ತಿನ ಮಳೆ ಹನಿಯೇ..ಟ ಹಾಡುಗಳಿಗೆ ನೃತ್ಯ ಮಾಡಿ ಸಂಭ್ರಮಿಸಿದರು. ಕಾರ್ಯಕ್ರಮದ ಮೂಲಕ ಮಕ್ಕಳಿಗೆ ಮಳೆಗಾಲದ ವೈಶಿಷ್ಟ್ಯ ಹಾಗೂ ಪ್ರಕೃತಿಯ ಸೊಬಗನ್ನು ಪರಿಚಯಿಸಲಾಯಿತು.

ಕಾರ್ಯಕ್ರಮದಲ್ಲಿ ಶಾಲೆಯ ಶಿಕ್ಷಕಿಯರಾದ ಪಾರ್ವತಿ ಕಟ್ಟಿಮನಿ, ಪುಷ್ಪಾ ಮೇಲ್ಮನಿ ಹಾಗೂ ವಿದ್ಯಾರ್ಥಿಗಳು ಭಾಗವಹಿಸಿದ್ದರು.

### ಧರ್ಮದ ದಾರಿಯೇ ಬದುಕಿಗೆ ಬೆಳಕು; ಮಾನವೀಯ ಮೌಲ್ಯಗಳನ್ನು ಉಳಿಸಿಕೊಳ್ಳುವಂತೆ ಶ್ರೀ ರಂಭಾಪುರಿ ಜಗದ್ಗುರುಗಳ ಕಿವಿಮಾತು

# ಸಂಪತ್ತು ಹೆಚ್ಚಾದರೂ ಸಂಬಂಧಗಳು ಸಾಯಬಾರದು!



**ವಿಜಯಸಾಕ್ಷಿ ಸುದ್ದಿ, ಹಗರಿಬೊಮ್ಮನಹಳ್ಳಿ**

ಸಂಪತ್ತು, ಸ್ಥಾನಮಾನ ಮತ್ತು ಐಶ್ವರ್ಯ ಹೆಚ್ಚಾದಂತೆ ಸಮಾಜದಲ್ಲಿ ಮಾನವೀಯ ಸಂಬಂಧಗಳು ಸಡಿಲಗೊಳ್ಳಬಾರದು. ಧರ್ಮದ ಆಚರಣೆಯೇ ಸಂತೃಪ್ತಿ, ಸಮೃದ್ಧಿ ಹಾಗೂ ಮೋಕ್ಷದ ಮಾರ್ಗವಾಗಿದ್ದು, ಮನುಷ್ಯನ ಬದುಕಿಗೆ ನೈತಿಕ ಮೌಲ್ಯಗಳೇ ನಿಜವಾದ ಆಧಾರ ಎಂದು ಬಾಳೆಹೊನ್ನೂರಿನ ಶ್ರೀ ರಂಭಾಪುರಿ ವೀರಸಿಂಹಾಸನ ಮಹಾಸಂಸ್ಥಾನ ಪೀಠದ ಜಗದ್ಗುರು ಡಾ. ವೀರಸೋಮೇಶ್ವರ ಶಿವಾಚಾರ್ಯರು ಹೇಳಿದರು.

ನಗರದ ಶ್ರೀ ಕನ್ಯಕಾ ಪರಮೇಶ್ವರಿ ಕಲ್ಯಾಣ ಮಂಟಪದಲ್ಲಿ ಶನಿವಾರ ನಡೆದ ವೀರಶೈವ ಜಂಗಮ ಕ್ಷೇಮಾಭಿವೃದ್ಧಿ ಸಂಘದ ನೂತನ ಪದಾಧಿಕಾರಿಗಳ ಪದಗ್ರಹಣ ಸಮಾರಂಭದಲ್ಲಿ ಸಾನ್ನಿಧ್ಯ ವಹಿಸಿ ಆಶೀರ್ವಚನ ನೀಡಿದ ಅವರು, ಧರ್ಮದ ಮಾರ್ಗದಲ್ಲಿ ನಡೆಯುವವರಿಗೆ ಜೀವನದಲ್ಲಿ ಸಂತೃಪ್ತಿ ಹಾಗೂ ನೆಮ್ಮದಿ ಲಭಿಸುತ್ತದೆ. ಪರಿಶ್ರಮವಿಲ್ಲದೆ ಯಶಸ್ಸು ಸಾಧ್ಯವಿಲ್ಲ. ಆಡಿದ ಮಾತಿಗೆ ಬದ್ಧರಾಗಿ ಬದುಕುವುದೇ ನಿಜವಾದ ಧರ್ಮ ಎಂದು ತಿಳಿಸಿದರು.

ಸಾಮಾಜಿಕ ಸಂಪ್ರದಾಯಗಳು ಕಾಲಕ್ಕೆ ತಕ್ಕಂತೆ ಬದಲಾಗಬಹುದು. ಆದರೆ ನೈತಿಕ ಮೌಲ್ಯಗಳು ಎಂದಿಗೂ ಬದಲಾಗುವುದಿಲ್ಲ. ಇತಿಹಾಸವನ್ನು ಅಳಿಸಲು ಸಾಧ್ಯವಿಲ್ಲ. ಬಿತ್ತಿದ ಬೀಜಕ್ಕೆ ತಕ್ಕಂತೆ ಫಲ ದೊರೆಯುವಂತೆ, ನಮ್ಮ ಆಚರಣೆಗೆ ತಕ್ಕ ಪ್ರತಿಫಲ ಜೀವನದಲ್ಲಿ ಸಿಗುತ್ತದೆ ಎಂದು ಹೇಳಿದರು.

ಯುವಜನತೆ ದೇಶದ ಅಮೂಲ್ಯ ಸಂಪತ್ತಾಗಿದ್ದು, ಅವರಲ್ಲಿ ವೈಚಾರಿಕತೆ ಬೆಳೆಯಬೇಕು. ಆದರೆ ನಾಸ್ತಿಕ ಮನೋಭಾವ ಬೆಳೆಯಬಾರದು. ವೀರಶೈವ ಧರ್ಮದಲ್ಲಿ ಜಂಗಮರ ಪಾತ್ರ ಅತ್ಯಂತ ಮಹತ್ವದ್ದಾಗಿದ್ದು, ಧರ್ಮ, ಸಂಸ್ಕೃತಿ ಹಾಗೂ ಮೌಲ್ಯಗಳನ್ನು ಉಳಿಸಿ ಬೆಳೆಸುವ ನಿಟ್ಟಿನಲ್ಲಿ ಜಂಗಮ ಕ್ಷೇಮಾಭಿವೃದ್ಧಿ ಸಂಘ ಕಾರ್ಯನಿರ್ವಹಿಸಬೇಕು ಎಂದು ಕರೆ ನೀಡಿದರು.

ಕಾರ್ಯಕ್ರಮ ಉದ್ಘಾಟಿಸಿದ ಶಾಸಕ ನೇಮಿರಾಜ ನಾಯ್ಕ ಮಾತನಾಡಿ, ಮನುಷ್ಯನಿಗೆ ಮನುಷ್ಯನೇ ಆಧಾರ. ಸಮಾಜದಲ್ಲಿ ಕರುಣೆ, ಮಾನವೀಯತೆ ಮತ್ತು ಪರೋಪಕಾರದ ಮನೋಭಾವ ಬೆಳೆಸುವ ಕಾರ್ಯವನ್ನು ಸಂಘಗಳು ಮಾಡಬೇಕು ಎಂದು ಹೇಳಿದರು.

ಹರಿಹರದ ಮಾಜಿ ಶಾಸಕ ಎಚ್.ಎಸ್. ಶಿವಶಂಕರ ಮಾತನಾಡಿ, ವೀರಶೈವ-ಲಿಂಗಾಯತ ಸಮಾಜದ ಎಲ್ಲ ಒಳಪಂಗಡಗಳು ಒಗ್ಗಟ್ಟಿನಿಂದ ಸಾಗಿದಾಗ ಮಾತ್ರ ಸಮಾಜ ಇನ್ನಷ್ಟು ಸದೃಢವಾಗಲಿದೆ ಎಂದು ಅಭಿಪ್ರಾಯಪಟ್ಟರು.

ಮರಿಯಮ್ಮನಹಳ್ಳಿ ಮಲ್ಲಿಕಾರ್ಜುನ ಶಿವಾಚಾರ್ಯರು, ಉತ್ತಂಗಿ ಸೋಮಶೇಖರ ಶ್ರೀಗಳು, ಚಾನುಕೋಟಿಮಠದ ಡಾ. ಸಿದ್ಧಲಿಂಗ ಶಿವಾಚಾರ್ಯರು, ಕೊಟ್ಟೂರು ಯೋಗಿರಾಜೇಂದ್ರ ಶಿವಾಚಾರ್ಯರು, ಅಡವಿಹಳ್ಳಿ ಹಾಲುಸ್ವಾಮಿಗಳು, ಗದ್ದಿಕೆರೆ ಚರಂತೇಶ್ವರ ಶಿವಾಚಾರ್ಯರು ಸೇರಿದಂತೆ ಹಲವರು ಕಾರ್ಯಕ್ರಮದಲ್ಲಿ ಭಾಗವಹಿಸಿದ್ದರು.

ವೀರಶೈವ ಜಂಗಮ ಕ್ಷೇಮಾಭಿವೃದ್ಧಿ ಸಂಘದ ಅಧ್ಯಕ್ಷ ಜಿ.ಎಂ. ಜಗದೀಶ ಪ್ರಾಸ್ತಾವಿಕವಾಗಿ ಮಾತನಾಡಿದರು. ಡಾ. ಬಿ.ಎಚ್. ವಿಶ್ವನಾಥ, ಇಂದುಮತಿ ತಿಪ್ಪೇಸ್ವಾಮಿ ಸೇರಿದಂತೆ ಸಂಘದ ಪದಾಧಿಕಾರಿಗಳು, ಗಣ್ಯರು ಹಾಗೂ ಭಕ್ತರು ಉಪಸ್ಥಿತರಿದ್ದರು.

ಇದಕ್ಕೂ ಮುನ್ನ ಹಗರಿಬೊಮ್ಮನಹಳ್ಳಿ ಹಾಲುಸ್ವಾಮಿ ಮಠದ ಆವರಣದಲ್ಲಿ ನಿರ್ಮಾಣಗೊಳ್ಳಲಿರುವ ಶ್ರೀ ಜಗದ್ಗುರು ರೇಣುಕಾಚಾರ್ಯ ವೃತ್ತಕ್ಕೆ ಶ್ರೀ ರಂಭಾಪುರಿ ಜಗದ್ಗುರುಗಳ ಸಾನ್ನಿಧ್ಯದಲ್ಲಿ ಶಾಸಕ ನೇಮಿರಾಜ ನಾಯ್ಕ ಶಿಲಾನ್ಯಾಸ ನೆರವೇರಿಸಿದರು.


> **ಸಂಪತ್ತು ಹೆಚ್ಚಾಗುವುದು ತಪ್ಪಲ್ಲ, ಆದರೆ ಅದರೊಂದಿಗೆ ಮಾನವೀಯ ಸಂಬಂಧಗಳು ಕುಸಿಯಬಾರದು. ಧರ್ಮ, ನೈತಿಕತೆ ಮತ್ತು ಮಾನವೀಯ ಮೌಲ್ಯಗಳೇ ಸಮಾಜವನ್ನು ಉಳಿಸುವ ನಿಜವಾದ ಸಂಪತ್ತು.**
> **- ಶ್ರೀ ರಂಭಾಪುರಿ ಜಗದ್ಗುರು ಡಾ. ವೀರಸೋಮೇಶ್ವರ ಶಿವಾಚಾರ್ಯರು**

### ಗಂಡಾಂತರ ಗರ್ಭಿಣಿಯರ ನಿರಂತರ ಆರೋಗ್ಯ ತಪಾಸಣೆ ಯಿಂದ ತಾಯಿ-ಶಿಶು ಮರಣ ತಡೆ ಸಾಧ್ಯ: ಕೆ.ಎ. ಹಾದಿಮನಿ

# ಅಪಾಯದ ಗರ್ಭಧಾರಣೆ ನಿರ್ಲಕ್ಷ್ಯ ಬೇಡ!

**ವಿಜಯಸಾಕ್ಷಿ ಸುದ್ದಿ, ನರೇಗಲ್ಲ**

ಗಂಡಾಂತರ (ಹೈ-ರಿಸ್ಕ್) ಗರ್ಭಿಣಿಯರನ್ನು ಆರಂಭದಲ್ಲಿಯೇ ಗುರುತಿಸಿ, ಅವರಿಗೆ ನಿರಂತರ ಆರೋಗ್ಯ ತಪಾಸಣೆ ಹಾಗೂ ಸೂಕ್ತ ವೈದ್ಯಕೀಯ ಸೇವೆ ಒದಗಿಸಿದರೆ ತಾಯಿ ಮತ್ತು ಶಿಶು ಮರಣವನ್ನು ಪರಿಣಾಮಕಾರಿಯಾಗಿ ತಡೆಗಟ್ಟಬಹುದು ಎಂದು ಕ್ಷೇತ್ರ ಆರೋಗ್ಯ ಶಿಕ್ಷಣಾಧಿಕಾರಿ ಕೆ.ಎ. ಹಾದಿಮನಿ ಹೇಳಿದರು. ಸಮೀಪದ ನಿಡಗುಂದಿ ಪ್ರಾಥಮಿಕ ಆರೋಗ್ಯ ಕೇಂದ್ರದಲ್ಲಿ ರಾಷ್ಟ್ರೀಯ ಆರೋಗ್ಯ ಅಭಿಯಾನದಡಿ ಆಯೋಜಿಸಿದ್ದ ಪ್ರಧಾನಮಂತ್ರಿ ಸುರಕ್ಷಿತ ಮಾತೃತ್ವ ಅಭಿಯಾನ (ಕಙಖಿಙಅ) ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು. ಗರ್ಭಧಾರಣೆಯ ಅವಧಿಯಲ್ಲಿ ಕೆಲ ಮಹಿಳೆಯರಲ್ಲಿ ಅಧಿಕ ರಕ್ತದೊತ್ತಡ, ರಕ್ತಹೀನತೆ, ಗರ್ಭಾವಸ್ಥೆಯ ಮಧುಮೇಹ, ಭ್ರೂಣದ ಬೆಳವಣಿಗೆಯ ಸಮಸ್ಯೆ ಸೇರಿದಂತೆ ವಿವಿಧ ಆರೋಗ್ಯ ತೊಂದರೆಗಳು ಕಾಣಿಸಿಕೊಳ್ಳುವ ಸಾಧ್ಯತೆ ಇರುತ್ತದೆ. ಇಂತಹ ಗರ್ಭಿಣಿಯರನ್ನು ಗಂಡಾಂತರ ಗರ್ಭಿಣಿಯರೆಂದು ಗುರುತಿಸಿ ವಿಶೇಷ ವೈದ್ಯಕೀಯ ಮೇಲ್ವಿಚಾರಣೆಯಲ್ಲಿ



ಇರಿಸಲಾಗುತ್ತದೆ. ಸಮಯಕ್ಕೆ ಸರಿಯಾಗಿ ಚಿಕಿತ್ಸೆ ಮತ್ತು ವೈದ್ಯಕೀಯ ಸಲಹೆ ದೊರೆಯದಿದ್ದರೆ ತಾಯಿ ಹಾಗೂ ಮಗುವಿನ ಆರೋಗ್ಯದ ಮೇಲೆ ಗಂಭೀರ ಪರಿಣಾಮ ಉಂಟಾಗುವ ಸಾಧ್ಯತೆಯಿದೆ ಎಂದು ತಿಳಿಸಿದರು. ಪ್ರಧಾನಮಂತ್ರಿ ಸುರಕ್ಷಿತ ಮಾತೃತ್ವ ಅಭಿಯಾನದ ಉದ್ದೇಶ ಪ್ರತಿಯೊಬ್ಬ ಗರ್ಭಿಣಿಗೂ ಗುಣಮಟ್ಟದ ಉಚಿತ ಆರೋಗ್ಯ ಸೇವೆ, ಅಗತ್ಯ ವೈದ್ಯಕೀಯ ತಪಾಸಣೆ, ಪ್ರಯೋಗಾಲಯ ಪರೀಕ್ಷೆ ಹಾಗೂ ತಜ್ಞ ವೈದ್ಯರ ಸಲಹೆ ಒದಗಿಸಿ ಸುರಕ್ಷಿತ ಹೆರಿಗೆಯನ್ನು ಖಚಿತಪಡಿಸುವುದಾಗಿದೆ. ಗರ್ಭಿಣಿಯರು ಯಾವುದೇ ಆರೋಗ್ಯ ಸಮಸ್ಯೆಯನ್ನು ನಿರ್ಲಕ್ಷಿಸದೆ ನಿಯಮಿತವಾಗಿ ಆರೋಗ್ಯ ತಪಾಸಣೆ ಮಾಡಿಸಿಕೊಳ್ಳಬೇಕು ಎಂದು ಅವರು ಕರೆ ನೀಡಿದರು.

ಹಿರಿಯ ಆರೋಗ್ಯ ನಿರೀಕ್ಷಣಾಧಿಕಾರಿ ಕೆ.ಎ. ಬೂದಿಹಾಳ ಮಾತನಾಡಿ, ಪೌಷ್ಟಿಕ ಆಹಾರ ಸೇವನೆ, ಕಬ್ಬಿಣ ಮತ್ತು ಫೋಲಿಕ್ ಆಮ್ಲದ ಮಾತ್ರೆಗಳ ನಿಯಮಿತ ಸೇವನೆ, ಅಗತ್ಯ ಲಸಿಕೆಗಳನ್ನು ಪಡೆಯುವುದು ಹಾಗೂ ಆಸ್ಪತ್ರೆಯಲ್ಲಿಯೇ ಹೆರಿಗೆ ಮಾಡಿಸಿಕೊಳ್ಳುವುದರಿಂದ ತಾಯಿ ಮತ್ತು ಶಿಶು ಮರಣ ಪ್ರಮಾಣವನ್ನು ಗಣನೀಯವಾಗಿ ತಗ್ಗಿಸಬಹುದು ಎಂದು ಹೇಳಿದರು. ಕಾರ್ಯಕ್ರಮದಲ್ಲಿ ವೈದ್ಯಾಧಿಕಾರಿ ಡಾ. ರೇಖಾ ಹೊಸಮನಿ ಗರ್ಭಿಣಿಯರ ಸಮಗ್ರ ಆರೋಗ್ಯ ತಪಾಸಣೆ ನಡೆಸಿ, ರಕ್ತದೊತ್ತಡ, ಹಿಮೋಗ್ಲೋಬಿನ್ ಸೇರಿದಂತೆ ವಿವಿಧ ಆರೋಗ್ಯ ಪರೀಕ್ಷೆಗಳನ್ನು ಮಾಡಿ ಅಗತ್ಯ ಚಿಕಿತ್ಸೆ ನೀಡಿದರು. ಅಲ್ಲದೆ ಪೌಷ್ಟಿಕ ಆಹಾರ, ವೈಯಕ್ತಿಕ ಸ್ವಚ್ಛತೆ, ಸಮರ್ಪಕ ವಿಶ್ರಾಂತಿ ಹಾಗೂ ಗರ್ಭಾವಸ್ಥೆಯಲ್ಲಿ ಪಾಲಿಸಬೇಕಾದ ಮುನ್ನೆಚ್ಚರಿಕೆಗಳ ಕುರಿತು ಸಲಹೆ ನೀಡಿದರು. ಅಭಿಯಾನದ ಅಂಗವಾಗಿ ಗಂಡಾಂತರ ಗರ್ಭಿಣಿಯರನ್ನು ಗುರುತಿಸಿ ವಿಶೇಷ ಮೇಲ್ವಿಚಾರಣೆ ಕೈಗೊಳ್ಳಲಾಯಿತು. ಅಗತ್ಯ ವಿರುವ ಗರ್ಭಿಣಿಯರನ್ನು ಹೆಚ್ಚಿನ ಚಿಕಿತ್ಸೆಗೆ ಮೇಲ್ದರ್ಜೆಯ ಆಸ್ಪತ್ರೆಗೆ ಉಲ್ಲೇಖಿಸುವ ಕುರಿತು ಆರೋಗ್ಯ ಸಿಬ್ಬಂದಿ ಮಾಹಿತಿ ನೀಡಿದರು. ಕಾರ್ಯಕ್ರಮದಲ್ಲಿ ಆರೋಗ್ಯ ಇಲಾ ಖೆಯ ಎ.ಎಸ್. ಮುದಿಯಜ್ಜನವರ, ಭಾಗ್ಯಲಕ್ಷ್ಮೀ ಅರಿಕೇರಿ, ಸಬೀಹಾ ಅಡ್ವಾಣಿ, ಆಶಾ ಕಾರ್ಯಕರ್ತೆಯರು, ಅಂಗನವಾಡಿ ಕಾರ್ಯಕರ್ತೆಯರು, ಆರೋಗ್ಯ ಸಿಬ್ಬಂದಿ

> **ಗಂಡಾಂತರ ಗರ್ಭಿಣಿಯರನ್ನು ಆರಂಭದಲ್ಲೇ ಗುರುತಿಸಿ ನಿರಂತರ ವೈದ್ಯಕೀಯ ಆರೈಕೆ ನೀಡಿದರೆ ತಾಯಿ ಮತ್ತು ಶಿಶು ಮರಣವನ್ನು ಪರಿಣಾಮಕಾರಿಯಾಗಿ ತಡೆಗಟ್ಟಬಹುದು.**
> **- ಕೆ.ಎ. ಹಾದಿಮನಿ,**
> ಕ್ಷೇತ್ರ ಆರೋಗ್ಯ ಶಿಕ್ಷಣಾಧಿಕಾರಿ

VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka
Printed at : Sai Printing Press, Near Joda Maruti Temple, Gadag-582101, Dist : Gadag- Karnataka